ಸಂಪುಟ: 05 ಸಂಚಿಕೆ: 254 ಪುಟಗಳು: 08 ಶುಕ್ರವಾರ 28 ನವೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಪ್ರತಿಯೊಬ್ಬ ವ್ಯಕ್ತಿಯು ತನ್ನದೇ ಆದ ಶಕ್ತಿಯನ್ನು ಅಥವಾ ಸಾಮರ್ಥ್ಯವನ್ನು ಹೊಂದಿರುತ್ತಾನೆ. ಅದನ್ನು ಜಾಗೃತಗೊಳಿಸುವುದು ಅವಶ್ಯಕವಾಗಿದೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರೈತರ ಖಾತೆಗೆ 1033.60 ಕೋಟಿ ಪರಿಹಾರ; 24 ಗಂಟೆಗಳಲ್ಲಿ ಜಮೆ

• ಉದಯವಾಹಿನಿ, ಬೆಂಗಳೂರು

ಮುಂಗಾರು ಹಂಗಾಮಿನಲ್ಲಾದ ಅತಿವೃಷ್ಟಿಯಿಂದ ಬೆಳೆನಷ್ಟ ಅನುಭವಿಸಿದ 27 ಜಿಲ್ಲೆಗಳ 14.24 ಲಕ್ಷ ರೈತರಿಗೆ ರಾಜ್ಯ ಸರ್ಕಾರ 1,033.60 ಕೋಟಿ ಪರಿಹಾರ ನೀಡಿದ್ದು, ಎಲ್ಲಾ ರೈತರ ಬ್ಯಾಂಕ್ ಖಾತೆಗಳಿಗೆ 24 ಗಂಟೆಗಳಲ್ಲಿ ಈ ಮೊತ್ತ ಜಮೆಯಾಗಲಿದೆ.

ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ರಾಜ್ಯ ವಿಪತ್ತು ನಿರ್ವಹಣಾ ನಿಧಿಯ (ಎಸ್‌ಡಿಆರ್‌ಎಫ್) 1,218 ಕೋಟಿ ಮೊತ್ತದ ಹೊರತಾಗಿ ರಾಜ್ಯ ಸರ್ಕಾರ ಪ್ರತಿ ಹೆಕ್ಟೇರ್‌ಗೆ 8,500 ಹೆಚ್ಚುವರಿ ಪರಿಹಾರ ಘೋಷಿಸಿದೆ. ಈ ವಿಶೇಷ ಪ್ಯಾಕೇಜ್ ವಿತರಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ಚಾಲನೆ ನೀಡಿದರು.

'ಮುಂಗಾರಿನಲ್ಲಿ 82.56 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿತ್ತು. ಜೂನ್‌ನಿಂದ ಸೆಪ್ಟೆಂಬರ್ ಅವಧಿಯಲ್ಲಿನ ಅತಿವೃಷ್ಟಿಯಿಂದ 14.58 ಲಕ್ಷ ಹೆಕ್ಟೇರ್‌ನಲ್ಲಿ ಬೆಳೆ ನಷ್ಟವಾಗಿತ್ತು. 10,748 ಕೋಟಿ ಹಾನಿ ಅಂದಾಜಿಸಲಾಗಿತ್ತು. ಮುಖ್ಯವಾಗಿ ತೊಗರಿ 5.36 ಲಕ್ಷ ಹೆಕ್ಟೇರ್, ಹೆಸರು ಕಾಳು 2.63 ಲಕ್ಷ ಹೆಕ್ಟೇರ್, ಹತ್ತಿ 2.68 ಲಕ್ಷ ಹೆಕ್ಟೇರ್ ಹಾಗೂ ಮೆಕ್ಕೆಜೋಳ 1.21 ಲಕ್ಷ ಹೆಕ್ಟೇರ್ ಹಾನಿಯಾಗಿರುವುದು ಜಂಟಿ ಸಮೀಕ್ಷೆಯಲ್ಲಿ ದೃಢಪಟ್ಟಿತ್ತು' ಎಂದರು.

## ಪರಪ್ಪನ ಅಗ್ರಹಾರ: ಮೊಬೈಲ್, ಸಿಮ್ ಪತ್ತೆ: ಅಧಿಕಾರಿಗಳಿಂದ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ವಿಚಾರಣಾಧೀನ ಕೈದಿಗಳು ಹಾಗೂ ಸಜಾ ಬಂದಿಗಳಿರುವ ವಿವಿಧ ಬ್ಯಾರಕ್‌ಗಳಲ್ಲಿ ಜೈಲಿನ ಸಿಬ್ಬಂದಿ ಬುಧವಾರ ರಾತ್ರಿ ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸಿದರು. ಈ ವೇಳೆ ಮೊಬೈಲ್ ಹಾಗೂ ನಗದು ಪತ್ತೆಯಾಗಿದೆ.ಪರಿಶೀಲನೆಯ ವೇಳೆ ನಾಲ್ಕು ಮೊಬೈಲ್ ಫೋನ್‌ಗಳು. ಐದು ಸಿಮ್ ಕಾರ್ಡ್‌ಗಳು, ಒಂದು ಚಾರ್ಜರ್ ಹಾಗೂ 15,880 ನಗದು ಪತ್ತೆಯಾಗಿದೆ. ಅವುಗಳನ್ನು ಜಪ್ತಿ ಮಾಡಲಾಗಿದೆ ಎಂದು ಕೇಂದ್ರ ಕಾರಾಗೃಹದ ಮೂಲಗಳು ತಿಳಿಸಿವೆ. ಜೈಲಿನ ಸಹಾಯಕ ಸೂಪರಿಂಟೆಂಡೆಂಟ್ ಶಿವಾನಂದ ಶಿವಾಪುರ ಅವರ ನೇತೃತ್ವದ ತಂಡವು ಅಂದು ರಾತ್ರಿ 7.20ರಿಂದ ರಾತ್ರಿ 7.50ರ ವರೆಗೆ ಹಾಗೂ ಜೈಲರ್ ಎಚ್.ಎನ್.ಅಭಿಷೇಕ್ ನೇತೃತ್ವದ ತಂಡವು ಅಂದೇ ರಾತ್ರಿ 10.50ರಿಂದ 11.20ರ ವರೆಗೆ ವಿವಿಧ ಬ್ಯಾರಕ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಿತು. ನಿಷೇಧಿತ ವಸ್ತುಗಳನ್ನು ಸಾಗಿಸಿದವರು. ಕೃತ್ಯಕ್ಕೆ ಸಹಕಾರ ನೀಡಿದವರು ಹಾಗೂ ನಿಷೇಧಿತ ವಸ್ತುಗಳನ್ನು ಕಾರಾಗೃಹದಲ್ಲಿ ಉಪಯೋಗಿಸಿದವರ ವಿರುದ್ಧ ಕಾರಾಗೃಹ (ತಿದ್ದುಪಡಿ) ಅಧಿನಿಯಮ 2022ರ ಕಲಂ 42ರ ಅನ್ವಯ ಪ್ರಕರಣ ದಾಖಲಿಸಿಕೊಂಡು ಕ್ರಮ ಜರುಗಿಸಲು ಪರಪ್ಪನ ಅಗ್ರಹಾರ ಠಾಣೆಗೆ ದೂರು ನೀಡಲಾಗಿದೆ.

## ಪ್ರಾಕ್ಸ್‌ಏರ್‌ನಿಂದ ರೂ.210 ಕೋಟಿ ಹೂಡಿಕೆ: ಎಂ.ಬಿ.ಪಾಟೀಲ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಆಮ್ಲಜನಕ ಮತ್ತು ಸಾರಜನಕ ಉತ್ಪಾದನಾ ಘಟಕ ಆರಂಭಿಸಲು ಬ್ರಿಟನ್ ಪ್ರಾಕ್ಸ್‌ಏರ್ ಇಂಡಿಯಾ ಕಂಪನಿಯು ರೂ.210 ಕೋಟಿ ಹೂಡಿಕೆ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ತಿಳಿಸಿದ್ದಾರೆ.

ಬಂಡವಾಳ ಆಕರ್ಷಣೆಗಾಗಿ ಬ್ರಿಟನ್ ಪ್ರವಾಸದಲ್ಲಿ ಇರುವ ಎಂ.ಬಿ.ಪಾಟೀಲ ಅವರು ಪ್ರಾಕ್ಸ್‌ರ್ ಪ್ರತಿನಿಧಿಗಳ ಜತೆಗೆ ಸಭೆ ನಡೆಸಿದರು. 'ಮೂರು ವರ್ಷಗಳ ಅವಧಿಯಲ್ಲಿ ಹಂತ-ಹಂತವಾಗಿ ರೂ.210 ಕೋಟಿ ಹೂಡಿಕೆ ಮಾಡಲು ಕಂಪನಿಯು ಒಪ್ಪಿಕೊಂಡಿದೆ. ಈ ವರ್ಷದಿಂದಲೇ ಹೂಡಿಕೆ ಆರಂಭಿಸಲಿದೆ. ಘಟಕ ಆರಂಭಕ್ಕೆ ಅಗತ್ಯವಿರುವ ಎಲ್ಲಾ ಅನುಮತಿ, ಸವಲತ್ತು ಮತ್ತು ಭೂಮಿಯನ್ನು ತ್ವರಿತವಾಗಿ ಒದಗಿಸಲಾಗುತ್ತದೆ' ಎಂದು ಮಾಹಿತಿ ನೀಡಿದ್ದಾರೆ. ಕ್ವಿನ್ ಸಿಟಿಯಲ್ಲಿ 'ಯುಕೆ ಟೆಕ್ ಸಿಟಿ' ಸ್ಥಾಪಿಸಲು ಅವಕಾಶವಿದೆ ಎಂಬುದನ್ನು ಬ್ರಿಟನ್‌ನ ಉದ್ಯಮಿಗಳಿಗೆ ತಿಳಿಸಿ ಎಂದು ಕೋರಿದರು.

## ಸಿಎಂ ತವರು ಜಿಲ್ಲೆಯಲ್ಲೇ 'ಮೈಸೂರು ಬ್ರಾಂಡ್' ಗಾಂಜಾ ಜನಪ್ರಿಯ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ವಕ್ಷೇತ್ರ ವರುಣಾದಲ್ಲಿ ಶಾಲಾ ಮಕ್ಕಳು ಶೌಚಾಲಯಗಳನ್ನು ಸ್ವಚ್ಛ ಮಾಡುವುದು ವರದಿ ಆದ ಬೆನ್ನಲ್ಲೇ 'ಮೈಸೂರು ಬ್ರಾಂಡ್ ಗಾಂಜಾ', 'ಮೈಸೂರು ಮ್ಯಾಂಗೋ' ಹಾಗೂ 'ಮೈಸೂರು ಕುಶ್' ಈಗ ಸಾಕಷ್ಟು ಬೇಡಿಕೆಯಲ್ಲಿವೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ವಾಗ್ದಾಳಿ ನಡೆಸಿದ್ದಾರೆ. ಹೋದವಾರವಷ್ಟೇ, ಡ್ರಗ್ಸ್ ದಂಧೆಯನ್ನು ಬುಡ ಸಮೇತ ತೆಗೆದು ಹಾಕುತ್ತೇವೆ ಎಂದು ಹೇಳಿದ್ದ ಸಿಎಂ ಸಿದ್ದರಾಮಯ್ಯ ಅವರ ಜಿಲ್ಲೆಯಲ್ಲೇ 'ಮೈಸೂರು ಬ್ರಾಂಡ್' ಗಾಂಜಾ ಜನಪ್ರಿಯವಾಗಿದೆ ಎಂದು ಯತ್ನಾಳ ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

'ಕುರ್ಚಿ ಕುಸ್ತಿ'ಯಲ್ಲಿ, 'ನವೆಂಬರ್ ಕ್ರಾಂತಿ'ಯ ನಡುವೆ ಆಡಳಿತ ಹಾಗೂ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ತಾವು ಪ್ರತಿನಿಧಿಸುವ ಕ್ಷೇತ್ರದಲ್ಲೇ ಹತ್ತು ಹಲವು ಸಮಸ್ಯೆಗಳನ್ನು ಬಗೆಹರಿಸಲು ಸಿದ್ದರಾಮಯ್ಯ ವಿಫಲರಾಗಿದ್ದಾರೆ ಎಂದು ಯತ್ನಾಳ ಕಿಡಿಕಾರಿದ್ದಾರೆ.

# ಸಿದ್ದು-ಡಿಕೆಶಿ Tweet ಸಿಎಂ ಕುರ್ಚಿಗಾಗಿ fight

## ಬೀದಿಗೆ ಬಿದ್ದ ಕುರ್ಚಿ ಕದನ ಕುರ್ಚಿಗಾಗಿ ಬಣ ಬಡಿದಾಟ



ನಾನು ಜಗತ್ತಿಗೆ ಉತ್ತಮವಾದ ಹೊರತು ಅದು ಶಕ್ತಿಯಲ್ಲ

## ನೇರಾನೇರ ಗುದ್ದಾಟಕ್ಕೆ ಇಳಿದ್ರಾ ಸಿದ್ದರಾಮಯ್ಯ, ಡಿಕೆಶಿ

**ಜನಾದೇಶವು 5ವರ್ಷ ಪೂರ್ಣ ಜವಾಬ್ದಾರಿ**

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರ ನಡುವೆ ನಡೆಯುತ್ತಿರುವ ಕುರ್ಚಿ ಕಿತ್ತಾಟ ಈಗ ಬೀದಿಗೆ ಬಂದಿದೆ. ಸಾಮಾಜಿಕ ಜಾಲತಾಣದಲ್ಲಿ ಇಬ್ಬರು ಪರಸ್ಪರ ಪೋಸ್ಟ್ ಮಾಡುವ ಮೂಲಕ ತಿರುಗೇಟು ನೀಡಿದ್ದಾರೆ. ಕೊಟ್ಟ ಮಾತು ಉಳಿಸಿಕೊಳ್ಳುವುದೇ ವಿಶ್ವದಲ್ಲಿರುವ ದೊಡ್ಡ ಶಕ್ತಿ ಎಂದು ಡಿಕೆ ಶಿವಕುಮಾರ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದರು. ಈ ಪೋಸ್ಟ್‌ನಲ್ಲಿ ನೇರವಾಗಿ ಯಾವುದೇ ವ್ಯಕ್ತಿಯನ್ನು ಉಲ್ಲೇಖಿಸದೇ ಇದ್ದರೂ ಸಿದ್ದರಾಮಯ್ಯನವರು ನೀಡಿದ ವಚನವನ್ನು ಉಲ್ಲೇಖಿಸಿಯೇ ಟಾಂಗ್ ನೀಡಿದ್ದರು. ಡಿಕೆ ಶಿವಕುಮಾರ್ ಬೆಳಗ್ಗೆ ಪೋಸ್ಟ್ ಹಾಕಿದರೆ ಸಿಎಂ ಸಿದ್ದರಾಮಯ್ಯನವರು ಸಂಜೆ, ಕರ್ನಾಟಕಕ್ಕೆ ನೀಡಿದ ನಮ್ಮ ಮಾತು ಕೇವಲ ಇದು ಘೋಷಣೆಯಲ್ಲ, ನಮಗೆ ಇದು ಜಗತ್ತನ್ನು ಅರ್ಥೈಸುತ್ತದೆ ಎಂದು ಬರೆದಿದ್ದಾರೆ. ಸಿಎಂ ಸಿದ್ದರಾಮಯ್ಯನವರು ಶಕ್ತಿ ಯೋಜನೆಯನ್ನು ಉಲ್ಲೇಖಿಸಿ ಪೋಸ್ಟ್ ಮಾಡಿದ್ದರೂ ಡಿಕೆ ಶಿವಕುಮಾರ್ ಅವರನ್ನೇ ಉಲ್ಲೇಖಿಸಿಯೇ ತಿರುಗೇಟು ನೀಡಿದ್ದಾರೆ.

**ಟ್ವೀಟ್ ಪೋಸ್ಟ್ ನಾನು ಮಾಡಿಲ್ಲ:** ಕೊಟ್ಟ ಮಾತು ಉಳಿಸಿಕೊಳ್ಳುವುದೇ ವಿಶ್ವದಲ್ಲಿ ದೊಡ್ಡ ಶಕ್ತಿ. ಯಾರೇ ಆಗಲಿ ಕೊಟ್ಟ ಮಾತನ್ನು ಉಳಿಸಿಕೊಳ್ಳಬೇಕು, ಜಡ್ಜ್ ಆಗಲಿ, ಅಧ್ಯಕ್ಷರಾಗಲಿ, ಯಾರೇ ಆಗಿರಲಿ. ನನ್ನನ್ನು ಸೇರಿಸಿ ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು ಎಂದು ಡಿಕೆ ಶಿವಕುಮಾರ್ ಅವರ ಅಧಿಕೃತ ಖಾತೆಯಿಂದ ಟ್ವೀಟ್ ಮಾಡಿದ್ದರು. ಆದರೆ, ಈ ಬಗ್ಗೆ ಮಾಧ್ಯಮಗಳು ಪ್ರಶ್ನೆ ಮಾಡಿದಾಗ ನಾನು ಆ ರೀತಿ ಪೋಸ್ಟ್ ಮಾಡಿಲ್ಲ ಎಂದು ಪ್ರತಿಕ್ರಿಯೆ ನೀಡಿದರು.

**1** ಡಿಕೆ ಶಿವಕುಮಾರ್ - ಸಿದ್ದರಾಮಯ್ಯ ನಡುವೆ ಸಿಎಂ ಕುರ್ಚಿ ಫೈಟ್ ಸಾಮಾಜಿಕ ಜಾಲತಾಣದಲ್ಲಿ ಜೋರು.

**2** ಕೊಟ್ಟ ಮಾತು ಉಳಿಸಿಕೊಳ್ಳುವುದೇ ವಿಶ್ವದಲ್ಲಿ ದೊಡ್ಡ ಶಕ್ತಿ ಎಂದಿದ್ದ ಡಿಕೆ ಶಿವಕುಮಾರ್.

**3** 5 ವರ್ಷ ಜನಾದೇಶ; ನಮ್ಮ ಮಾತು ಕೇವಲ ಘೋಷಣೆಯಲ್ಲ, ಅದೇ ನಮಗೆ ಜಗತ್ತು ಎಂದು ಟ್ವೀಟ್ ಪೋಸ್ಟ್ ಮಾಡಿದ ಸಿಎಂ.

**ಟ್ವೀಟ್ ಪೋಸ್ಟ್ ನಾನು ಮಾಡಿಲ್ಲ:** ಕೊಟ್ಟ ಮಾತು ಉಳಿಸಿಕೊಳ್ಳುವುದೇ ವಿಶ್ವದಲ್ಲಿ ದೊಡ್ಡ ಶಕ್ತಿ ಎಂದಿದ್ದ ಡಿಕೆ ಶಿವಕುಮಾರ್. ಕರ್ನಾಟಕದ ಜನರು ನೀಡಿದ ಜನಾದೇಶವು ಒಂದು ಕ್ಷಣವಲ್ಲ, ಆದರೆ, ಐದು ಪೂರ್ಣ ವರ್ಷಗಳ ಜವಾಬ್ದಾರಿಯಾಗಿದೆ. ನಾನು ಸೇರಿದಂತೆ ಕಾಂಗ್ರೇಸ್ ಪಕ್ಷವು ನಮ್ಮ ಜನರ ಪರವಾಗಿ ಸಹಾನುಭೂತಿ, ಸ್ಥಿರತೆ ಮತ್ತು ಧೈರ್ಯದಿಂದ ನಡೆದುಕೊಳ್ಳುತ್ತಿದೆ. ಕರ್ನಾಟಕಕ್ಕೆ ನಮ್ಮ ಮಾತು ಒಂದು ಘೋಷಣೆಯಲ್ಲ, ಅದೇ ನಮಗೆ ಜಗತ್ತು ಎಂದು ಸಿಎಂ ಟ್ವೀಟ್‌ನಲ್ಲಿ ಬರೆದುಕೊಂಡಿದ್ದಾರೆ.

**ಸಿಎಂ ಸಿದ್ದರಾಮಯ್ಯನವರ ಸಂಪೂರ್ಣ ಟ್ವೀಟ್‌ನ ಏನಿದೆ..?:** ಒಂದು ಮಾತು ಜಗತ್ತನ್ನು ಉತ್ತಮಗೊಳಿಸದ ಹೊರತು ಅದು ಶಕ್ತಿಯಲ್ಲ. ಶಕ್ತಿ ಯೋಜನೆಯು ನಮ್ಮ ರಾಜ್ಯದ ಮಹಿಳೆಯರಿಗೆ 600 ಕೋಟಿಗೂ ಹೆಚ್ಚು ಉಚಿತ ಬಸ್ ಪ್ರಯಾಣವನ್ನು ತಲುಪಿಸಿದೆ. ಸರ್ಕಾರವನ್ನು ರಚಿಸಿದ ಮೊದಲ ತಿಂಗಳಿನಿಂದಲೇ, ನಾವು ನಮ್ಮ ಭರವಸೆಗಳನ್ನು ಕಾರ್ಯರೂಪಕ್ಕೆ ತಂದಿದ್ದೇವೆ. ಪದಗಳಲ್ಲಿ ಅಲ್ಲ, ಕಾರ್ಯದಲ್ಲಿದೆ.

ಶಕ್ತಿ - 600 ಕೋಟಿಗೂ ಹೆಚ್ಚು ಉಚಿತ ಪ್ರವಾಸಗಳು ಪೂರ್ಣವಾಗಿವೆ. ಗೃಹ ಲಕ್ಷ್ಮಿ ಯೋಜನೆಯಲ್ಲಿ 1.24 ಕೋಟಿ ಮಹಿಳಾ ನೇತೃತ್ವದ ಕುಟುಂಬಗಳಿಗೆ ಸಬಲೀಕರಣ, ಯುವ ನಿಧಿ - 3 ಲಕ್ಷಕ್ಕೂ ಹೆಚ್ಚು ಯುವಕರಿಗೆ ಭದ್ರತೆ ಮತ್ತು ಭರವಸೆಯೊಂದಿಗೆ ಬೆಂಬಲ ನೀಡಲಾಗಿದೆ. ಅನ್ನ ಭಾಗ್ಯ 2.0 - 4.08 ಕೋಟಿ ನಾಗರಿಕರಿಗೆ ಆಹಾರ ಭದ್ರತೆ, ಗೃಹ ಜ್ಯೋತಿ - 1.64 ಕೋಟಿ ಕುಟುಂಬಗಳಿಗೆ ಉಚಿತ ವಿದ್ಯುತ್ ನೀಡಲಾಗಿದೆ ಎಂದು ಸಿಎಂ ಪ್ರಸ್ತಾಪ ಮಾಡಿದ್ದಾರೆ.

## ಸಿದ್ದು ಮನೆಯಲ್ಲಿ ಹೈವೋಲ್ಟೇಜ್ ಸಭೆ

ಸತೀಶ್ ಜಾರಕಿಹೊಳಿ ಮನೆಯಿಂದ ಈ ತಂಡ ನೇರವಾಗಿ ಸಿದ್ದರಾಮಯ್ಯ ನಿವಾಸಕ್ಕೆ ತೆರಳಿದೆ. ಸಿದ್ದರಾಮಯ್ಯ ನಿವಾಸದಲ್ಲಿ ಹೈವೋಲ್ಟೇಜ್ ಸಭೆ ನಡೆದಿದೆ. ಅಹಿಂದ ವರ್ಗದ ಸಚಿವರಲ್ಲದೆ ಇತರ ಆಪ್ತ ಸಚಿವರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಈ ಸಭೆ ಸಾಕಷ್ಟು ಕುತೂಹಲ ಕೆರಳಿಸಿದೆ. ಅಹಿಂದ ಬಲ ಸಿದ್ದರಾಮಯ್ಯ ಅವರ ಪರವಾಗಿ ನಿಲ್ಲಿಸುವ ಪ್ರಯತ್ನಕ್ಕೆ ಕೈ ಹಾಕಲಾಗಿದೆ.

## ಡಿಕೆಶಿ ಪೋಸ್ಟ್‌ಗೆ CM ಸಿದ್ದರಾಮಯ್ಯ ಕೌಂಟರ್

### ನಾಯಕತ್ವ ಬದಲಾವಣೆ ಹೈಕಮಾಂಡ್‌ಗೆ ಬಿಟ್ಟಿದ್ದು

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮಾತನಾಡಿ, ನಾಯಕತ್ವ ಬದಲಾವಣೆ ಬಗ್ಗೆ ಹೈ ಕಮಾಂಡ್ ನಾಯಕರೇ ಹೇಳಿದ್ದಾರೆ. ಅವರು ಕರೆದು ಮಾತನಾಡುತ್ತಾರೆ. ರಂಪ ಅಥವಾ ಮತ್ತೊಂದು ಅದರ ಬಗ್ಗೆ ಗೊತ್ತಿಲ್ಲ. ಖರ್ಗೆ ಅವರು ಹಿರಿಯರು ಇದ್ದಾರೆ ಕರೆದು ಮಾತಾಡ್ತೀವಿ ಅಂತ ಹೇಳಿದ್ದಾರೆ ಎಂದರು. ಯಾವಾಗ ಗೊಂದಲಗಳಿಗೆ ತೆರೆ ಬೀಳುತ್ತೆ ಅಂತ ಹೇಳಲು ನಾನ್ಯಾರು. ಹೈ ಕಮಾಂಡ್ ನಾಯಕರು ಹೇಳಿದ್ದಾರೆ ಅಂದರೆ ಆದಷ್ಟು ಬೇಗ ತೆರ ಬೀಳುತ್ತೆ. ಹೈ ಕಮಾಂಡ್ ಏನು ಹೇಳುತ್ತೋ ಅದನ್ನ ಅವರೂ ಕೇಳ್ತಾರೆ ಇವರೂ ಕೇಳ್ತಾರೆ ನಾವೂ ಕೇಳ್ತೀವಿ. ಹೈ ಕಮಾಂಡ್ ನಿರ್ಧಾರಕ್ಕೆ ನಾವು ಬದ್ದ ಎಲ್ಲರೂ ಬದ್ದ ಎಂದರು. ಪವರ್ ಶೇರಿಂಗ್ ವಿಚಾರದ ಬಗ್ಗೆ ನಮಗೆ ಕಲ್ಪನೇನೂ ಇಲ್ಲ. ಮಟ್ಟಕ್ಕೆ ನಾನು ಮಾತನಾಡುವಂತದ್ದೂ ಇಲ್ಲ ಎಂದ ಅವರು, ಡಿಕೆ ಶಿವಕುಮಾರ್ ಪೋಸ್ಟ್ ವಿಚಾರಕ್ಕೆ ಅವರ ಪೋಸ್ಟ್ ನಾನೂ ಕೂಡ ಬೆಳಗ್ಗೆ ನೋಡಿದೆ. ಅದರ ಬಗ್ಗೆ ಡಿಕೆಶಿ ಅವರ ಬಳಿಯೇ ಕೇಳಿ. ಅದಕ್ಕೆ ಡಿಕೆ ಶಿವಕುಮಾರ್ ಅವರೇ ಕ್ಲಾರಿಟಿ ಕೊಡ್ತಾರೆ ಎಂದರು.

## ಅಖಾಡಕ್ಕೆ ಸ್ವಾಮೀಜಿಗಳ ಎಂಟ್ರಿ

ರಾಜಕೀಯ ಬೆಳವಣಿಗೆಗೆ ಇದೀಗ ಸ್ವಾಮೀಜಿಗಳ ಎಂಟ್ರಿಯಾಗಿದೆ. ಸಿಎಂ ಹಾಗೂ ಡಿಸಿಎಂ ಪರವಾಗಿ ಮಠಾಧೀಶರು ಅಖಾಡ ಪ್ರವೇಶಿಸಿದ್ದಾರೆ.ಡಿಕೆ ಶಿವಕುಮಾರ್ ಪರ ಒಕ್ಕಲಿಗ ಸಮುದಾಯದ ಆದಿಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿ ಬ್ಯಾಟಿಂಗ್ ಮಾಡಿದ್ದಾರೆ. ಮತ್ತೊಂದೆಡೆ ಸಿದ್ದರಾಮಯ್ಯ ಪರವಾಗಿ ಕಾಗಿನೆಲೆ ಕನಕ ಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ ಬೆಂಬಲ ಘೋಷಿಸಿದ್ದಾರೆ. ಮಠಾಧೀಶರು ಹೇಳಿದ ತಕ್ಷಣ ಒಬ್ಬ ವ್ಯಕ್ತಿಯನ್ನು ಮುಖ್ಯಮಂತ್ರಿ ಮಾಡಲು ಸಂವಿಧಾನದಲ್ಲಿ ಅವಕಾಶ ಇದೆಯಾ? ಎಂದು ಪ್ರಶ್ನಿಸಿದ್ದಾರೆ.

## ರಾಜ್ಯಕ್ಕೆ ಒಳ್ಳೇದಾಗ್ಬೇಕು ರಮ್ಯಾ

ಅಧಿಕಾರಿ ಹಂಚಿಕೆ ವಿಚಾರ ದಿನೇ ದಿನೇ ಕಗ್ಗಂಟಾಗುತ್ತಾ ಹೋಗುತ್ತಿದೆ. ಉಭಯದ ಬಣದ ಬೆಂಬಲಿಗರು ದಿನಕ್ಕೊಂದಂತೆ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಈ ಮಧ್ಯೆ ಇದೇ ವಿಚಾರವಾಗಿ ನಟಿ, ಮಾಜಿ ಸಂಸದೆ ರಮ್ಯಾ ತಮ್ಮ ಅಭಿಪ್ರಾಯವನ್ನು ಹಂಚಿ ಕೊಂಡಿದ್ದಾರೆ. ಅಧಿಕಾರ ಹಂಚಿಕೆ ವಿಚಾರ ಇದನ್ನ ನಾನು ನಿರ್ಧಾರ ಮಾಡೋದಲ್ಲ. ಹೈಕಮಾಂಡ್ ತೀರ್ಮಾನ ಮಾಡಲಿದೆ. ಯಾರಾದರೂ ನನಗೆ ಓಕೆ. ರಾಜ್ಯಕ್ಕೆ ಒಳ್ಳೇಯದಾಗಬೇಕು ಎಂದು ರಮ್ಯಾ ಹೇಳಿದ್ದಾರೆ.

# ಡಿಕೆಶಿಯಿಂದ ಶಾಸಕರ ಸಹಿ ಸಂಗ್ರಹ ಆರೋಪ: ಕುತೂಹಲ ಕೆರಳಿಸಿದ ರಾಜಣ್ಣ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆಯ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಶಾಸಕರ ಸಹಿ ಸಂಗ್ರಹ ಮಾಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಮಾಜಿ ಸಚಿವ ಕೆ ಎನ್ ರಾಜಣ್ಣ ಕುತೂಹಲಕಾರಿ ಪ್ರತಿಕ್ರಿಯೆ ನೀಡಿದ್ದಾರೆ. ಡಿಕೆಶಿ ಪಕ್ಷ ವಿರೋಧಿ ಚಟುವಟಿಕೆ ಮಾಡುವುದಿಲ್ಲ ಎಂದು ಭಾವಿಸಿದ್ದೇನೆ ಎಂದರು.

**ಹೈಕಮಾಂಡ್ ಕರೆದರೆ ನಾಯಕರು ಹೋಗ್ತಾರೆ**

ನಾಯಕತ್ವ ವಿಚಾರವಾಗಿ ಡಿಕೆ ಶಿವಕುಮಾರ್ ಶಾಸಕರ ಸಹಿ ಸಂಗ್ರಹ ಮಾಡಿದ್ದಾರೆ ಎಂಬ ಚರ್ಚೆಗಳು ರಾಜ್ಯ ರಾಜಕೀಯದಲ್ಲಿ ನಡೆಯುತ್ತಿವೆ. ಈ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿದ ರಾಜಣ್ಣ, ಡಿಕೆ ಶಿವಕುಮಾರ್ ಒಬ್ಬ ಪಕ್ಷದ ಅಧ್ಯಕ್ಷರಾಗಿ ಸಹಿ ಸಂಗ್ರಹ ಮಾಡುವ ಪಕ್ಷ ವಿರೋಧಿ ಚಟುವಟಿಕೆ ನಡೆಸುವುದಿಲ್ಲ ಎಂದು ಭಾವಿಸಿದ್ದೇನೆ ಎಂದರು. ದೆಹಲಿಗೆ ಹೈಕಮಾಂಡ್ ಕರೆದರೆ ರಾಜ್ಯದ ನಾಯಕರು ಹೋಗ್ತಾರೆ. ಯಾವ ಉದ್ದೇಶದಿಂದ ಕರೆದಿದ್ದಾರೆ ಅನ್ನೋದು ಗೊತ್ತಾಗ್ಬೇಕು. ಸ್ಥಾನ ಬಿಟ್ಟು ಬಿಡೋದೋ ಅಥವಾ ಕೊಟ್ಟು ಕೊಳ್ಳೋದೋ ಮುಂದಿನ ವಿಚಾರ ಎಂದರು.

**ಮಾತು ಕೊಟ್ಟದ್ದು ಗೊತ್ತಿಲ್ಲ:** ನಾಯಕತ್ವ ಬದಲಾವಣೆ ವಿಚಾರವಾಗಿ ಅಧಿಕಾರ ಸ್ವೀಕಾರ ಮಾಡುವ ಸಂದರ್ಭದಲ್ಲಿ ಮಾತು ಕೊಡಲಾಗಿದೆ ಎಂಬ ವಿಚಾರಕ್ಕೆ ಮಾತನಾಡಿ, ಯಾರು ಯಾರು ಮಾತು ಕೊಟ್ಟಿದ್ದಾರೆ, ಬಿಟ್ಟಿದ

**ಸಿದ್ಧಸೂಕ್ತಿ**

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಹಿಂದು ಟೀಕೆ ಇಸ್ಲಾಂ ಬಣ್ಣನೆ!

ಒಂದು ಧರ್ಮವೇ ಅಲ್ಲ, ಹಿಂದೂ ಅಂದರೆ ಎಲ್ಲ ರೀತಿಯ ಅನೈತಿಕ ಅನಾಚಾರಗಳನ್ನೊಳಗೊಂಡಿದ್ದು. ಗಣಪತಿ ನಮ್ಮ ಸಂಸ್ಕೃತಿಯಲ್ಲ, ಇದು ಪಂಡಿತಾರಾಧ್ಯ ಸ್ವಾಮಿಗಳ ಹೇಳಿಕೆ. ಇದು ಲಿಂಗಾಯತರಿಗೆ ಹೇಳಿದ್ದೆಂಬುದು ಅವರ ಅನುಯಾಯಿಗಳ ವಾದ. ಅಲ್ಲಿಗೆ ಅವರು ಲಿಂಗಾಯತರಿಗೆ ಮಾತ್ರ ಸೀಮಿತ. ಅವರೇ ಹೇಳಿದಂತೆ 25 ವರ್ಷಗಳಿಂದ ಗಣೇಶೋತ್ಸವ ದೇವಾಲಯದ ಉದ್ಘಾಟನೆಗೆ ಹೋಗುತ್ತಿಲ್ಲ. ಲಿಂಗಾಯತರು ಹಿಂದುಗಳಲ್ಲವೆಂಬುದು ಅವರ ವಾದ. ಹಾಗಿದ್ದಲ್ಲಿ ಅವರು ಮಠ ವಿಸರ್ಜಿಸಬೇಕು, ಸಂನ್ಯಾಸ ಲಾಂಛನ ಕಾವೀ ತೊರೆಯಬೇಕು. ಬಸವಾದಿ ಶರಣರ ಸಂಪ್ರದಾಯದಲ್ಲಿ ಮಠೀಯವ್ಯವಸ್ಥೆ ಸಂನ್ಯಾಸ ಇಲ್ಲ. ನಾನು ಹಿಂದು ಗುರುವಲ್ಲವೆಂದು ಸಾರಬೇಕು ಹಾಗೂ ಹಿಂದುಗಳ ಗೌರವ ಕಾಣಿಕೆ ನಮಸ್ಕಾರಾದಿಗಳಿಂದ ದೂರವಿದ್ದು ಕಾಯಕ ಮಾಡಿಕೊಂಡಿರಬೇಕು. ಈ ಮಾತು ಲಿಂಗಾಯತ ಪ್ರತ್ಯೇಕತಾವಾದಿ ಎಲ್ಲ ಮಠಾಧೀಶರಿಗೂ ಅನ್ವಯ. ಲಿಂಗಾಯತ ಮತ್ತು ಇಸ್ಲಾಂ ಬೇರೆ ಬೇರೆ ಧರ್ಮವಾದರೂ ಎರಡೂ ಧರ್ಮಗಳಲ್ಲಿ ಸಮಾನಾಂಶಗಳಿವೆ ಎನ್ನುವ ಇವರಿಗೆ ಶಿವ ಜೀವರ ಅಭೇದ ಸಾರುವ ಹಿಂದುಧರ್ಮದ ಉಪನಿಷತ್ತುಗಳು ಅದ್ವೈತ ಕಾಣುವುದಿಲ್ಲವೇ?

# ರಸ್ತೆ ಅಗಲೀಕರಣ, ಮೇಲ್ಸೇತುವೆ ನಿರ್ಮಾಣ ನಿಧಾನ

## ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಶೀಘ್ರದಲ್ಲೇ ಆರಂಭವಾಗಲಿದೆ ಎಂದು ಜಿಬಿಎ ಅಧಿಕಾರಿಗಳು ಮಾಹಿತಿ

• ಉದಯವಾಹಿನಿ, ಬೆಂಗಳೂರು

ವರ್ತೂರು-ಗುಂಜೂರು ಮಾರ್ಗದಲ್ಲಿ ನಡೆಯುತ್ತಿರುವ ರಸ್ತೆ ಅಗಲೀಕರಣ, ಎಲಿವೇಟೆಡ್ ಕಾರಿಡಾರ್ (ಮೇಲ್ಸೇತುವೆ) ಕಾಮಗಾರಿಯು ಆಮೆಗತಿಯಲ್ಲಿಸಾಗಿದ್ದು, ವಾಹನ ಸವಾರರಿಗೆ ಮತ್ತು ಸ್ಥಳೀಯರಿಗೆ ಕನಿಷ್ಠ ಎರಡು ವರ್ಷ ಸಮಸ್ಯೆ ತಪ್ಪಿದ್ದಲ್ಲ. ಮೇಲ್ಸೇತುವೆ ಯೋಜನೆಗೆ ಭೂಸ್ವಾಧೀನದ ಕಂಟಕ ಎದುರಾಗಿದ್ದು, ನಿಗದಿತ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳ್ಳುವುದು ಅನುಮಾನವಾಗಿದೆ. ರಸ್ತೆ ಅಗಲೀಕರಣ ಮತ್ತು ಎಲಿವೇಟೆಡ್ ಕಾರಿಡಾರ್ ಯೋಜನೆಯ ಹೊಣೆ ಹೊತ್ತಿರುವ ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮವು (ಕೆಆರ್‌ಡಿಸಿಎಲ್) ಕಾಮಗಾರಿ ಪೂರ್ಣಗೊಳ್ಳಲು ಕನಿಷ್ಠ 2 ವರ್ಷಗಳ ಕಾಲಾವಕಾಶ ಬೇಕೆಂದು ಹೇಳಿದ್ದು, ವಾಹನ ಸವಾರರು ಸಂಕಷ್ಟ ಅನುಭವಿಸುವುದು ಅನಿವಾರ್ಯವಾಗಲಿದೆ.

ವರ್ತೂರು ಕೆರೆ ಕೋಡಿಯಿಂದ ವಿನಾಯಕ ಚಿತ್ರಮಂದಿರದವರೆಗೆ 1.92 ಕಿ.ಮೀ. ಉದ್ದ ಹಾಗೂ 60 ಅಡಿ ಅಗಲದ ಎಲಿವೇಟೆಡ್ ಕಾರಿಡಾರ್ ನಿರ್ಮಿಸಲು ರಾಜ್ಯ ಸರಕಾರ 2016-17ರಲ್ಲೇ ಅನುಮತಿ ನೀಡಿತ್ತು. 482 ಕೋಟಿ ರೂ. ಅಂದಾಜು ವೆಚ್ಚದ ಈ ಯೋಜನೆಯು 30 ಮೀಟರ್‌ನಿಂದ 100 ಮೀಟರ್ ವರೆಗೆ ರಸ್ತೆ ಅಗಲೀಕರಣ ಮತ್ತು ವರ್ತೂರು ಕೋಡಿ ಬಳಿ

ಉದಯವಾಹಿನಿ ಚಿತ್ರ

ಸಣ್ಣ ಮೇಲ್ಸೇತುವೆ ವಿಸ್ತರಣೆಯನ್ನು ಒಳಗೊಂಡಿದೆ. ಜತೆಗೆ, ಡಬಲ್ ಡೆಕ್ಕರ್ ನಿರ್ಮಾಣ ಮತ್ತು ಮೆಟ್ರೋ ರೈಲು ಮಾರ್ಗದ ಜೋಡಣೆ ವಿನ್ಯಾಸವನ್ನು ಇದು ಒಳಗೊಂಡಿದೆ.

2016-17ರಲ್ಲಿ ಮೊದಲು 40 ಅಡಿ ರಸ್ತೆ ಅಗಲೀಕರಣಕ್ಕೆ ಯೋಜನೆ ರೂಪಿಸಲಾಗಿತ್ತು. ನಂತರ ಸಂಚಾರ ಸಮಸ್ಯೆ ಹೆಚ್ಚಿದೆ ಎಂಬ ಕಾರಣಕ್ಕೆ 60 ಅಡಿ ರಸ್ತೆ ಅಗಲೀಕರಣ ಯೋಜನೆಯನ್ನು ಎಲಿವೇಟೆಡ್ ಕಾರಿಡಾರ್ ಯೋಜನೆಯಾಗಿ ಪರಿವರ್ತಿಸಲಾಯಿತು. ರಸ್ತೆ ಅಗಲೀಕರಣಕ್ಕೆ ಒಪ್ಪಿದ ಸ್ಥಳೀಯರು, ಎಲಿವೇಟೆಡ್ ಕಾರಿಡಾರ್ ಯೋಜನೆಗೆ ವಿರೋಧ ವ್ಯಕ್ತಪಡಿಸಿ ಸಾಕಷ್ಟು ಪ್ರತಿಭಟನೆ ನಡೆಸಿದರು. ಹೀಗಾಗಿ, ಯೋಜನೆಯಲ್ಲಿ ಸಾಕಷ್ಟು ಬದಲಾವಣೆ ಮಾಡಿರುವ ಸರಕಾರ ಯೋಜನೆ ಜಾರಿಗೊಳಿಸಲು ನಿರಂತರ ಪ್ರಯತ್ನ ನಡೆಸುತ್ತಲೇ ಇದೆ.

**ಪರ್ಯಾಯ ಮಾರ್ಗವಿಲ್ಲ:** ಹೊರ ವರ್ತುಲ ರಸ್ತೆಗೆ ಪರ್ಯಾಯ ಮಾರ್ಗವಿಲ್ಲದೆ ರಾಜ್ಯ ಹೆದ್ದಾರಿ-35 ಮಾತ್ರ ಏಕೈಕ ಪ್ರಮುಖ ಮಾರ್ಗವಾಗಿ ಉಳಿದಿದೆ. ಈ ಮಾರ್ಗವು ತುಂಬಾ ಕಿರಿದಾಗಿದೆ ಮತ್ತು ಗುಂಡಿಮಯವಾಗಿದೆ. ಇದರಿಂದ ವಾಹನ ಸಂಚಾರಕ್ಕೆ ತೀವ್ರ ಸಮಸ್ಯೆಯಾಗುತ್ತಿದೆ. ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ವಾಹನ ಸವಾರರಿಗೆ ಧೂಳಿನ ಮಜ್ಜನವಾಗುತ್ತಿದೆ.

ಪಾದಚಾರಿಗಳ ಸುರಕ್ಷಿತ ಓಡಾಟಕ್ಕೆ ಸಮಸ್ಯೆಯಾಗುತ್ತಿದ್ದು, ಪ್ರತಿನಿತ್ಯ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಿವೆ, ಎಂದು ಸ್ಥಳೀಯರು ಅಲವತ್ತುಕೊಂಡಿದ್ದಾರೆ.

**ಭೂಸ್ವಾಧೀನ ವಿಳಂಬ**

ರಸ್ತೆ ಅಗಲೀಕರಣದ ಹೊರತಾಗಿ ನೆಲ ಮಟ್ಟದಲ್ಲಿ ಕಾಮಗಾರಿಯ ಪ್ರಗತಿ ನಿಧಾನವಾಗಿದೆ. ಕಾರಿಡಾರ್‌ನಲ್ಲಿ ಒಳಚರಂಡಿ ಕೆಲಸ ಮತ್ತು ತೆರವು ಕಾರ್ಯಚರಣೆ ಮಾತ್ರ ನಡೆದಿವೆ. ಭೂಸ್ವಾಧೀನಕ್ಕೆ ಗುರುತಿಸಲಾಗಿರುವ 198 ಆಸ್ತಿಗಳ ಪೈಕಿ ಹಲವನ್ನು ಸ್ವಾಧೀನಪಡಿಸಿಕೊಳ್ಳಲಾಗಿದ್ದು, ಈ ಆಸ್ತಿಗಳ ಮಾಲೀಕರಿಗೆ ಭೂಪರಿಹಾರ ನೀಡಿಕೆ ಮುಂದುವರಿದಿದೆ. ಇನ್ನೂ 19 ಆಸ್ತಿಗಳ ಸ್ವಾಧೀನ ಬಾಕಿ ಇದೆ. ಈ ವಿಳಂಬವು ಯೋಜನೆಯ ಪೂರ್ಣ ಪ್ರಮಾಣದ ಅನುಷ್ಠಾನಕ್ಕೆ ಅಡ್ಡಿಯಾಗುತ್ತಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಕಾಮಗಾರಿಯ ವೇಗ ಹೆಚ್ಚಿದ್ದರೂ ಸವಾಲುಗಳು ಮುಂದುವರಿದಿವೆ. ಭೂಸ್ವಾಧೀನವು ಅತ್ಯಂತ ಕಠಿಣವಾಗಿದೆ. ಜಿಬಿಎ, ಕೆಲವೆಡೆ ಟಿಡಿಆರ್ ಮೂಲಕ ಭೂಸ್ವಾಧೀನಕ್ಕೆ ಸಹಕರಿಸಿದೆ. ರಸ್ತೆ ಬದಿಯ ಚರಂಡಿ ಕೆಲಸ ಈಗಾಗಲೇ ಆರಂಭವಾಗಿದೆ. ಸಾಧ್ಯವಾದಷ್ಟು ಬೇಗನೆ ಕಾಮಗಾರಿ ಪೂರ್ಣಗೊಳಿಸಲು ನಿರ್ಧರಿಸಿದ್ದೇವೆ. 2027ರ ವೇಳೆಗೆ ಯೋಜನೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ, ಎಂದು ಕೆಆರ್‌ಡಿಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

**ಪರ್ಯಾಯ ಮಾರ್ಗವಿಲ್ಲ**

ಹೊರ ವರ್ತುಲ ರಸ್ತೆಗೆ ಪರ್ಯಾಯ ಮಾರ್ಗವಿಲ್ಲದೆ, ರಾಜ್ಯ ಹೆದ್ದಾರಿ-35 ಮಾತ್ರ ಏಕೈಕ ಪ್ರಮುಖ ಮಾರ್ಗವಾಗಿ ಉಳಿದಿದೆ. ಈ ಮಾರ್ಗವು ತುಂಬಾ ಕಿರಿದಾಗಿದೆ ಮತ್ತು ಗುಂಡಿಮಯವಾಗಿದೆ. ಇದರಿಂದ ವಾಹನ ಸಂಚಾರಕ್ಕೆ ತೀವ್ರ ಸಮಸ್ಯೆಯಾಗುತ್ತಿದೆ. ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ವಾಹನ ಸವಾರರಿಗೆ ಧೂಳಿನ ಮಜ್ಜನವಾಗುತ್ತಿದೆ. ಪಾದಚಾರಿಗಳ ಸುರಕ್ಷಿತ ಓಡಾಟಕ್ಕೆ ಸಮಸ್ಯೆಯಾಗುತ್ತಿದ್ದು, ಪ್ರತಿನಿತ್ಯ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಿವೆ, ಎಂದು ಸ್ಥಳೀಯರು ಅಲವತ್ತುಕೊಂಡಿದ್ದಾರೆ.

## ನೂಪುರನಾದ ಗೆಜ್ಜೆಪೂಜೆ

• ಉದಯವಾಹಿನಿ, ಬೆಂಗಳೂರು

ನೆಲಮಂಗಲದ ಅರಿಶಿನಕುಂಟೆಯ ಶ್ರೀ ಗಣೇಶ ನೃತ್ಯಾಲಯ ಟ್ರಸ್ಟ್ ಸಂಗೀತ

ನೃತ್ಯ ಶಾಲೆಯ ವತಿಯಿಂದ ನವೆಂಬರ್ 30, ಭಾನುವಾರ ಬೆಳಗ್ಗೆ 9-30ಕ್ಕೆ ಕು॥ ವಿ. ಪ್ರತೀಕ್ಷ (ನೃತ್ಯ ದಂಪತಿಗಳಾದ ವಿದುಷಿ ಶ್ರೀಮತಿ ಭಾವನಾ ಗಣೇಶ್ ಮತ್ತು ವಿದ್ವಾನ್ ಶ್ರೀ ಎಂ.ಡಿ. ಗಣೇಶ್ ಇವರ ಶಿಷ್ಯೆ) ಇವರ ನೂಪುರನಾದ (ಗೆಜ್ಜೆಪೂಜೆ) ಸ್ಥಳ : ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು ಸರ್ವರಿಗೂ ಆತ್ಮೀಯ ಸುಸ್ವಾಗತ

## ಟ್ರ್ಯಾಕ್ಟರ್ ಪಡೆದು ರೈತರಿಗೆ ವಂಚನೆ ಖಾಸಗಿ ಬಸ್ ಚಾಲಕನ ಬಂಧನ

• ಉದಯವಾಹಿನಿ, ಬೆಂಗಳೂರು

ರೈತರ ಟ್ರ್ಯಾಕ್ಟರ್‌ಗಳನ್ನು ಬಾಡಿಗೆಗೆ ಪಡೆದು ನಂತರ ಮಾರಾಟ ಮಾಡುವ ಮೂಲಕ ವಂಚಿಸಿದ ಆರೋಪದ ಮೇಲೆ ಚಿಕ್ಕಜಾಲ ಪೊಲೀಸರು 35 ವರ್ಷದ ವ್ಯಕ್ತಿಯನ್ನು ಬಂಧಿಸಿದ್ದಾರೆ. ಸುಮಾರು 70 ಲಕ್ಷ ರೂ. ಮೌಲ್ಯದ 17 ಟ್ರ್ಯಾಕ್ಟರ್‌ಗಳು ಮತ್ತು ಟ್ರೇಲರ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಚಿಕ್ಕಬಳ್ಳಾಪುರದ ದಿಟ್ಟೂರಹಳ್ಳಿ ನಿವಾಸಿ ಮತ್ತು ಖಾಸಗಿ ಬಸ್ ಚಾಲಕ ದೇವರಾಜ್ ಪಿ. ಮಾಸಿಕ ಬಾಡಿಗೆ ಪಾವತಿಸುವ ನೆಪದಲ್ಲಿ ದೇವರಾಜ್ ಚಿಕ್ಕಜಾಲದ ಹಲವಾರು ರೈತರಿಂದ ಟ್ರ್ಯಾಕ್ಟರ್‌ಗಳು ಮತ್ತು ಟ್ರೇಲರ್‌ಗಳನ್ನು ಪಡೆದಿದ್ದ. ಕೆಲವು ತಿಂಗಳುಗಳಿಂದ, ರೈತರಿಗೆ ಹಣ ಸಿಗುತ್ತಿತ್ತು. ಆದರೆ ಕಳೆದ ಐದು ತಿಂಗಳುಗಳಿಂದ, ಅವರು ಬಾಡಿಗೆ ಹಣ ನೀಡುವುದನ್ನು ನಿಲ್ಲಿಸಿದ. ಜೊತೆಗೆ ಸಮಯಕ್ಕೆ ಸರಿಯಾಗಿ ವಾಹನಗಳನ್ನು ಹಿಂದಿರುಗಿಸಲು ವಿಫಲರಾದರು. ಅವರು ಎಲ್ಲಾ ವಾಹನಗಳನ್ನು ಆಂಧ್ರಪ್ರದೇಶ ಮತ್ತು ಇತರ ಸ್ಥಳಗಳಲ್ಲಿ ಖರೀದಿದಾರರಿಗೆ ಕಡಿಮೆ ಬೆಲೆಗೆ ಮಾರಾಟ ಮಾಡಿದ್ದ ಎಂಬುದು ತಿಳಿದು ಬಂತು. ವಂಚನೆಗೆ ಒಳಗಾದ ಚಿಕ್ಕಜಾಲದ ರೈತ ಬಸವರಾಜು ಕಳೆದ ತಿಂಗಳು ಪೊಲೀಸರಿಗೆ ದೂರು ನೀಡಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ.

## ಪರಿಶಿಷ್ಟ ಜಾತಿಯವರಿಗೆ ಅನುದಾನ ಬಳಕೆ: ಸಚಿವ ಮುನಿಯಪ್ಪ ಅಸಮಾಧಾನ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಪರಿಶಿಷ್ಟ ಜಾತಿಯವರಿಗೆ ಮೀಸಲಿಟ್ಟಿರುವ ಅನುದಾನ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ. ಕಾನೂನು, ಯೋಜನೆ ರೂಪಿಸಿದರೂ ಉಪಯೋಗ ಆಗುತ್ತಿಲ್ಲ' ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು. ಅಂಬೇಡ್ಕರ್ ಭವನದಲ್ಲಿ ನಡೆದ ಸಂವಿಧಾನ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ರೂ.43 ಸಾವಿರ ಕೋಟಿಯನ್ನು ಈ ಸಮುದಾಯದವರ ಅಭಿವೃದ್ಧಿಗೆ ಮೀಸಲಿಡಲಾಗುತ್ತಿದೆ. ಅಲ್ಲದೇ ಗುತ್ತಿಗೆದಾರರಿಗೆ ಅವಕಾಶ ಆಗಲಿ ಎಂದು ನಿಯಮಗಳಲ್ಲಿ ಬದಲಾವಣೆ ಮಾಡಿದರೂ ಉಪಯೋಗವೇ ಆಗುತ್ತಿಲ್ಲ. ಅರ್ಹತೆ ಕಾರಣ ನೀಡಿ ಗುತ್ತಿಗೆ ನಿರಾಕರಿಸಲಾಗುತ್ತಿದೆ.

ನೇರ ಪ್ರಯೋಜನ ಸಿಗದೇ ಅಭಿವೃದ್ಧಿಯೂ ಆಗುತ್ತಿಲ್ಲ. ಏಕ ಗವಾಕ್ಷಿ ಯೋಜನೆ ರೂಪಿಸಿ ಸೌಲಭ್ಯ ಸಿಗುವಂತೆ ಮಾಡಿ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸರ್ಕಾರ ಎಂದರೆ ನಾನೊಬ್ಬನೇ ಅಲ್ಲ, ಮಂತ್ರಿಮಂಡಲದ ನಿರ್ಧಾರವೂ ಮುಖ್ಯವಾಗುತ್ತದೆ. ಯಾವುದೇ ಕಾರ್ಯಕ್ರಮ ರೂಪಿಸಿದರೆ ಜಾರಿಗೊಳಿಸುವ ಹೊಣೆ ಸಚಿವರು, ಶಾಸಕರು ಅಧಿಕಾರಿಗಳದ್ದಾಗಿರುತ್ತದೆ. ಇದಕ್ಕೆ ಬೇಕಾದ ಬದಲಾವಣೆ ಮಾಡಿ ಅನುದಾನ ಸಮುದಾಯದ ಏಳಿಗೆಗೆ ಬಳಸಿ. ದುರುಪಯೋಗ ತಪ್ಪಿಸಿ ಎಂದು ಹೇಳಿದರು.

## ಮನೆ ಬಾಗಿಲಿಗೆ ತೆರಳಿ ಸಂವಿಧಾನದ ಮಹತ್ವದ ಕುರಿತು ಅರಿವು

ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆ.ಆರ್.ಪುರ

ಮನೆ ಬಾಗಿಲಿಗೆ ತೆರಳಿ ಸಂವಿಧಾನದ ಮಹತ್ವದ ಕುರಿತು ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಎಸ್.ಡಿ.ಪಿ.ಐ ಕಾರ್ಯಕರ್ತರು ಹಮ್ಮಿಕೊಂಡಿದ್ದರು. ಮಹದೇವಪುರ ಕ್ಷೇತ್ರದ ಕಾಡುಗುಡಿ ದಿನ್ನೂರು ಗ್ರಾಮದ ಪ್ಲಾಂಟೇಷನ್‌ನಲ್ಲಿ ರಾಷ್ಟ್ರೀಯ ಸಂವಿಧಾನ ದಿನಾಚರಣೆ ಅಂಗವಾಗಿ ಎಸ್.ಡಿ.ಪಿ.ಐ ಪಕ್ಷದ ನೂರಾರು ಕಾರ್ಯಕರ್ತರು ಅರಿವು ಮೂಡಿಸಿ ಸಂವಿಧಾನದ ದಿನದ ಶುಭಾಶಯಗಳನ್ನು ತಿಳಿಸಿದರು. ಕಾರ್ಯಕ್ರಮದ ನೇತೃತ್ವ ವಹಿಸಿದ ನಿವೃತ್ತ ಪೋಲಿಸ್ ಅಧಿಕಾರಿ ದೇವರಾಜ್ ಮತನಾಡಿ, ಬಹಳಷ್ಟು ಜನರಿಗೆ ಸಂವಿಧಾನದ ಪೀಠಿಕೆ ಓದಲು ಬರೆಯಲು ತಿಳಿಯುವುದಿಲ್ಲ, ಆದರಿಂದ ಜನರಿಗೆ ಸಂವಿಧಾನದ ಬಗ್ಗೆ ಅರಿವಿನ ಕೊರತೆ ನೀಗಿಸುವ ಪ್ರಯತ್ನ ಮಾಡಲಾಯಿತು ಎಂದರು. ಮತದಾನ, ಸಮಾನತೆ, ಕಾನೂನು, ಸಾಮಾಜಿಕ ನ್ಯಾಯಗಳಿಂದ ಭಾರತ ಸದೃಢವಾದ ದೇಶವಾಗಿ ಹೋರಹೊಮ್ಮಿದೆ ಎಂದು ವಕೀಲರ ವಿಜಯನ್ ನುಡಿದರು. ಇತ್ತರೆ ಪಕ್ಷಗಳು, ಆರ್.ಎಸ್.ಎಸ್, ಮನುವಾದ, ಮನುಸ್ಮೃತಿಗಳು ಅಂಬೇಡ್ಕರ್ ಅವರ ಸಂವಿಧಾನವನ್ನು ಒಪ್ಪುದಿಲ್ಲ ಎಂದು ಎಸ್. ಡಿ.ಪಿ.ಐ ರಾಜ್ಯ ಪ್ರದಾನ ಕಾರ್ಯದರ್ಶಿ ಹೀಹಾಸ್ ಕಡಂಬು ಹೇಳಿದರು. ಈ ಸಂದರ್ಭದಲ್ಲಿ ಪ್ರ.ಕಾರ್ಯದರ್ಶಿ ಅಂಗಡಿ ಚಂದ್ರು, ಮುಖಂಡರಾದ ಪ್ರವೀಣ್, ಚಿನ್ನಸ್ವಾಮಿ, ಯಿತ್ಯಾಸ್, ಬಿ.ಎಂ. ನಾಗರಾಜ್, ನಯಿಮ್, ಬೆಂ. ಕಾರ್ಯದರ್ಶಿ ಅಸೀಫ್ ಎಸ್.ಡಿ.ಪಿ.ಐ ಕಾರ್ಯಕರ್ತರು ಮತ್ತಿತರರು ಭಾಗಿಯಾಗಿದ್ದರು.

## ಕಾಲೇಜುಗಳಲ್ಲಿ ವಿದ್ಯಾರ್ಥಿ ಚುನಾವಣೆ ಅಧ್ಯಯನಕ್ಕೆ ಸಮಿತಿ: ಡಿ.ಕೆ.ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಕಾಲೇಜುಗಳಲ್ಲಿ ವಿದ್ಯಾರ್ಥಿ ಚುನಾವಣೆ ನಡೆಸುವ ಕುರಿತು ಸಾಧಕ, ಬಾಧಕಗಳ ಬಗ್ಗೆ ಅಧ್ಯಯನ ನಡೆಸಿ, ವರದಿ ನೀಡಲು ಸಮಿತಿ ರಚಿಸಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದರು. ಸುದ್ದಿಗಾರರ ಜತೆ ಮಾತನಾಡಿದ ಅವರು, ಹಿಂದೆ ವಿದ್ಯಾರ್ಥಿ ಚುನಾವಣೆಗಳಿಂದ ನಾಯಕತ್ವ ಬೆಳೆಸಲು ಸಾಧ್ಯವಾಗಿತ್ತು.

ನಾನು ಅಂತಿಮ ವರ್ಷದ ಪದವಿಯಲ್ಲಿ ಇದ್ದಾಗಲೇ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ಸಿಕ್ಕಿತು. ಕಾಂಗ್ರೇಸ್ ಪಕ್ಷದ ಹಲವು ನಾಯಕರು ವಿದ್ಯಾರ್ಥಿ ಹೋರಾಟದಿಂದಲೇ ಬಂದವರು. ಆದರೆ, ವಿದ್ಯಾರ್ಥಿ ಚುನಾವಣೆಗಳಲ್ಲಿ ಅಪರಾಧ ಚಟುವಟಿಕೆಗಳು ನಡೆಯುತ್ತಿದ್ದವು. ಅವುಗಳನ್ನು ನಿಯಂತ್ರಿಸುವ ಅಗತ್ಯವಿದೆ. ಈ ಕುರಿತು ವರದಿ ಬಂದ ನಂತರ ಸಮಿತಿ ರಚಿಸಲಾಗುವುದು'

**ಕಾನೂನು ಬ್ಯಾಂಕ್ ಮತ ಕಳವು ಪ್ರಕರಣಗಳನ್ನು ತಡೆಯಲು ರಕ್ತ ನಿಧಿ ಮಾದರಿಯಲ್ಲಿ 224 ವಿಧಾನಸಭಾ ಕ್ಷೇತ್ರದಲ್ಲೂ ಕನಿಷ್ಠ 10 ವಕೀಲರಿರುವ ಕಾನೂನು ಬ್ಯಾಂಕ್ ಸ್ಥಾಪಿಸಲಾಗುವುದು. ವಕೀಲರು ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು ಹಾಗೂ ಪಕ್ಷದ ಆಚಾರ ವಿಚಾರ ರಕ್ಷಣೆಗೆ ಕೆಲಸ ಮಾಡಬೇಕು. ಮುಂದಿನ ದಿನಗಳಲ್ಲಿ ರಾಜ್ಯಮಟ್ಟದ ಸಮಿತಿ ರಚಿಸಲಾಗುತ್ತದೆ' ಎಂದು ಮಾಹಿತಿ ನೀಡಿದರು.**

ಎಂದರು. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮುಖ್ಯಮಂತ್ರಿ ಹಾಗೂ ತಮಗೆ ಪತ್ರ ಬರೆದು, ಕಾಲೇಜು ಚುನಾವಣೆ ಬಗ್ಗೆ ಆಲೋಚಿಸುವಂತೆ ಮಾರ್ಗದರ್ಶನ ನೀಡಿದ್ದಾರೆ ಎಂದು ಹೇಳಿದರು.

## ಡಿಕೆ ಶಿವಕುಮಾರ್‌ಗೆ ಅನ್ಯಾಯವಾದರೆ ರಾಜ್ಯಾದ್ಯಂತ ಹೋರಾಟ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಪಟ್ಟಕ್ಕಾಗಿ ಫೈಟ್ ಮಾಡುತ್ತಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಅನ್ಯಾಯವಾದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ಕರ್ನಾಟಕ ರಾಜ್ಯ ಒಕ್ಕಲಿಗರ ಸಂಘ ಕಾಂಗ್ರೇಸ್ ಹೈಕಮಾಂಡ್‌ಗೆ ಎಚ್ಚರಿಕೆ ನೀಡಿದೆ.

ರಾಜ್ಯ ಕಾಂಗ್ರೇಸ್ ಅಧ್ಯಕ್ಷರೂ ಆಗಿರುವ ಡಿಕೆ ಶಿವಕುಮಾರ್ ಅವರು ಒಕ್ಕಲಿಗ ಸಮುದಾಯಕ್ಕೆ ಸೇರಿದವರು. ವಿಧಾನಸಭೆ ಚುನಾವಣೆಯ ಸಮಯದಲ್ಲಿ, ಶಿವಕುಮಾರ್ ಅವರು ಸಾಕಷ್ಟು ಶ್ರಮಿಸಿದ್ದು, ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷ ಸಂಘಟನೆ ಮಾಡಿದ್ದಾರೆ ಮತ್ತು ಅವರ ಪ್ರಯತ್ನದಿಂದಾಗಿ ಕಾಂಗ್ರೇಸ್ 140 ಸ್ಥಾನಗಳನ್ನು ಗಳಿಸಿತು ಎಂದು ಸಂಘದ ಅಧ್ಯಕ್ಷ ಎಲ್ ಶ್ರೀನಿವಾಸ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಸಿದ್ದರಾಮಯ್ಯ ಅವರ ಎರಡೂವರೆ ವರ್ಷಗಳ ಅವಧಿ ಪೂರ್ಣಗೊಂಡ ನಂತರ ಡಿಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಲಾಗುವುದು ಎಂದು ಕಾಂಗ್ರೇಸ್ ಹೈಕಮಾಂಡ್ ಈ ಹಿಂದೆ ಶಿವಕುಮಾರ್ ಅವರಿಗೆ ಭರವಸೆ

ಉದಯವಾ

# ಕಾಂಗ್ರೇಸ್‌ನಲ್ಲಿ ಅಧಿಕಾರ ಹಂಚಿಕೆಯ ಸೂತ್ರವೇ ರಚನೆಯಾಗಿಲ್ಲ: ಯತೀಂದ್ರ

• ಉದಯವಾಹಿನಿ, ಮೈಸೂರು

ಕರ್ನಾಟಕದಲ್ಲಿ ಸಿಎಂ ಸ್ಥಾನ ಬದಲಾವಣೆ, ಅಧಿಕಾರ ಹಂಚಿಕೆ ವಿಚಾರವಾಗಿ ವಾದ, ಪ್ರತಿವಾದಗಳು ಜೋರಾಗಿದೆ. ಡಿಕೆ ಶಿವಕುಮಾರ್, ಸಿಎಂ ಸಿದ್ದರಾಮಯ್ಯ ಅವರ ಬಣದ ಮಧ್ಯೆ ಹಗ್ಗಜಗ್ಗಾಟ ನಡೆಯುತ್ತಲೇ ಇದೆ. ಈ ಮಧ್ಯೆ ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಸಿದ್ದರಾಮಯ್ಯನವರೇ ಪೂರ್ಣಾವಧಿಗೆ ಮುಖ್ಯಮಂತ್ರಿಯಾಗಿರುತ್ತಾರೆ ಎನ್ನುವ ಮೂಲಕ ಊಹಾಪೋಹಗಳಿಗೆ ತೆರೆ ಎಳೆಯುವ ಪ್ರಯತ್ನ ಮಾಡಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಸಿಎಂ ಸಿದ್ದರಾಮಯ್ಯನವರ ಮೇಲೆ ಯಾವುದೇ ಆರೋಪಗಳಿಲ್ಲ. ಅವರನ್ನು ಕೆಳಗಿಳಿಸಲು ಸೂಕ್ತವಾದ ಯಾವ ಕಾರಣಗಳೂ ಇಲ್ಲದಿರುವಾಗ, ನಾಯಕತ್ವ ಬದಲಾವಣೆಯ ಚರ್ಚೆಯೇ ಬರಬಾರದಿತ್ತು. ಆದರೂ ಕೆಲವರು ಅನಗತ್ಯವಾಗಿ ಬದಲಾವಣೆಯ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಯತೀಂದ್ರ ಅವರು ಬೇಸರ ಹೊರಹಾಕಿದರು.

**ಅಧಿಕಾರ ಹಂಚಿಕೆ ಬಗ್ಗೆ ಚರ್ಚೇನೆ ಆಗಿಲ್ಲ:** ಕರ್ನಾಟಕ ಕಾಂಗ್ರೇಸ್ ಪಕ್ಷದಲ್ಲಿ ಅಧಿಕಾರ ಹಂಚಿಕೆಯ ಒಪ್ಪಂದ ನಡೆದಿದೆ ಎಂಬ ಮಾತುಗಳು ಸತ್ಯಕ್ಕೆ ದೂರವಾದದ್ದು ಎಂದು ಪರೋಕ್ಷವಾಗಿ ಯತೀಂದ್ರ ಅವರು ಮಾತನಾಡಿದ್ದಾರೆ. ನನಗೆ ಇರುವ ಮಾಹಿತಿಯ ಪ್ರಕಾರ ಅಧಿಕಾರ ಹಂಚಿಕೆಯ ಯಾವುದೇ ಸೂತ್ರ ರಚನೆಯಾಗಿಲ್ಲ.

### ನಿರ್ಮಲಾನಂದನಾಥ್ ಸ್ವಾಮೀಜಿ ಹೇಳಿಕೆಗೆ ಟಾಂಗ್

**ಯಾರನ್ನು ಸಿಎಂ ಮಾಡಬೇಕು ಯಾರನ್ನು ಮಾಡಬಾರದು ಎಂಬುದು ನಮ್ಮ ಪಕ್ಷದ ಆತಂರಿಕ ವಿಚಾರ. ಅದು ನಮ್ಮ ಶಾಸಕರಿಗೆ ಮತ್ತು ನಮ್ಮ ಹೈಕಮಾಂಡ್‌ಗೆ ಬಿಟ್ಟ ವಿಚಾರ. ಅದರ ಬಗ್ಗೆ ಬೇರೆಯವರ ಅಭಿಪ್ರಾಯ ಅನಗತ್ಯ ಎಂದು ಆದಿಚುಂಚನಗಿರಿ ಮಠದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ್ ಸ್ವಾಮೀಜಿ ಹೇಳಿಕೆಗೆ ಎಂಎಲ್‌ಸಿ ಡಾ. ಯತೀಂದ್ರ ಮೈಸೂರಿನಲ್ಲಿ ತಿರುಗೇಟು ಕೊಟ್ಟರು.**

ಸ್ವತಃ ನಮ್ಮ ತಂದೆಯವರಾಗಲಿ ಅಥವಾ ಪಕ್ಷದ ಇತರೆ ಹಿರಿಯ ಸಚಿವರಾಗಲಿ ಈ ಬಗ್ಗೆ ಯಾವತ್ತೂ ಮಾತನಾಡಿಲ್ಲ. ಇದರ ಅರ್ಥ ಅಧಿಕಾರ ಹಂಚಿಕೆಯ ಮಾತುಕತೆಯೇ ನಡೆದಿಲ್ಲ ಎಂಬುದಾಗಿದೆ? ಎಂದರು. ಇನ್ನೂ ಎರಡೂವರೆ ವರ್ಷಗಳ ಕಾಲ ನಮ್ಮ ತಂದೆಯೇ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದರು. ನಾಯಕತ್ವದ ಬಗ್ಗೆ ಹೈಕಮಾಂಡ್ ಎಲ್ಲಿಯೂ ಬದಲಾವಣೆ ಮಾಡುತ್ತೇವೆ ಎಂದು ಹೇಳಿಲ್ಲ. ಅಂತಿಮವಾಗಿ ಹೈಕಮಾಂಡ್ ತೀರ್ಮಾನವೇ ಶಿರೋಧಾರ್ಮನವಾಗಿರುತ್ತದೆ. ಇನ್ನು ಯಾರಿಗೆ ಎಷ್ಟು ಶಾಸಕರ ಬೆಂಬಲವಿದೆ. ಅಂಕಿ-ಅಂಶಗಳೇನು ಎಂಬ ಪ್ರಶ್ನೆಗಳನ್ನು ಕೇಳಬೇಡಿ. ಇದು ಪಕ್ಷದ ಆಂತರಿಕ ವಿಚಾರವಾಗಿದ್ದು, ಎಲ್ಲಾ ಶಾಸಕರ ಬೆಂಬಲ ನಮ್ಮ ತಂದೆಗಿದೆ ಎಂದು ಸಮರ್ಥಿಸಿಕೊಂಡರು.

## ಉರಿಯದ ಬೀದಿ ದೀಪ, ಜನರಿಗೆ ಕತ್ತಲೆ ಭಾಗ್ಯ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಕನಕಪುರ

ನಗರದ ಬೀದಿ ದೀಪಗಳು ಉರಿಯದೆ ಜನರು ಕತ್ತಲೆಯಲ್ಲಿ ಜೀವನ ದೂಡುವಂತಾಗಿದೆ. ಇಲ್ಲಿನ ಎಂ.ಜಿ ರಸ್ತೆ ನಾರಾಯಣಪ್ಪನ ಕೆರೆಯಿಂದ ರೈಸ್ ಮಿಲ್‌ವರೆಗೂ ಇರುವ ಜೋಡಿ ರಸ್ತೆ ವಿಭಜಕಕ್ಕೆ ಅಳವಡಿಸಿರುವ ಜೋಡಿ ದೀಪಗಳು ಹಲವು ತಿಂಗಳಿಂದ ರಾತ್ರಿ ವೇಳೆ ಉರಿಯುತ್ತಿಲ್ಲ. ಕನಕಪುರ ನಗರದ ಎಂ.ಜಿ ರಸ್ತೆ ವಿಸ್ತರಣೆ ಸಂದರ್ಭದಲ್ಲಿ ಅಂದಿನ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕ್ಷೇತ್ರದ ಮತದಾರರು ಹಾಗೂ ನಗರದ ಅಂದ ಹೆಚ್ಚಿಸಲು ಜೋಡಿ ರಸ್ತೆ ನಿರ್ಮಿಸಿ ಮಧ್ಯದಲ್ಲಿ ಜೋಡಿ ದೀಪಗಳನ್ನು ಹಾಕಿಸಿದ್ದರು. ಈಚೆಗೆ ವೈಟ್ ಟಾಪಿಂಗ್ ಮಾಡಲು ಕಾಂಕ್ರೀಟ್ ಕಾಮಗಾರಿ ಆರಂಭಿಸಿದ ನಂತರ ಬೀದಿ ದೀಪಗಳು ಉರಿಯುತ್ತಿಲ್ಲ. ಕಾರಣ ಕೇಳಿದರೆ ಕಾಮಗಾರಿ ವೇಳೆ ಕೇಬಲ್ ಹಾಳಾಗಿದೆ ಎನ್ನುವ ಉತ್ತರವನ್ನು ನಗರಸಭೆ ನೀಡುತ್ತಾ ಬಂದಿದೆ. ನಗರದ ಮೂರು ಕಿಲೋಮೀಟರ್ ಉದ್ದದ ರಸ್ತೆಯಲ್ಲಿ ಒಂದು ದೀಪ ಉರಿಯದ ಕಾರಣ ಇಡೀ ನಗರ ಕತ್ತಲೆಯಲ್ಲಿ ಮುಳುಗಿದೆ. ರಾತ್ರಿ 6ರಿಂದ ಬೆಳಿಗ್ಗೆ 6ರವರೆಗೆ ಜನರು ಕತ್ತಲೆಯಲ್ಲಿ ಓಡಾಡುವಂತಾಗಿದೆ. ಜನರ ಪಾಲಿಗೆ ಕತ್ತಲೆ ಭಾಗ್ಯ ಸಿಕ್ಕಿದೆ.

ಕುರುಪೇಟೆ, ಹೌಸಿಂಗ್ ಬೋರ್ಡ್, ರೈಸ್‌ಮಿಲ್ ಕಡೆಯಿಂದ ಬಸ್ ನಿಲ್ದಾಣಕ್ಕೆ ಬರುವ ಮತ್ತು ಹೋಗುವ ಜನರು ಕತ್ತಲೆಯಲ್ಲಿ ನಡೆದುಕೊಂಡು ಹೋಗಬೇಕಿದೆ. ಕತ್ತಲೆ ಕಾರಣದಿಂದ ಅಪಘಾತಗಳು ಸಾಮಾನ್ಯವಾಗಿವೆ. ಕತ್ತಲೆ ಲಾಭಪಡೆದು ಕಳವು ಪ್ರಕರಣಗಳು ಕೂಡ ಹೆಚ್ಚುತ್ತಿವೆ. ನಗರಸಭೆ ಸದಸ್ಯರು ಸಾಮಾನ್ಯ ಸಭೆಯಲ್ಲಿ ಬೀದಿದೀಪ ಸರಿಪಡಿಸುವಂತೆ ಅಧಿಕಾರಿಗಳನ್ನು ಒತ್ತಾಯಿಸಿದ್ದರು. ಆದರೂ, ನಗರಸಭೆ ಇಲ್ಲಿವರೆಗೂ ನಗರದ ಜೋಡಿ ರಸ್ತೆಯಲ್ಲಿ ಕೆಟ್ಟು ನಿಂತಿರುವ ಬೀದಿದೀಪ ಸರಿಪಡಿಸುವ ಗೋಜಿಗೆ ಹೋಗಿಲ್ಲ ಎನ್ನುತ್ತಾರೆ ಸ್ಥಳೀಯರು. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಕನಕಪುರ ನಗರವನ್ನು ರಾಜ್ಯದಲ್ಲೇ ಮಾದರಿ ನಗರವನ್ನಾಗಿ ಮಾಡಿದ್ದಾರೆ. ಮಾದರಿ ನಗರದಲ್ಲಿ ಜನರು ಬೆಳಕಿಲ್ಲದೆ ಕತ್ತಲೆಯಲ್ಲಿ ಪರದಾಡುತ್ತಿದ್ದಾರೆ. ಈಗಲಾದರೂ ಅಧಿಕಾರಿಗಳಿಗೆ ಸೂಚನೆ ನೀಡಿ ಬೀದಿದೀಪ ಸರಿಪಡಿಸಬೇಕು ಎನ್ನುವುದು ನಾಗರಿಕರ ಒತ್ತಾಯ.

# ಸರಕಾರಕ್ಕೆ ಲಕ್ಷಾಂತರ ರೂ. ತೆರಿಗೆ ವಂಚನೆ

## ಪ್ರಯಾಣಿಕೆ ಸುರಕ್ಷತೆಗೆ ನಿರ್ಲಕ್ಷ್ಯ: 32 ಐಷಾರಾಮಿ ಖಾಸಗಿ ಬಸ್‌ಗಳು ಜಪ್ತಿ

• ಉದಯವಾಹಿನಿ, ಕೋಲಾರ

ರಾಜ್ಯ ಸರಕಾರಕ್ಕೆ ಲಕ್ಷಾಂತರ ರೂ. ತೆರಿಗೆ ವಂಚಿಸಿ ಸಂಚರಿಸುತ್ತಿದ್ದ ಅಂತಾರಾಜ್ಯ ಖಾಸಗಿ ಬಸ್‌ಗಳ ವಿರುದ್ಧ ಸಾರಿಗೆ ಇಲಾಖೆ ಅಧಿಕಾರಿಗಳು ಕ್ರಮಕ್ಕೆ ಮುಂದಾಗಿದ್ದು, ಬೆಳ್ಳಂಬೆಳಗ್ಗೆ ಕಾರ್ಯಾಚರಣೆ ನಡೆಸಿ 32ಕ್ಕೂ ಹೆಚ್ಚು ಐಷಾರಾಮಿ ಬಸ್‌ಗಳನ್ನು ಜಪ್ತಿ ಮಾಡಿದ್ದಾರೆ. ಕಾನೂನು ಬಾಹಿರವಾಗಿ ಖಾಸಗಿ ಬಸ್‌ಗಳು ಕಾರ್ಯಾಚರಣೆ ನಡೆಸುತ್ತಿರುವ ಬಗ್ಗೆ ಹಿಂದಿನಿಂದಲೂ ದೂರುಗಳಿವೆ. ಇತ್ತೀಚೆಗೆ ಐಷಾರಾಮಿ ಬಸ್‌ನಲ್ಲಿ ಅಗ್ನಿ ಅವಘಡ ಸಂಭವಿಸಿ ಹತ್ತಾರು ಮಂದಿ ಪ್ರಾಣ ಕಳೆದುಕೊಂಡ ಬಳಿಕ ಆರ್‌ಟಿಒ ಅಧಿಕಾರಿಗಳು ಎಚ್ಚೆತ್ತುಕೊಂಡಿದ್ದಾರೆ.

- ರಾಜ್ಯ ಸರಕಾರಕ್ಕೆ ಲಕ್ಷಾಂತರ ರೂ. ತೆರಿಗೆ ವಂಚಿಸುತ್ತಿದ್ದ ಅಂತಾರಾಜ್ಯ ಖಾಸಗಿ ಬಸ್ ವಿರುದ್ಧ ಕಾರ್ಯಾಚರಣೆ
- ಪ್ರಯಾಣಿಕರ ಸುರಕ್ಷತೆಗೆ ನಿರ್ಲಕ್ಷ್ಯ ತೋರುತ್ತಿರುವ ಖಾಸಗಿ ಬಸ್ ಮಾಲೀಕರು

ಅದರಂತೆ ನಸುಕಿನಲ್ಲಿ ಬೆಂಗಳೂರು-ಚೆನ್ನೈ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಕಾನೂನು ಬಾಹಿರವಾಗಿ ಸಂಚರಿಸುತ್ತಿದ್ದ ಬಸ್‌ಗಳಿಗೆ ಬಿಸಿ ಮುಟ್ಟಿಸಿದ್ದು, ಬೇರೆ ರಾಜ್ಯಗಳಲ್ಲಿ ನೋಂದಣಿಯಾಗಿ, ಆಲ್ ಇಂಡಿಯಾ ಟೂರಿಸ್ಟ್ ಪರವಾನಿಗೆ ಅಡಿಯಲ್ಲಿ ರಾಜ್ಯದಲ್ಲಿ ನಿಯಮ ಬಾಹಿರವಾಗಿ ಸಂಚರಿಸುತ್ತಿದ್ದ ಸ್ಲೀಪರ್ ಕೋಚ್ ಮತ್ತು ಹೈಟೆಕ್ ಬಸ್‌ಗಳನ್ನು ಜಪ್ತಿ ಮಾಡಿದ್ದಾರೆ. ಜಪ್ತಿ ಕಾರ್ಯಾಚರಣೆ ವೇಳೆ ಬಸ್‌ಗಳಲ್ಲಿದ್ದ ಪ್ರಯಾಣಿಕರಿಗೆ ತಕ್ಷಣವೇ ಸಾರಿಗೆ ಇಲಾಖೆ ಅಧಿಕಾರಿಗಳು ಕೆಎಸ್‌ಆರ್‌ಟಿಸಿ ಬಸ್ ವ್ಯವಸ್ಥೆ ಮಾಡಿಕೊಡುವ ಮೂಲಕ ಪ್ರಯಾಣಕ್ಕೆ ತೊಂದರೆಯಾಗದಂತೆ ನೋಡಿಕೊಂಡಿದ್ದಾರೆ. ಜಪ್ತಿ ಮಾಡಿದ 30ಕ್ಕೂ ಹೆಚ್ಚು ಬಸ್‌ಗಳ ತೆರಿಗೆ ವಸೂಲಿ ಮಾಡಲಾಗಿದ್ದು,

ಉದಯವಾಹಿನಿ ಚಿತ್ರ

**ತೆರಿಗೆ ಬಾಕಿ ವಸೂಲಿ**

**ರಾಜ್ಯ ಸರಕಾರಕ್ಕೆ ತೆರಿಗೆ ವಂಚಿಸುತ್ತಿದ್ದ 32ಕ್ಕೂ ಹೆಚ್ಚು ಐಷಾರಾಮಿ ಖಾಸಗಿ ಬಸ್‌ಗಳನ್ನು ಸಾರಿಗೆ ಇಲಾಖೆ ಅಧಿಕಾರಿಗಳು ಕೋಲಾರದಲ್ಲಿ ಜಪ್ತಿ ಮಾಡಿದ್ದಾರೆ. ಪ್ರಯಾಣಿಕರ ಸುರಕ್ಷತೆ ನಿರ್ಲಕ್ಷಿಸಿ, ಕಾನೂನು ಬಾಹಿರವಾಗಿ ಕಾರ್ಯಾಚರಣೆ ನಡೆಸುತ್ತಿದ್ದ ಬಸ್‌ಗಳ ವಿರುದ್ಧ ಈ ಕ್ರಮ ಕೈಗೊಳ್ಳಲಾಗಿದೆ. ತೆರಿಗೆ ಬಾಕಿ ವಸೂಲಿ ಹಾಗೂ ಸುರಕ್ಷತಾ ಲೋಪಗಳ ತನಿಖೆ ಮುಂದುವರೆಯಲಿದೆ.**

ನ್ಯಾಯಾಲಯದ ಆದೇಶ ಹೊರತುಪಡಿಸಿ ಉಳಿದಂತೆ ರಾಜ್ಯ ತೆರಿಗೆ ವಸೂಲಿ ಮಾಡುವವರೆಗೆ ಕಾರ್ಯಾಚರಣೆ ಮುಂದುವರಿಸಲು ಅಧಿಕಾರಿಗಳು ನಿರ್ಧರಿಸಿದ್ದಾರೆ.

**ಸುರಕ್ಷತೆಗಿಂತಲೂ ಲಾಭಕ್ಕೆ ಆದ್ಯತೆ:** ಕೆಲ ಖಾಸಗಿ ಬಸ್ ಮಾಲೀಕರು ಆದಾಯದ ಮೇಲೆ ಮಾತ್ರ ಹೆಚ್ಚಿನ ಗಮನ ಹರಿಸಿದ್ದು, ಪ್ರಯಾಣಿಕರ ಸುರಕ್ಷತೆಗೆ ನಿರ್ಲಕ್ಷ್ಯ ತೋರುತ್ತಿದ್ದಾರೆ. ಅಪಘಾತ, ಅವಘಡ ಸಂಭವಿಸಿದ ಸಂದರ್ಭದಲ್ಲಿ ಇರಬೇಕಾದ ಕನಿಷ್ಠ ಸುರಕ್ಷತೆಗಳನ್ನು ಪ್ರವಾಸಿ ಬಸ್‌ಗಳಲ್ಲಿ ಅಳವಡಿಸಿಲ್ಲ. ತುರ್ತು ನಿರ್ಗಮನ ದ್ವಾರಗಳು ಅಸಮರ್ಪಕವಾಗಿದ್ದು,

**ಕೆಲವೊಂದು ಖಾಸಗಿ ಬಸ್ ಮಾಲೀಕರು ಸಮರ್ಪಕವಾಗಿ ತೆರಿಗೆ ಪಾವತಿಸುತ್ತಿಲ್ಲ. ಜತೆಗೆ ಫಿಟ್‌ನೆಸ್ ಪ್ರಮಾಣಪತ್ರ ಇಲ್ಲದ ಬಸ್‌ಗಳನ್ನು ಬಳಕೆ ಮಾಡುತ್ತಿದ್ದು, ನಮ್ಮ ರಸ್ತೆಗಳನ್ನು ಬಳಸಿಕೊಂಡು ರಾಜ್ಯ ಸರಕಾರಕ್ಕೆ ತೆರಿಗೆ ವಂಚನೆ ಮಾಡುತ್ತಿದ್ದಾರೆ. ಆ ಹಿನ್ನೆಲೆಯಲ್ಲಿ ಕಾರ್ಯಾಚರಣೆ ಆರಂಭಿಸಿದ್ದು, ಇಂತಹ ಬಸ್‌ಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು.**

-ಗಾಯತ್ರಿದೇವಿ, ಜಂಟಿ ಆಯುಕ್ತೆ, ಸಾರಿಗೆ ಇಲಾಖೆ

ನಿಯಮಗಳು ಪಾಲನೆಯಾಗಿಲ್ಲ ಎಂದು ಅಧಿಕಾರಿಗಳು ಗಂಭೀರ ಆರೋಪ ಮಾಡಿದ್ದಾರೆ.

**ತೆರಿಗೆ ಬಾಕಿ ಹಾಗೂ ಸುರಕ್ಷತಾ ಲೋಪ:** ಸಾರಿಗೆ ಇಲಾಖೆ ಜಂಟಿ ಆಯುಕ್ತೆ ಗಾಯತ್ರಿದೇವಿ ಅವರ ನೇತೃತ್ವದ 15 ಮಂದಿ ಅಧಿಕಾರಿಗಳ ತಂಡ ಕಾರ್ಯಾಚರಣೆ ನಡೆಸಿದ್ದು, ವಶಪಡಿಸಿಕೊಂಡಿರುವ ಬಸ್‌ಗಳು ಸದೃಢವಾಗಿಲ್ಲದಿರುವುದು ಕಂಡುಬಂದಿದೆ. ಇದರೊಂದಿಗೆ ಸರಕಾರಕ್ಕೆ ಲಕ್ಷಾಂತರ ರೂ. ತೆರಿಗೆ ಪಾವತಿಸದೆ ಬಾಕಿ ಉಳಿಸಿಕೊಂಡಿರುವುದು ಕಂಡುಬಂದಿದೆ.

**ಕೋಲಾರ ಅಧಿಕಾರಿಗಳು ಸುಮ್ಮನಿದ್ದಿದ್ದು ಯಾಕೆ?:** ಶಾಸಕ ಕೊತ್ತೂರು ಮಂಜುನಾಥ್ ಅವರು ಹಲವು ಸಭೆಗಳಲ್ಲಿ ಖಾಸಗಿ ಬಸ್‌ಗಳು ಪರ್ಮಿಟ್ ಇಲ್ಲದೆ ಸಂಚರಿಸುತ್ತಿರುವ, ನಿಯಮಗಳನ್ನು ಉಲ್ಲಂಘಿಸುತ್ತಿರುವ ಬಗ್ಗೆ ಗಮನ ಸೆಳೆದಿದ್ದರು. ಆದರೆ, ಕೋಲಾರದ ಆರ್‌ಟಿಒ ಅಧಿಕಾರಿಗಳು ವಿಷಯ ಗೊತ್ತಿದ್ದೂ ಸುಮ್ಮನಿದ್ದಿದ್ದು ಯಾಕೆ? ಶಾಸಕರು ಹೇಳಿದ ಬಳಿಕವೂ ಕ್ರಮಕ್ಕೆ ಮುಂದಾಗದಿರುವುದನ್ನು ಗಮನಿಸಿದರೆ ಖಾಸಗಿಯವರೊಂದಿಗೆ ಅಧಿಕಾರಿಗಳ ಒಪ್ಪಂದವಾಗಿತ್ತೇ? ಎಂಬ ಸಂಶಯ ಮೂಡುವಂತೆ ಮಾಡಿದೆ.

# ಕಾಂಗ್ರೇಸ್‌ಗೆ ಪ್ರದರ್ಶನಕ್ಕಷ್ಟೇ ಸಂವಿಧಾನ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕಾಂಗ್ರೇಸ್ ಪಕ್ಷಕ್ಕೆ ಸಂವಿಧಾನದ ಬಗ್ಗೆ ಕಾಳಜಿ ಇಲ್ಲ. ಸಂವಿಧಾನ ಪ್ರತಿ ಹಿಡಿದು ಬರಿ ಪ್ರದರ್ಶನವನ್ನಷ್ಟೇ ಮಾಡುವರಷ್ಟೇ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಟೀಕಿಸಿದರು. ನಗರದಲ್ಲಿ ಬಿಜೆಪಿಯಿಂದ ನಡೆದ ಸಂವಿಧಾನ ಸಮರ್ಪಣಾ ದಿನ, ಭೀಮ ಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು ಸಂವಿಧಾನವನ್ನು ಅಪಮಾನಿಸುವ ಕೆಲಸಗಳು ರಾಜ್ಯದಲ್ಲಿ ನಡೆಯುತ್ತಿವೆ. ಆಡಳಿತ ನಡೆಸುವವರು ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸಬೇಕು ಎಂದು ಸಂವಿಧಾನ ಹೇಳುತ್ತದೆ. ಆದರೆ ಇವರು ಕುರ್ಚಿಗಾಗಿ ಕಾದಾಡುತ್ತಿದ್ದಾರೆ. ಜನರ ಸಮಸ್ಯೆಗಳನ್ನು ಮರೆತಿದ್ದಾರೆ ಎಂದರು.

ಕಬ್ಬು ಬೆಳೆಗಾರರ ಸಮಸ್ಯೆ ಈಡೇರಿಸಲು ಸಾಧ್ಯವಾಗಲಿಲ್ಲ. ಕ್ವಿಂಟಲ್‌ಗೆ 3,500 ಬೆಲೆ ನೀಡಲು ಸಾಧ್ಯವಾಗಲಿಲ್ಲ. ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಮಾಡದೆ ರೈತರಿಗೆ ಅಪಮಾನ ಮಾಡಿದ್ದಾರೆ ಎಂದು ದೂರಿದರು. ಬಿಜೆಪಿ ಸಾರ್ವಜನಿಕರ

ಉದಯವಾಹಿನಿ ಚಿತ್ರ

ಹಿತಕ್ಕಾಗಿ ಸಂವಿಧಾನಕ್ಕೆ ತಿದ್ದುಪಡಿ ಮಾಡಿದೆ. ಆದರೆ ಕಾಂಗ್ರೇಸ್ ಆ ರೀತಿಯಲ್ಲಿ ಮಾಡಲಿಲ್ಲ ಎಂದು ಟೀಕಿಸಿದರು.

ಮಾಜಿ ಸಂಸದ ಎಸ್.ಮುನಿಸ್ವಾಮಿ ಮಾತನಾಡಿ, ಅಂಬೇಡ್ಕರ್ ಅವರು ಸಂಸತ್ತಿಗೆ ಬರಬಾರದು ಎಂದು ಅವರನ್ನು ಸೋಲಿಸಿದ್ದು ಕಾಂಗ್ರೇಸ್. ಆದರೆ ಈಗ ಯಾವಾಗಲೂ ಅಂಬೇಡ್ಕರ್ ಅವರ ಭಾವಚಿತ್ರವನ್ನು ಹಿಡಿಯುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿದರು. ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ನಗರದಲ್ಲಿ ಅಳವಡಿಸಿದ್ದ ಅಂಬೇಡ್ಕರ್ ಅವರ ಬ್ಯಾನರ್‌ಗಳನ್ನು ಇಲ್ಲಿನ ಶಾಸಕರು ತೆಗೆಸಿದ್ದಾರೆ. ಇವರು ಅಂಬೇಡ್ಕರ್ ಅವರ ಮನೆಯಲ್ಲಿ ಹುಟ್ಟಿದ ರೀತಿಯಲ್ಲಿ ಮಾತನಾಡುತ್ತಾರೆ ಎಂದರು.

ಕಾಂಗ್ರೇಸ್ ಪಕ್ಷವು ದಲಿತರ ಕಲ್ಯಾಣಕ್ಕೆ ಮೀಸಲಿಟ್ಟಿದ್ದ ಎಸ್‌ಸಿಪಿ ಮತ್ತು ಟಿಎಸ್‌ಪಿ ಹಣವನ್ನು ನುಂಗಿ ನೀರು ಕುಡಿದಿದೆ. ಕಾಂಗ್ರೇಸ್‌ಗೆ ದಲಿತರ ಬಗ್ಗೆ ಕಾಳಜಿ ಇಲ್ಲ. ಅಂಬೇಡ್ಕರ್ ಅವರಿಗೆ ಗೌರವ ಕೊಡುವ ಪಕ್ಷ ಬಿಜೆಪಿ. ರಾಜ್ಯದಲ್ಲಿ ರಸ್ತೆಗಳ ಗುಂಡಿ ಮುಚ್ಚಲು ಸಾಧ್ಯವಾಗಿಲ್ಲ ಎಂದು ಟೀಕಿಸಿದರು.

**ಪ್ರಧಾನಿ ನರೇಂದ್ರ ನರೇಂದ್ರ ಮೋದಿ ಅವರು ಅಭಿವೃದ್ಧಿಯ ವಿಚಾರವಾಗಿ ಎಲ್ಲಾ ವರ್ಗದವರಿಗೆ ಸಮಾನ ಕೊಡುಗೆಗಳನ್ನು ನೀಡಿದ್ದಾರೆ.**

– ರಾಮಚಂದ್ರಗೌಡ ಬಿಜೆಪಿ ಜಿಲ್ಲಾ ಅಧ್ಯಕ್ಷ ಸೀಕಲ್

# ರಸ್ತೆ ದಾಟುತ್ತಿದ್ದ ಹಸುವಿಗೆ ಟಿಪ್ಪರ್ ಡಿಕ್ಕಿ

• ಉದಯವಾಹಿನಿ, ಗುಂಡ್ಲುಪೇಟೆ

ರಸ್ತೆ ದಾಟುತ್ತಿದ್ದ ಹಸುವಿಗೆ ವೇಗವಾಗಿ ಬಂದ ಟಿಪ್ಪರ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಹಸು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಪಟ್ಟಣದ ಸುರಭಿ ಸಮೀಪ ನಡೆದಿದ್ದು ಕೇರಳ ಟಿಪ್ಪರ್ ಲಾರಿಗಳ ಅಬ್ಬರಕ್ಕೆ ಅಂಕುಶ ಹಾಕುವಲ್ಲಿ ತಾಲ್ಲೂಕು ಆಡಳಿತ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.

ಹೊಸೂರು ಗ್ರಾಮದ ಕೃಷ್ಣಪ್ಪ ಎಂಬವರಿಗೆ ಸೇರಿದ ಹಸು ರಸ್ತೆ ದಾಟುತ್ತಿದ್ದ ವೇಳೆ ವೇಗವಾಗಿ ಬಂದಂತಹ ಕೆ.ಎಲ್. 32 ಎಸ್ 7076 ನೋಂದಣೀಯ ಟಿಪ್ಪರ್ ಡಿಕ್ಕಿ ಹೊಡೆದ ರಭಸಕ್ಕೆ ಸ್ಥಳದಲ್ಲೇ ಸಾವನ್ನಪ್ಪಿದ ಹಿನ್ನೆಲೆ, ಚಾಲಕನನ್ನ ತರಾಟೆಗೆ ತೆಗೆದುಕೊಂಡ ಸಾರ್ವಜನಿಕರು ಪರಿಹಾರ ನೀಡುವಂತೆ ಪಟ್ಟುಹಿಡಿದರು.

ಪರಿಸ್ಥಿತಿ ವಿಕೋಪಕ್ಕೆ ತಿರುಗುತ್ತಿದ್ದನ್ನ ಗ್ರಹಿಸಿದ ಲಾರಿ ಮಾಲೀಕ ಹಸು ಕಳೆದುಕೊಂಡ ರೈತನಿಗೆ ಪರಿಹಾರ ನೀಡಿದ್ದಾನೆ. ಇತ್ತ ಪ್ರತಿನಿತ್ಯ ನೂರಾರು ಕೇರಳ ಟಿಪ್ಪರ್‌ಗಳು ಎಗ್ಗಿಲ್ಲದೆ ಸಂಚರಿಸುತ್ತಿದ್ದರು ಸಂಬಂದಪಟ್ಟ ಇಲಾಖೆ ಅಧಿಕಾರಿಗಳು ಜಾಣ ಮೌನಕ್ಕೆ ಶರಣಾಗಿದ್ದಾರೆ ಎಂದು ಬೇಸರ ಹೊರಹಾಕಿದ್ದಾರೆ.

ಉದಯವಾಹಿನಿ ಚಿತ್ರ

**ಇತ್ತೀಚೆಗೆ ಪಟ್ಟಣದಲ್ಲಿ ಕೇರಳ ಟಿಪ್ಪರ್ ಲಾರಿಗಳ ಆರ್ಭಟ ಹೆಚ್ಚಾಗಿದೆ, ಚಾಲಕರ ವೇಗಕ್ಕೆ ಸಾರ್ವಜನಿಕರು ತತ್ತರಿಸಿಹೋಗಿದ್ದಾರೆ, ಬಾರಿ ಗಾತ್ರದ ವಾಹನಗಳನ್ನ ಅತಿವೇಗವಾಗಿ ಚಲಾಯಿಸಿದ ಹಿನ್ನೆಲೆ ಹಲವಾರು ಅಪಘಾತಗಳು ನಡೆದಿದ್ದು ಸಾವು ನೋವುಗಳು ಸಂಭವಿಸಿವೆ ಆದುದರಿಂದ ಸಂಬಂದಪಟ್

## ಅಂತರಾಳದಿಂದ... EDITORIAL

# ಜೆಡಿಎಸ್-25: ಸಾಧ್ಯತೆಗಳಿಗೆ ಬೆನ್ನು ಇನ್ನೂ ಇದೆ ಹೊಸಹುಟ್ಟಿನ ಅವಕಾಶ



ಕರ್ನಾಟಕದ ಅಸ್ಮಿತೆ. ಸ್ಥಳೀಯ ಹಕ್ಕುಗಳಿಗೆ ಆದ್ಯತೆ, ಕನ್ನಡಿಗರ ಹಿತಾಸಕ್ತಿ ಕಾಪಾಡುವ ಬದ್ಧತೆಯೊಂದಿಗೆ ತನ್ನ ಆರಂಭಿಕ ದಿನಗಳಲ್ಲಿ ಭರವಸೆಯ ಹೊನ್ನಕಿರಣಗಳನ್ನು ಜೆಡಿಎಸ್ (ಜನತಾದಳ ಜಾತ್ಯತೀತ) ಮೂಡಿಸಿತ್ತು. ಒಂದು ಪ್ರಾದೇಶಿಕ ಪಕ್ಷದ ಚರಿತ್ರೆಯೊಳಗೆ ಮಹತ್ತು ಎನಿಸಿರುವ 25 ವಸಂತಗಳನ್ನು ಜೆಡಿಎಸ್ ಪೂರೈಸಿದೆ. ಒಂದು ಕಾಲದಲ್ಲಿ ಹೆಮ್ಮರವಾಗಿ ರಾಷ್ಟ್ರೀಯ ಪಕ್ಷವೆಂಬ ಹಮ್ಮು ಬೆಳೆಸಿಕೊಂಡಿದ್ದ ಕಾಂಗ್ರೆಸ್‌ಗೆ ಸಡ್ಡು ಹೊಡೆದಂತೆ ಒಡಮೂಡಿದ ಜನತಾ ಪರಿವಾರ ನಂತರ ದೇಶವನ್ನೇ ಆಳಿದ್ದು ಇತಿಹಾಸ, 1977ರಿಂದ ಸತತವಾಗಿ ವಿಘಟನೆಯ ಮಹಾಹೊಡೆತಕ್ಕೆ ಸಿಕ್ಕಿ ಜನತಾ ಪರಿವಾರ ಛಿದ್ರಗೊಂಡಿತು. ಜನತಾ ಹೆಸರನ್ನೇ ಉಳಿಸಿಕೊಂಡು, ಆಯಾ ರಾಜ್ಯಗಳ ನೇತಾರರ ಪಕ್ಷವಾಗಿ ಸೀಮಿತ ಪರಿಧಿಯೊಳಗೆ ಈಗ ತನ್ನ ಅಸ್ತಿತ್ವವನ್ನು ಉಳಿಸಿಕೊಂಡಿದೆ. ಕರ್ನಾಟಕದ ರಾಜಕೀಯ ಚರಿತ್ರೆಯನ್ನು ನೋಡಿದರೆ ಜನತಾ ಪಕ್ಷ, ಸಮಾಜವಾದಿ ಜನತಾದಳ, ಜನತಾದಳ, ಜನತಾದಳ ಸಂಯುಕ್ತ, ಜನತಾದಳ ಜಾತ್ಯತೀತ, ಅಖಿಲ ಭಾರತ ಪ್ರಗತಿಪರ ಜನತಾದಳ, ಹೀಗೆ ವಿದಳಗಳಾಗಿ ವಿಭಜನೆಗೊಳ್ಳುತ್ತಲೇ ಸಾಗಿ ಬಂದಿದೆ. 1999ರಲ್ಲಿ ಸ್ಥಾಪನೆಯಾದ ಜೆಡಿಎಸ್. 2000 ಇಸವಿಯ ನವೆಂಬರ್ 24ರಂದು ಅಧಿಕೃತವಾಗಿ ನೋಂದಣಿಯಾಯಿತು. ಬೆಳ್ಳಿಹಬ್ಬದ ಸಡಗರದಲ್ಲಿರುವ ಈ ಪಕ್ಷ 25 ವರ್ಷಗಳಲ್ಲಿ ವಸಂತವನ್ನೇನೂ ಕಂಡಿಲ್ಲ. 2004ರಲ್ಲಿ ಎನ್. ಧರಂಸಿಂಗ್ ನೇತೃತ್ವದ ಮೈತ್ರಿ ಸರ್ಕಾರದಲ್ಲಿ ಆಗ ಜೆಡಿಎಸ್ ಮುಂದಾಳಾಗಿದ್ದ ಸಿದ್ದರಾಮಯ್ಯ ಉಪ ಮುಖ್ಯಮಂತ್ರಿಯಾಗಿದ್ದರು. ಬಳಿಕ ಎರಡು ಬಾರಿ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿಯಾಗುವ ಯೋಗ ದಕ್ಕಿತೇ ಹೊರತು, ಸ್ವಂತ ಬಲದ ಮೇಲೆ ಅಧಿಕಾರ ರಚಿಸುವ ಜನಾದೇಶ ಸಿಗಲಿಲ್ಲ. ಬೇಲಿಯ ಮೇಲೆ ಕುಳಿತು ಫಸಲು ತೆಗೆಯುವ ಅಭ್ಯಾಸಕ್ಕೆ ಒಗ್ಗಿಕೊಂಡ ನಾಯಕರು, ತಳಮಟ್ಟದಲ್ಲಿ ಪಕ್ಷವನ್ನು ಸಂಘಟಿಸಲು ಅಗತ್ಯವಾದ ಕಾರ್ಯತಂತ್ರ ಹೆಣೆಯಲಿಲ್ಲ. ಎರಡನೇ ಹಂತದ ನಾಯಕತ್ವವನ್ನು ಬೆಳೆಸುವ ಗೋಜಿಗೂ ಹೋಗಲಿಲ್ಲ. ಇಂತಹ ಹೊತ್ತಿನೊಳಗೆ, ಬೆಳ್ಳಿಹಬ್ಬದ ಆಚರಣೆ ಎಂಬುದು ಪಕ್ಷ ನಡೆದು ಬಂದ ಹಾದಿಯ ಆತ್ಮಾವಲೋಕನ, ಭವಿಷ್ಯದಲ್ಲಿ ಪಕ್ಷದ ಪುನರುತ್ಥಾನದ ಹೊಸ ದಾರಿಗಳ ಅನ್ವೇಷಣೆಗೆ ವೇದಿಕೆ ಆಗಬೇಕಿತ್ತು. ಆದರೆ, ದೇವೇಗೌಡ, ಕುಮಾರಸ್ವಾಮಿಯವರ ಹೊಗಳಿಕೆ, ಅನ್ಯ ಪಕ್ಷಕ್ಕೆ ಹಾರಿ ನೆಲೆ ಕಂಡುಕೊಂಡವರ ಹೀಗಳಿಕೆಗಷ್ಟೇ ಸೀಮಿತವಾಗಿಬಿಟ್ಟಿತು. ಅಧಿಕಾರಕ್ಕಾಗಿ ಯಾವುದೇ ಪಕ್ಷದ ಜತೆಗಾದರೂ ಹೊಂದಾಣಿಕೆ ಮಾಡಿ ಕೊಳ್ಳುವ ಪ್ರವೃತ್ತಿಯನ್ನು ಅನೇಕ ಪ್ರಾದೇಶಿಕ ಪಕ್ಷಗಳು ಮಾಡಿಕೊಂಡೇ ಬಂದಿವೆ. ಜೆಡಿಎಸ್ ಕೂಡ ಇದಕ್ಕೆ ಭಿನ್ನವಲ್ಲ. ಅಧಿಕಾರಕ್ಕಾಗಿ ಯಾವುದೇ ಪಕ್ಷದ ಜತೆಗೆ ಹೋಗುವ ಅವಕಾಶವಾದಿತನವೇ ಜೆಡಿಎಸ್‌ಗೆ ಮುಳುವಾಗಿದೆ. ಕರ್ನಾಟಕದಲ್ಲಿ ಅಸ್ತಿತ್ವಕ್ಕೆ ಬಂದಾಗ ಪ್ರಬಲ ಪ್ರಾದೇಶಿಕ ಪಕ್ಷವಾಗಿ ಬೆಳೆಯುವ ಎಲ್ಲಾ ಸಾಮರ್ಥ್ಯ ತೋರಿಸಿದ್ದ ಜೆಡಿಎಸ್ ಈಗ,

**ರಾಷ್ಟ್ರೀಯ ಪಕ್ಷಗಳನ್ನೇ ತನ್ನ ಅಧಿಕಾರಕ್ಕೆ ಊರುಗೋಲಾಗಿ ಮಾಡಿಕೊಂಡಿದೆ:** ಕುಟುಂಬ ರಾಜಕಾರಣವನ್ನೇ ಹೊದ್ದುಕೊಂಡು ಕುಳಿತಿದೆ ಹಾಗೂ ಅದು ಅಂತಿಮ ಅನಿವಾರ್ಯ ಸ್ಥಿತಿ ಎಂದು ಪಕ್ಷದ ವರಿಷ್ಠರು ಈಗಲೂ ಪ್ರತಿಪಾದಿಸುವುದುಂಟು. ಕರ್ನಾಟಕದಲ್ಲಿ ಪ್ರಾದೇಶಿಕ ಪಕ್ಷ ಕಟ್ಟುವ ಅನೇಕ ಪ್ರಯತ್ನಗಳು ನಡೆದಿವೆ. ಆದರೆ, ಅದರಲ್ಲಿ ಗೆದ್ದವರು ಕಡಿಮೆ. ನಿಜಲಿಂಗಪ್ಪ, ದೇವರಾಜ ಅರಸು, ಬಂಗಾರಪ್ಪ, ರಾಮಕೃಷ್ಣ ಹೆಗಡೆ, ಯಡಿಯೂರಪ್ಪ, ರೈತ ಸಂಘಟನೆ ನೇತಾರ ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅವರಂತಹ ಪ್ರಭಾವಿಗಳೂ ಪ್ರಾದೇಶಿಕ ಪಕ್ಷ ಕಟ್ಟುವ ಯತ್ನ ಮಾಡಿ ಸೋತಿದ್ದಾರೆ. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಬಿ ಪಿಜೆಡಿ ಕಟ್ಟಿ, ಅದನ್ನು ಮಧ್ಯದಲ್ಲೇ ಕೈಬಿಟ್ಟವರು. ಹಾಗೆಂದು. ಕರ್ನಾಟಕದಲ್ಲಿ ಪ್ರಾದೇಶಿಕ ಪಕ್ಷಕ್ಕೆ ನೆಲೆ ಇಲ್ಲ ಎಂದರ್ಥವಲ್ಲ, ರಾಜ್ಯದ ಜನರ ಭಾವನೆ. ನಾಡು ನುಡಿ ಕುರಿತ ನೈಜ ಕಳಕಳಿ, ಸಂಘಟನೆಯ ಚಾಣಾಕ್ಷ ತಂತ್ರಗಾರಿಕೆ ಅನುಸರಿಸಿದರೆ ಯಶಸ್ಸು ಈಗಲೂ ಇದೆ. ರಾಷ್ಟ್ರೀಯ ಪಕ್ಷಗಳು ರಾಜ್ಯಗಳನ್ನು ತಮ್ಮ ಸಾಮಂತರಂತೆ, ರಾಜ್ಯದ ಘಟಕವನ್ನು ಅಡಿಯಾಳಂತೆ ಭಾವಿಸಿ 'ಬುಲಾವ್' ಪದ್ಧತಿಯನ್ನು ಚಾಲ್ತಿಯಲ್ಲಿಟ್ಟುಕೊಂಡೇ ಬಂದಿವೆ. ಪ್ರಾದೇಶಿಕ ಪಕ್ಷ ಬಲಿಷ್ಠವಾಗಿದ್ದರೆ ನಾಡು ನಾಡವರ ಹಿತ ಕಾಪಾಡುವಲ್ಲಿ ಬದ್ಧತೆ ತೋರಲು ಸಾಧ್ಯ. ಜೆಡಿಎಸ್‌ಗೆ ಇಂತಹ ಅವಕಾಶದ ಬಾಗಿಲು ಈಗಲೂ ತೆರೆದಿದೆ. ತನ್ನ ಚಿಹ್ನೆಯಾದ ತೆನೆಯ ಕಾಳುಗಳನ್ನು ರಾಜ್ಯದಾದ್ಯಂತ ಹೊಲ ಗದ್ದೆಗಳಲ್ಲಿ ಉದುರಿಸಿ, ಬೆಳೆವಂತೆ ಮಾಡಿದರಷ್ಟೇ ಅದಕ್ಕೆ ಭವಿಷ್ಯ ಇದೆ. ಇದರ ಜತೆಗೆ, ಕುಟುಂಬ ರಾಜಕಾರಣದ ಪೊರೆ ಕಳಚಿ, ಜೆಡಿಎಸ್‌ನ ವೈಶಿಷ್ಟ್ಯಗಳಾದ ಪ್ರಾದೇಶಿಕತೆ, ಕರ್ನಾಟಕದ ಅಸ್ಮಿತೆ, ಜಾತ್ಯತೀತತೆಯ ಗರಿಗಳನ್ನು ಮತ್ತೆ ಮುಡಿಗೇರಿಸಿ, ಆತ್ಮದ ನುಡಿಗಾನವಾಗಿ ಮಾಡಿಕೊಂಡಾಗಷ್ಟೇ ಹೊಸದಾರಿಗಳು ತೆರೆದು ಬೆಳಕಿನ ರೇಖೆಗಳು ಚಿಮ್ಮಿ ಬಂದಾವು.

> **ಕಾಂಗ್ರೆಸ್‌ನ ದಬ್ಬಾಳಿಕೆಗೆ ಎದುರಾಗಿ, ರಾಜ್ಯದ ಹಿತಾಸಕ್ತಿಯನ್ನು ಕಾಪಾಡುವ ಸಂಕಲ್ಪ ದಿಂದ ಹುಟ್ಟಿಕೊಂಡ ಪ್ರಾದೇಶಿಕ ಪಕ್ಷಗಳು ಈಗಲೂ ಅನೇಕ ರಾಜ್ಯಗಳಲ್ಲಿ ಪ್ರಬಲವಾಗಿಯೇ ಇವೆ. ದಶಕದ ಈಚೆಗೆ ಕಾಂಗ್ರೇಸ್ ಸ್ಥಾನವನ್ನು ಆಕ್ರಮಿಸಿಕೊಂಡ ಬಿಜೆಪಿಗೆ ಸವಾಲು ಒಡ್ಡುವಂತೆ ಕೆಲವು ರಾಜ್ಯಗಳ ರಾಜಕೀಯ ಪಕ್ಷಗಳು ತಮ್ಮ ಬಲವನ್ನು ಕ್ರೋಢೀಕರಿಸಿಕೊಂಡು ಅಧಿಕಾರ ನಡೆಸುತ್ತಿವೆ.**

# ಡಾ.ಎಂ.ಎಸ್.ರಾಜೇಂದ್ರ ಕುಮಾರ್‌ಗೆ ವರ್ಲ್ಡ್ ಗ್ಲೋಬಲ್ ಇನ್‌ಫ್ಲುಯನ್ಸರ್ ಪ್ರಶಸ್ತಿ ಪ್ರದಾನ

## ● ನ್ಯೂಸ್ ಪೇಪರ್ಸ್ ಆಸೋಸಿಯೇಷನ್‌ನಿಂದ 70ನೇ ಕನ್ನಡ ರಾಜ್ಯೋತ್ಸವ

• ಉದಯವಾಹಿನಿ, ಬೆಂಗಳೂರು

ನ್ಯೂಸ್ ಪೇಪರ್ಸ್ ಆಸೋಸಿಯೇಷನ್ ಆಫ್ ಕರ್ನಾಟಕದಿಂದ 70ನೇ ಕನ್ನಡ ರಾಜ್ಯೋತ್ಸವ ಹಾಗೂ ಕನ್ನಡ ರಾಜ್ಯೋತ್ಸವ'' ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿತ್ತು. ನಗರದ ಪುಟ್ಟಣ್ಣ ಚೆಟ್ಟಿಪುರಭವನದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಕರ್ನಾಟಕ ವೈಭವ ಪ್ರತಿಬಿಂಬಿಸುವ ಎರಡು ಆನೆಗಳ ಕನ್ನಡ ರಾಜ್ಯೋತ್ಸವವನ್ನು ವೈಭವದಿಂದ ಆಯೋಜಿಸಲಾಯಿತು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಡಾ. ಎಂ.ಎಸ್. ರಾಜೇಂದ್ರ ಕುಮಾರ್ ಅವರಿಗೆ ವರ್ಲ್ಡ್ ಗ್ಲೋಬಲ್ ಇನ್‌ಫ್ಲುಯನ್ಸಲ್ ಪ್ರಶಸ್ತಿ ಪ್ರದಾನ ಮಾಡಲಾಯಿತು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿವಿ ವಿಶ್ರಾಂತ ಕುಲಪತಿ ಡಾ. ಎಸ್. ಚಂದ್ರಶೇಖರ್ ಶೆಟ್ಟಿ, ರಾಜೀವ್

ಗಾಂಧಿ ಆರೋಗ್ಯ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯಗಳ ವಿಶ್ರಾಂತ ಕುಲಪತಿ ಡಾ. ಎಸ್. ಸಚ್ಚಿದಾನಂದ, ಏರ್ ವೈಸ್ ಮಾರ್ಷಲ್ ಬಿ.ಕೆ. ಮುರಳಿ ಮತ್ತಿತರೆ ಗಣ್ಯರು ವೈದ್ಯಕೀಯ, ಸಾಮಾಜಿಕ ಸೇವೆ, ಶಿಕ್ಷಣ, ಸಾರ್ವಜನಿಕ ಕ್ಷೇತ್ರದ ಸಾಧಕರಿಗೆ 2025 ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಿದರು.

ಡಾ. ಎಂ.ಎಸ್. ರಾಜೇಂದ್ರ ಕುಮಾರ್ ಮಾತನಾಡಿ, ಪ್ರತಿ ವರ್ಷ ಅತ್ಯುತ್ತಮ ರೀತಿಯಲ್ಲಿ ಕಾರ್ಯಕ್ರಮ ನಡೆಸುತ್ತಿದ್ದು, ಕನ್ನಡದ ಕೆಲಸ ನಿಜಕ್ಕೂ ಸ್ತುತ್ಯಾರ್ಹವಾದದ್ದು. ಕನ್ನಡ ಥೇರನ್ನು ಎಳೆಯುವುದು ಪುಣ್ಯದ ಕೆಲಸ ಎಂದರು. ನ್ಯೂಸ್ ಪೇಪರ್ಸ್ ಆಸೋಸಿಯೇಷನ್ ಆಫ್ ಕರ್ನಾಟಕದ ಸಂಸ್ಥಾಪಕ ಅಧ್ಯಕ್ಷ ಎಚ್.ಎಂ. ಲಕ್ಷ್ಮಣ್ ಮತ್ತಿತರರು ಉಪಸ್ಥಿತರಿದ್ದರು.

# ಗೋಡಂಬಿ ಅಂದ್ರೆ ಇಷ್ಟನಾ?

ಗೋಡಂಬಿ ನಾಲಗೆಗೆ ರುಚಿಯನ್ನು ನೀಡುವಂತಹ ಡ್ರೈಫ್ರೂಟ್ಸ್ ಆಗಿದೆ. ಇದನ್ನು ಪ್ರತಿದಿನ ತಿನ್ನೋದು ಆರೋಗ್ಯಕ್ಕೆ ಒಳ್ಳೆಯದು. ಆದರೆ ಎಷ್ಟು ಪ್ರಮಾಣದಲ್ಲಿ ತಿನ್ನಬೇಕು ಎನ್ನುವುದನ್ನು ತಿಳಿದಿರುವುದು ಮುಖ್ಯ.

ಚಳಿಗಾಲದಲ್ಲಿ ದೇಹವನ್ನು ಬೆಚ್ಚಗಿಡಲು, ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು, ಶಕ್ತಿಯನ್ನು ಹೆಚ್ಚಿಸಲು ಮತ್ತು ರುಚಿಯನ್ನು ಹೆಚ್ಚಿಸಲು, ನಿಮ್ಮ ಆಹಾರದಲ್ಲಿ ಗೋಡಂಬಿಯನ್ನು ಸೇರಿಸುವುದು ಉತ್ತಮ . ಒಣ ಹಣ್ಣುಗಳಲ್ಲಿ ಗೋಡಂಬಿ ಮತ್ತು ಒಣದ್ರಾಕ್ಷಿಗಳ ರುಚಿಯನ್ನು ಎಲ್ಲರೂ ಆನಂದಿಸುತ್ತಾರೆ. ಗೋಡಂಬಿಯನ್ನು ತಿಂಡಿಯಾಗಿ ತಿನ್ನಬಹುದು.

ಸಾದಾ ಗೋಡಂಬಿ ಸ್ವಲ್ಪ ಸಿಹಿ ರುಚಿಯನ್ನು ಹೊಂದಿರುತ್ತದೆ. ನೀವು ಅವುಗಳನ್ನು ಲಘುವಾಗಿ ಹುರಿದು ಉಪ್ಪು,ಖಾರ ಸೇರಿಸಿಯೂ ತಿನ್ನಬಹುದು. ನೀವು ದಿನಕ್ಕೆ ಎಷ್ಟು ಗೋಡಂಬಿ ತಿನ್ನಬೇಕು ಮತ್ತು ಅವುಗಳನ್ನು ತಿನ್ನುವುದರಿಂದಾಗುವ ಪ್ರಯೋಜನಗಳ ಬಗ್ಗೆ ತಿಳಿಯೋಣ.

**ದಿನಕ್ಕೆ ಎಷ್ಟು ಗೋಡಂಬಿ ತಿನ್ನೋದು ಒಳ್ಳೆಯದು**

**ನೀವು ದಿನಕ್ಕೆ ಎಷ್ಟು ಗೋಡಂಬಿ ತಿನ್ನಬೇಕು?:** ಗೋಡಂಬಿ ಎಷ್ಟು ರುಚಿಕರವಾದ ರುಚಿಯನ್ನು ಹೊಂದಿದೆಯೆಂದರೆ ನೀವು ಅವುಗಳನ್ನು ತಿನ್ನಲು ಪ್ರಾರಂಭಿಸಿದ ನಂತರ, ಪದೇ ಪದೇ ತಿನ್ನಬೇಕೆಂದು ಬಯಸುತ್ತೀರಿ. ಹಾಗಂತ ಅಧಿಕ ಪ್ರಮಾಣದಲ್ಲಿ ಗೋಡಂಬಿ ಸೇವಿಸುವುದು ಆರೋಗ್ಯಕ್ಕೆ ಹಾನಿಯನ್ನುಂಟು ಮಾಡಬಲ್ಲದು. ನೀವು ಪ್ರತಿದಿನ ಸೀಮಿತ ಪ್ರಮಾಣದಲ್ಲಿ ಗೋಡಂಬಿಯನ್ನು ತಿನ್ನಬೇಕು. ನೀವು ದಿನಕ್ಕೆ 3 ರಿಂದ 4 ಗೋಡಂಬಿಯನ್ನು ತಿನ್ನಬೇಕು. ಮಕ್ಕಳಿಗೆ ಪ್ರತಿದಿನ 2 ಗೋಡಂಬಿಯನ್ನು ನೀಡಬಹುದು. ನೀವು ನಿಜವಾಗಿಯೂ ಗೋಡಂಬಿಯನ್ನು ಇಷ್ಟಪಟ್ಟರೆ, ನೀವು 4 ರಿಂದ 5 ವರೆಗೆ ತಿನ್ನಬಹುದು. ಗೋಡಂಬಿತಿನ್ನುವುದು ನಿಮ್ಮ ಹಸಿವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

**ನೀವು ಗೋಡಂಬಿಯನ್ನು ಹೇಗೆ ತಿನ್ನಬೇಕು:** ನೀವು ಗೋಡಂಬಿಯನ್ನು ಕಚ್ಚಾ ತಿನ್ನಬಹುದು. ರುಚಿಯನ್ನು ಹೆಚ್ಚಿಸಲು, ಗೋಡಂಬಿಯನ್ನು ಲಘುವಾಗಿ ಹುರಿದು ಉಪ್ಪುಸಹಿತ ಗೋಡಂಬಿಯನ್ನು ತಿನ್ನಬಹುದು. ಮಕ್ಕಳಿಗೆ ಜೇನುತುಪ್ಪದೊಂದಿಗೆ ಗೋಡಂಬಿಯನ್ನು ತಿನ್ನಿಸಿ. ಜೇನುತುಪ್ಪ ಮತ್ತು ಗೋಡಂಬಿ ತಿನ್ನುವುದರಿಂದ ಕರುಳಿನ ಆರೋಗ್ಯ ಸುಧಾರಿಸುತ್ತದೆ. ಮಕ್ಕಳ ತೂಕವೂ ಹೆಚ್ಚಾಗುತ್ತದೆ. ಜೇನುತುಪ್ಪ ಮತ್ತು ಗೋಡಂಬಿ ತಿನ್ನುವುದರಿಂದ ಹೊಟ್ಟೆ ಮತ್ತು ಜೀರ್ಣಕ್ರಿಯೆ ಸುಧಾರಿಸುತ್ತದೆ. ಅವು ಆರೋಗ್ಯಕರ ಕೊಬ್ಬುಗಳು ಮತ್ತು ಉತ್ಕರ್ಷಣ ನಿರೋಧಕಗಳನ್ನು ಒದಗಿಸುತ್ತವೆ, ಇದು ಚರ್ಮವನ್ನು ಹೈಡ್ರೇಟ್ ಆಗಿಡುತ್ತದೆ.

**ಅಧಿಕ ಗೋಡಂಬಿ ಸೇವಿಸುವುದರ ಅಡ್ಡಪರಿಣಾಮಗಳು:** ತೂಕ ಹೆಚ್ಚಾಗುವುದು: ಹೆಚ್ಚಿನ ಕ್ಯಾಲೋರಿ ಅಂಶದಿಂದಾಗಿ, ನಿಯಮಿತವಾಗಿ ಹೆಚ್ಚಿನ ಪ್ರಮಾಣದಲ್ಲಿ ಗೋಡಂಬಿಯನ್ನು ಸೇವಿಸುವುದರಿಂದ ತೂಕ ಹೆಚ್ಚಾಗಬಹುದು.

**ಜೀರ್ಣಕಾರಿ ಸಮಸ್ಯೆಗಳು:** ಇತರ ಬೀಜಗಳಂತೆ ಗೋಡಂಬಿಯು ಆಹಾರದ ನಾರಿನಂಶದಿಂದ ಸಮೃದ್ಧವಾಗಿದೆ. ಫೈಬರ್ ಜೀರ್ಣಕ್ರಿಯೆಗೆ ಪ್ರಯೋಜನಕಾರಿಯಾಗಿದ್ದರೂ, ಒಂದೇ ಬಾರಿಗೆ ಹೆಚ್ಚು ಗೋಡಂಬಿಯನ್ನು ಸೇವಿಸುವುದರಿಂದ ಹೊಟ್ಟೆ ಉಬ್ಬುವುದು, ಅನಿಲ ಅಥವಾ ಅತಿಸಾರ ಉಂಟಾಗಬಹುದು, ವಿಶೇಷವಾಗಿ ನಿಮ್ಮ ಜೀರ್ಣಾಂಗ ವ್ಯವಸ್ಥೆಯು ಹೆಚ್ಚಿನ ಫೈಬರ್ ಆಹಾರಗಳಿಗೆ ಒಗ್ಗಿಕೊಂಡಿಲ್ಲದಿದ್ದರೆ.

### ಗೋಡಂಬಿ ತಿನ್ನುವುದರ ಪ್ರಯೋಜನಗಳು

- **ಪ್ರತಿದಿನ ಗೋಡಂಬಿ ತಿನ್ನುವುದರಿಂದ ದೇಹದಲ್ಲಿನ ಸತುವಿನ ಕೊರತೆಯನ್ನು ತುಂಬಲು ಸಹಾಯ ಮಾಡುತ್ತದೆ ಮತ್ತು ರೋಗನಿರೋಧಕ ಶಕ್ತಿ ಸುಧಾರಿಸುತ್ತದೆ.**
- **ಗೋಡಂಬಿ ಹೃದಯಕ್ಕೂ ಪ್ರಯೋಜನಕಾರಿ. ಅವುಗಳನ್ನು ತಿನ್ನುವುದರಿಂದ ದೇಹದಲ್ಲಿ ಉತ್ತಮ ಕೊಲೆಸ್ಟ್ರಾಲ್ ಹೆಚ್ಚಾಗುತ್ತದೆ.**
- **ಗೋಡಂಬಿ ಜೀರ್ಣಕ್ರಿಯೆ ಮತ್ತು ಹೊಟ್ಟೆಗೆ ಒಳ್ಳೆಯದು ಎಂದು ಪರಿಗಣಿಸಲಾಗುತ್ತದೆ.**
- **ಅವು ಆಹಾರದ ನಾರನ್ನು ಹೊಂದಿರುವುದರಿಂದ ಜೀರ್ಣಕ್ರಿಯೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.**
- **ಗೋಡಂಬಿ ತಿನ್ನುವುದರಿಂದ ದೇಹಕ್ಕೆ ಹೇರಳವಾದ ಕ್ಯಾಲ್ಸಿಯಂ ಮತ್ತು ಉತ್ತಮ ಪ್ರಮಾಣದ ಮೆಗ್ನೀಸಿಯಮ್ ದೊರೆಯುತ್ತದೆ.**
- **ಇದು ಮೂಳೆಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ.**
- **ಗೋಡಂಬಿ ಮೆದುಳಿನ ಆರೋಗ್ಯಕ್ಕೂ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಗೋಡಂಬಿ ಪ್ರೋಟೀನ್, ಆರೋಗ್ಯಕರ ಕೊಬ್ಬುಗಳು ಮತ್ತು ಪಾಲಿಫಿನಾಲ್‌ಗಳಂತಹ ಉತ್ಕರ್ಷಣ ನಿರೋಧಕಗಳನ್ನು ಹೊಂದಿರುತ್ತದೆ.**

# ಹೆಚ್. ರಾಂಪುರದ ಅಭಿವೃದ್ಧಿಯ ಹರಿಕಾರ

## ಜಿಲ್ಲಾಧಿಕಾರಿ ಮಹಾಂತೇಶ ಬಿಳಗಿ

■ ಬಿಂದು ಆರ್ ಡಿ ರಾಂಪುರ

ಸ್ವಾತಂತ್ರ್ಯದ 75 ವರ್ಷಗಳ ನಂತರವೂ ಡಾಂಬರು ರಸ್ತೆ ಭಾಗ್ಯ ಕಾಣದ ದಾವಣಗೆರೆ ಜಿಲ್ಲೆಯ ನನ್ನ ಗ್ರಾಮ ಹೆಚ್ ರಾಂಪುರಕ್ಕೆ ಬೆಳಕು ಚೆಲ್ಲಿದ್ದು ಜಿಲ್ಲಾಧಿಕಾರಿ ಶ್ರೀ ಮಹಾಂತೇಶ ಬಿಳಗಿ ಅವರ ಅದ್ಭುತ ಕಾರ್ಯದಕ್ಷತೆ. ಹಿಂದಿನ ದಶಕಗಳಲ್ಲಿ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಂದ ಕಡೆಗಣಿಸಲ್ಪಟ್ಟಿದ್ದ ಮೂಲಭೂತ ಸೌಕರ್ಯದ ಕೊರತೆಯನ್ನು ಒಬ್ಬ ಸ್ಥಳೀಯ ನಿವಾಸಿಯಾದ ಬಿಂದು ಆರ್ ಡಿ ರಾಂಪುರ ಆದ ನಾನು ಸರ್ಕಾರ ವಿರುದ್ಧ ದೊಡ್ಡ ಹೋರಾಟದ ಮೂಲಕ ಎತ್ತಿ ಹಿಡಿದಾಗ, ಜಿಲ್ಲಾಡಳಿತದ ಮುಖ್ಯಸ್ಥರಾದ ಬಿಳಗಿ ಅವರು ತೋರಿದ ತ್ವರಿತ ಸ್ಪಂದನೆ ನಿಜಕ್ಕೂ ಶ್ಲಾಘನೀಯ. ಅವರು ಕಡತಗಳಲ್ಲಿ ಕಾಲಹರಣ ಮಾಡದೆ, ಜನರ ಸಮಸ್ಯೆಯ ಗಂಭೀರತೆಯನ್ನು ಮನಗಂಡು ತಕ್ಷಣವೇ ಸ್ಥಳಕ್ಕೆ ಆಗಮಿಸಿ ಖುದ್ದು ಪರಿಶೀಲನೆ ನಡೆಸಿದರು.

ಗ್ರಾಮಕ್ಕೆ ಭೇಟಿ ನೀಡಿ ಜನರಿಗೆ ಭರವಸೆ ನೀಡಿ ಅದರಂತೆ ಡಾಂಬರು ರಸ್ತೆ ಮಾಡಿಸಿ, ಸರ್ಕಾರಿ ಬಸ್ ಸ್ಥಳದಲ್ಲೇ ಅನುಮೋದನೆ ಮಾಡಿದ ಮಹಾನ್ ಆದರ್ಶ ದಕ್ಷ ಅಧಿಕಾರಿ. ನಿನಗೂ ಒಳ್ಳೆಯ ಹುಡುಗ ಸಿಗಲಿ ತಂಗಿ ಎಂದು ಆರ್ಶೀವಾದ ಮಾಡಿದವರು. ಜಿಲ್ಲಾಧಿಕಾರಿಗಳು ಕೇವಲ ಪರಿಶೀಲನೆಗೆ ಸೀಮಿತವಾಗದೆ, ಅಂದೇ ಡಾಂಬರು ರಸ್ತೆ ನಿರ್ಮಾಣಕ್ಕೆ ಅನುಮೋದನೆ ನೀಡುವ ಮೂಲಕ, ಆ ಗ್ರಾಮದ ಜನರ ಬಹುದಿನಗಳ ಕನಸನ್ನು ನನಸು ಮಾಡಿದರು. ಈ ಒಂದು ನಿರ್ಧಾರ, ಅವರಲ್ಲಿರುವ ಜನಪರ ಕಾಳಜಿ ಮತ್ತು ಪಾರದರ್ಶಕ ಆಡಳಿತದ ಸಂಕೇತವಾಗಿದೆ.

ನಮ್ಮ ಹೋರಾಟಕ್ಕೆ ತ್ವರಿತ ಫಲ ಸಿಕ್ಕಿದ್ದಕ್ಕಾಗಿ ಸ್ಥಳೀಯರು ಜಿಲ್ಲಾಧಿಕಾರಿಗಳಿಗೆ ಆಳವಾದ ಕೃತಜ್ಞತೆ ಸಲ್ಲಿಸಿದ್ದಾರೆ. ಬಿಳಗಿ ಅವರ ಈ ಕ್ರಮವು ಕೇವಲ ಒಂದು ರಸ್ತೆಯ ನಿರ್ಮಾಣವಲ್ಲ, ಬದಲಿಗೆ ಪ್ರಜಾಪ್ರಭುತ್ವ ಮತ್ತು ಆಡಳಿತ ವ್ಯವಸ್ಥೆಯ ಮೇಲಿನ ಜನರ ನಂಬಿಕೆಯನ್ನು ಗಟ್ಟಿಗೊಳಿಸಿದೆ. ಬಿಳಗಿ ಅವರಂತಹ ಕಾರ್ಯನಿಷ್ಠ ಅಧಿಕಾರಿಗಳ ಉಪಸ್ಥಿತಿಯು ಅಭಿವೃದ್ಧಿಯ ಹೊಸ ಪರ್ವಕ್ಕೆ ನಾಂದಿ ಹಾಡುತ್ತದೆ.

• ಉದಯವಾಹಿನಿ, ವಿಶೇ

# ಲೋಕಾಯುಕ್ತ ಪೊಲೀಸರ ದಾಳಿ: ಇಂಜಿನಿಯರ್ ಬಳಿ ರೂ. 3.69 ಕೋಟಿ ಆಸ್ತಿ ಪತ್ತೆ

• ಉದಯವಾಹಿನಿ ಹಾವೇರಿ

ಅಕ್ರಮ ಆಸ್ತಿ ಗಳಿಕೆ ಆರೋಪದಡಿ ಹಾವೇರಿ ನಗರಾಭಿವೃದ್ಧಿ ಕೋಶದ ಕಾರ್ಯಪಾಲಕ ಇಂಜಿನಿಯರ್ ಶೇಖಪ್ಪ ಸಣ್ಣಪ್ಪ ಮತ್ತೀಕಟ್ಟಿ ಅವರ ಮನೆ ಹಾಗೂ ಇತರೆ ಸ್ಥಳಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ಮಾಡಿದ್ದು, ರೂ 3.69 ಕೋಟಿ ಮೊತ್ತದ ಆಸ್ತಿ ಪತ್ತೆ ಮಾಡಿದ್ದಾರೆ.

ಶೇಖಪ್ಪ ಅವರು ವಾಸವಿದ್ದ ಹಾವೇರಿಯ ಬಸವೇಶ್ವರನಗರದಲ್ಲಿರುವ ಬಾಡಿಗೆ ಮನೆ, ಹುಬ್ಬಳ್ಳಿಯಲ್ಲಿರುವ ಮನೆಗಳು, ವಾಣಿಜ್ಯ ಸಂಕೀರ್ಣ, ಸಂಬಂಧಿಕರ ಮನೆ ಸೇರಿದಂತೆ 6 ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ಶೋಧ ನಡೆಸಿದರು. ಹಾನಗಲ್ ತಾಲ್ಲೂಕಿನ ಅಕ್ಕಿವಳ್ಳಿ ಗ್ರಾಮದ ಶೇಖಪ್ಪ ಅವರು ಸಹಾಯಕ ಎಂಜಿನಿಯರ್ ಆಗಿ ಕೆಲಸಕ್ಕೆ ಸೇರಿದ್ದರು. ಸದ್ಯ ಕಾರ್ಯಪಾಲಕ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು. ಇವರು ತಮ್ಮ ಸಂಪಾದನೆಗಿಂತ ಶೇ 221ರಷ್ಟು ಹೆಚ್ಚುವರಿ ಆಸ್ತಿ ಗಳಿಸಿರುವುದು ಪೊಲೀಸರ ಶೋಧದಿಂದ ಗೊತ್ತಾಗಿದೆ. ಸ್ವಂತ ಊರಲ್ಲಿ 4 ಎಕರೆ ತೋಟ ಹೊಂದಿರುವ ಶೇಖಪ್ಪ ಅವರು ಬೇನಾಮಿ ಹೆಸರಿನಲ್ಲಿ ಆಸ್ತಿ ಮಾಡಿರುವ ಮಾಹಿತಿ ಲಭ್ಯವಾಗಿದೆ. ಅಕ್ರಮ ಆಸ್ತಿ ಗಳಿಕೆ ಆರೋಪದಡಿ ಶೇಖಪ್ಪ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಲೋಕಾಯುಕ್ತ ಪೊಲೀಸರು, ಆರೋಪಿಗೆ ನೋಟಿಸ್ ನೀಡಿದ್ದಾರೆ. ಶೇ 221ರಷ್ಟು ಹೆಚ್ಚು ಆಸ್ತಿಗೆ ಸಂಬಂಧಪಟ್ಟಂತೆ ಸ್ಪಷ್ಟನೆ ನೀಡುವಂತೆ ಸೂಚಿಸಿದ್ದಾರೆ. ಆಸ್ತಿಗೆ ದಾಖಲೆ ನೀಡದಿದ್ದರೆ, ಆರೋಪಿ ವಿರುದ್ಧ ಪೊಲೀಸರು ಮುಂದಿನ ಕ್ರಮ ಜರುಗಿಸಲಿದ್ದಾರೆ.

ಉದಯವಾಹಿನಿ ಚಿತ್ರ

**10.44 ಲಕ್ಷ ನಗದು ಜಪ್ತಿ:** ಶೇಖಪ್ಪ ಅವರು ವಾಸವಿದ್ದ ಹಾವೇರಿಯ ಬಸವೇಶ್ವರ ನಗರದ ಮನೆಯಲ್ಲಿ ರೂ.10.44 ಲಕ್ಷ ನಗದು ಪತ್ತೆಯಾಗಿದೆ. ಕೆಲಸವೊಂದಕ್ಕೆ ಸಂಬಂಧಪಟ್ಟಂತೆ ಲಂಚದ ರೂಪದಲ್ಲಿ ಪಡೆದ ಹಣವಿರುವ ಅನುಮಾನವಿದ್ದು, ಈ ಬಗ್ಗೆ ಮಾಹಿತಿ ಕಲೆಹಾಕಲಾಗುತ್ತಿದೆ' ಎಂದು ಲೋಕಾಯುಕ್ತ ಪೊಲೀಸ್ ಮೂಲಗಳು ಹೇಳಿವೆ. 1.72 ಕೋಟಿ ಮೌಲ್ಯದ 14 ನಿವೇಶನ, ರೂ 1.94 ಕೋಟಿ ಮೌಲ್ಯದ ಮೂರು ಮನೆಗಳು (ಒಂದು ವಾಣಿಜ್ಯ ಸಂಕೀರ್ಣ) ಹಾಗೂ ನಾಲ್ಕು ಎಕರೆ ತೋಟದ ದಾಖಲೆಗಳು ಸಿಕ್ಕಿವೆ. ರೂ10.44 ಲಕ್ಷ ನಗದು ಜೊತೆಯಲ್ಲಿ ರೂ 25.40 ಲಕ್ಷ ಮೌಲ್ಯದ ಚಿನ್ನಾಭರಣ, ರೂ 1.18 ಕೋಟಿ ಮೊತ್ತದ ಇತರೆ ಸಾಮಗ್ರಿ ಹಾಗೂ ರೂ 15 ಲಕ್ಷ ಮೌಲ್ಯದ ವಾಹನ ಜಪ್ತಿ ಮಾಡಲಾಗಿದೆ ಎಂದು ತಿಳಿಸಿವೆ.

## ಶಾಲಾ ಮಕ್ಕಳಲ್ಲಿನ ಪ್ರತಿಭೆಯನ್ನು ಹೊರತರಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆ

ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

ಶಾಲಾಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಲು ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿವೆ ಎಂದು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಮಲ್ಲಿಕಾರ್ಜುನ ಪಾಲಾಮೂರ್ ಹೇಳಿದರು. ನಗರದ ಚಂದಾಪೂರದ ಕೆಪಿಎಸ್ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸಂಯುಕ್ತ ಆಶ್ರಯದಲ್ಲಿ 2025-26ನೇ ಸಾಲಿನ ತಾಲ್ಲೂಕಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಶಿಕ್ಷಣವೆಂದರೆ ಕೇವಲ ಓದು ಬರಹ ಅಲ್ಲ,ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಕ್ರೀಡೆ, ಕಲೆ, ಸಂಸ್ಕೃತಿ ಚಟುವಟಿಕೆಗಳು ಅವಶ್ಯವಾಗಿವೆ ಎಂದರು.

> ಶಾಲಾಮಕ್ಕಳು ಪ್ರತಿಭಾ ಕಾರಂಜಿ ಕಾರ್ಯಕ್ರಮಗಳಲ್ಲಿ ತಮ್ಮ ತಮ್ಮ ಪ್ರತಿಭೆಯನ್ನು ಗುರುತಿಸಿ ತಾಲ್ಲೂಕಾ ಮಟ್ಟದಿಂದ ಜಿಲ್ಲಾಮಟ್ಟಕ್ಕೆ ನೇಮಕವಾಗಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಬೇಕು.
> -ದೇವೀಂದ್ರಪ್ಪ ಹೋಳ್ಕರ

ಕ್ಷೇತ್ರ ಸಮನ್ವಯಾಧಿಕಾರಿ ನಾಗಶೇಟ್ಟಿ ಭದ್ರಶೇಟ್ಟಿ ಮಾತನಾಡಿ ಮಕ್ಕಳಲ್ಲಿ ಒಂದೊಂದು ಪ್ರತಿಭೆಯನ್ನು ಅಡಗಿರುತ್ತದೆ ಅದನ್ನು ಹೊರತೆಗೆಯಲು ಮಕ್ಕಳಿಗೆ ಶಿಕ್ಷಕರು ಪ್ರೋತ್ಸಾಹಿಸಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದೆ. ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವವನ್ನು ಹೆಚ್ಚಿಸುತ್ತದೆ ಅಲ್ಲದೆ ವ್ಯಕ್ತಿತ್ವ ವಿಕಾಸನಕ್ಕೆ ಸಹಾಯ ಮಾಡುತ್ತದೆ,ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸ ಶಿಕ್ಷಕರ ಜವಾಬ್ದಾರಿಯಾಗಿದೆ ಎಂದರು. ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಪಂ.ಇಓ ಸಂತೋಷ ಚವ್ಹಾಣ,ಮಾತನಾಡಿದರು. ಅಕ್ಷರ ದಾಸೋಹ ಅಧಿಕಾರಿ ಜಯಪ್ಪ ಚಾಪಲ್ ಸ್ವಾಗತಿಸಿದರು, ಶಿಕ್ಷಣ ಸಂಯೋಜಕ ಅಶೋಕ ಹೂವಿನಭಾವಿ ನಿರೂಪಿಸಿದರು,ಶಾಮರಾವ ಮೋಘಾ ವಂದಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕಾ ದೈಹಿಕ ಶಿಕ್ಷಣಾಧಿಕಾರಿ ನಾರಾಯಣ ರೆಡ್ಡಿ,ಸುರೇಶ ಕೊರವಿ,ಖುರ್ಷಿದ್ ಮಿಯ್ಯ,ಮಾರುತಿ ಪತಂಗೆ,ಶಿವಕುಮಾರ ಬಿರಾದಾರ,ಮಾಣಿಕಪ್ಪ ಪೋಲಾ, ಮಕ್ಸೂದ್ ಅಲಿ,ಪಾಂಡುರಂಗ ಶರ್ಮಾ,ಸೇರಿದಂತೆ ಶಾಲಾ ಮಕ್ಕಳು ಶಿಕ್ಷಕರು ಅನೇಕರಿದ್ದರು.

## ಬಸವಣ್ಣನವರ ತತ್ವ, ವಿಚಾರಗಳು ವಿಶ್ವವ್ಯಾಪಿ ಆಗಬೇಕು: ಈಶ್ವರ ಖಂಡ್ರೆ

# 46ನೇ ಶರಣ ಕಮ್ಮಟ ಅನುಭವ ಮಂಟಪ ಉತ್ಸವ

• ಉದಯವಾಹಿನಿ ಬೀದರ್

ಈ ತಿಂಗಳ 29 ಹಾಗೂ 30ರಂದು ಬಸವಣ್ಣನವರ ಕರ್ಮಭೂಮಿ ಬಸವಕಲ್ಯಾಣದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ 46ನೇ ಶರಣ ಕಮ್ಮಟ ಅನುಭವ ಮಂಟಪ ಉತ್ಸವ ಜರುಗಲಿದೆ ಎಂದು ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿಗಳಾದ ಈಶ್ವರ ಖಂಡ್ರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ವಿಶ್ವ ಬಸವಧರ್ಮ ಅನುಭವ ಮಂಟಪ ಟ್ರಸ್ಟ್‌ನಿಂದ ಬಸವಕಲ್ಯಾಣದ ಅನುಭವ ಮಂಟಪ ಪರಿಸರದಲ್ಲಿ ಹಮ್ಮಿಕೊಂಡಿರುವ ಈ ಉತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ನಾಡಿನ ವಿವಿಧ ಮಠಾಶರು, ಜನಪ್ರತಿನಿಗಳು, ಸಾಹಿತಿಗಳು, ಚಿಂತಕರು, ಗಣ್ಯರು ಸೇರಿ ಅಪಾರ ಬಸವಭಕ್ತರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ ಎಂದರು. ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ಶ್ರೀ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯದಲ್ಲಿ ಎರಡು ದಿನದ ಉತ್ಸವಕ್ಕಾಗಿ ಅನುಭವ ಮಂಟಪ ಹತ್ತಿರದ ವಿಶಾಲ ಮೈದಾನದಲ್ಲಿ ಬೃಹತ್ ಪೆಂಡಾಲ ಹಾಕುತ್ತಿದ್ದು, ಭವ್ಯ ವೇದಿಕೆ ತಲೆ ಎತ್ತುತ್ತಿದೆ. ಕಾರ್ಯಕ್ರಮದ ಉದ್ಘಾಟನೆ, ಸಮಾರೋಪ ಸೇರಿ ಮಹತ್ವದ ಗೋಷ್ಠಿ, ಚಿಂತನ-ಮಂಥನ, ಸಾಮೂಹಿಕ ಇಷ್ಟಲಿಂಗ ಪೂಜೆ, ಸಾಧಕರಿಗೆ ಪ್ರಶಸ್ತಿ ಪ್ರದಾನ, ಗ್ರಂಥ ಬಿಡುಗಡೆ ಇತರ ಕಾರ್ಯಕ್ರಮಗಳು ನಡೆಯಲಿವೆ ಎಂದು ವಿವರಿಸಿದರು.

ಬಸವಣ್ಣನವರ ತತ್ವ, ವಿಚಾರಗಳು ವಿಶ್ವವ್ಯಾಪಿ ಆಗಬೇಕು. ಮಾನವ ಕಲ್ಯಾಣಕ್ಕೆ ಆಧಾರವಾಗಿರುವ ವಚನ ಸಾಹಿತ್ಯ ಜಾಗತಿಕವಾಗಿ ಎಲ್ಲರಿಗೂ ಗೊತ್ತಾಗಲಿ ಎಂಬ ಸದಾಶಯದಿಂದ 46 ವರ್ಷಗಳಿಂದ ಅನುಭವ ಮಂಟಪ ಉತ್ಸವ, ಶರಣ ಕಮ್ಮಟವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಕರ್ನಾಟಕ ಅಲ್ಲದೆ ನೆರೆಯ ಮಹಾರಾಷ್ಟ್ರ, ತೆಲಂಗಾಣ ಸೇರಿ ನಾನಾ ಕಡೆಗಳಿಂದ ಸಹಸ್ರಾರು ಬಸವ ಭಕ್ತರು ಉತ್ಸವಕ್ಕೆ ಆಗಮಿಸಲಿದ್ದಾರೆ. ಎಲ್ಲರಿಗೂ ಊಟ, ವಸತಿ ಸೇರಿ ಅಗತ್ಯ ವ್ಯವಸ್ಥೆ ಮಾಡಿದ್ದು, ಇದಕ್ಕಾಗಿ ವಿವಿಧ ಸಮಿತಿಗಳು ಸಕ್ರಿಯ ಕೆಲಸ ಮಾಡುತ್ತಿವೆ ಎಂದರು.

ನ.29ರಂದು ಬೆಳಗ್ಗೆ 9.30ಕ್ಕೆ ಗುರುಬಸವ ಪೂಜೆ, ವಚನ ಪಠಣ ಹಾಗೂ ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ಬೆಳಗ್ಗೆ 11ರಂದು ಉತ್ಸವವನ್ನು ಆಂಧ್ರಪ್ರದೇಶ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಉದ್ಘಾಟಿಸುವರು. ಪೂಜ್ಯ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಆದಿಚುಂಚನಗಿರಿ, ಡಾ.ಚನ್ನವೀರ ಶಿವಾಚಾರ್ಯರು ಹಾರಕೂಡ, ಡಾ.ಶಿವಾನಂದ ಸ್ವಾಮೀಜಿ ಹುಲಸೂರು, ಪೂಜ್ಯ ಡಾ.ಗಂಗಾಂಬಿಕೆ ಅಕ್ಕ ಸಾನ್ನಿಧ್ಯ ವಹಿಸುವರು. ಕೇಂದ್ರ ಸಚಿವ ವಿ.ಸೋಮಣ್ಣ ಗ್ರಂಥ ಲೋಕಾರ್ಪಣೆ ಮಾಡುವರು. ಪೌರಾಡಳಿತ ಸಚಿವ ರಹೀಮ್ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಶರಣು ಸಲಗರ, ಸಂಜಯ ಬನಸೋಡೆ, ಪಿ.ಸಂಜೀವರಡ್ಡಿ ಇತರರು ಪಾಲ್ಗೊಳ್ಳುವರು. ಕಾರ್ಯಕ್ರಮದಲ್ಲಿ ವಿವಿಧ ಪ್ರಶಸ್ತಿ ಪ್ರದಾನ ನಡೆಯಲಿದೆ. ಮಧ್ಯಾಹ್ನ 3ಕ್ಕೆ ಜಾಗತಿಕ ನೆಲೆಯಲ್ಲಿ ಬಸವ ತತ್ವದ ಪ್ರಸ್ತುತತೆ ಗೋಷ್ಠಿ, ಸಂಜೆ ಶಿವಯೋಗಿ ಸಿದ್ದರಾಮೇಶ್ವರ ನಾಟಕ ಪ್ರದರ್ಶನ ಇದೆ ಎಂದು ತಿಳಿಸಿದರು. ನ.30ರಂದು ಬೆಳಗ್ಗೆ 6ಕ್ಕೆ ನಗೆಯೋಗ ಕೂಟ, ಬೆಳಗ್ಗೆ 7.30ಕ್ಕೆ ಸಾಮೂಹಿಕ ಇಷ್ಟಲಿಂಗ ಪೂಜಾ, ಬೆಳಗ್ಗೆ 10ಕ್ಕೆ ಲಿಂಗಾಯತ ಹೋರಾಟ ಮತ್ತು ರಾಷ್ಟ್ರೀಯತೆ ಗೋಷ್ಠಿ ಇದೆ. ಮಧ್ಯಾಹ್ನ 1ಕ್ಕೆ ಸಮಾರೋಪ ಸಮಾರಂಭ ಜರುಗಲಿದೆ.

ಗುರುಬಸವ ಪಟ್ಟದ್ದೇವರು ಸಾನ್ನಿಧ್ಯ, ಸಣ್ಣಕೈಗಾರಿಕೆ ಸಚಿವಶರಣ ಬಸಪ್ಪ ದರ್ಶನಾಪುರ ಅಧ್ಯಕ್ಷತೆ ವಹಿಸುವರು. ಶಾಸಕರಾದ ಪ್ರಭು ಚವ್ಹಾಣ್, ಡಾ.ಶೈಲೇಂದ್ರ ಬೆಲ್ದಾಳೆ, ಡಾ.ಸಿದ್ದಲಿಂಗಪ್ಪ ಪಾಟೀಲ್, ಮಾಜಿ ಸಚಿವ ಭಾಗವಹಿಸುವರು ಎಂದು ಹೇಳಿದರು.

ಉದಯವಾಹಿನಿ ಚಿತ್ರ

### 2026ರ ಅಂತ್ಯದೊಳಗೆ ಅನುಭವ ಮಂಟಪ ನೂತನ ಕಟ್ಟಡದ ಉದ್ಘಾಟನೆ

**2026ರ ಅಂತ್ಯದೊಳಗೆ ನೂತನ ಅನುಭವ ಮಂಟಪದ ಕಟ್ಟಡ ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದರು. ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, 742ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ ಭವ್ಯ ಹಾಗೂ ಈತಿಹಾಸಿಕ ಅನುಭವ ಮಂಟಪಕ್ಕೆ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ತಮ್ಮ ಬಜೆಟ್‌ನಲ್ಲಿ ಘೋಷಿಸಿದ್ದರು. ಅದಕ್ಕೆ ಪ್ರತಿಯಾಗಿ 100 ಕೋಟಿ ನೀಡಿದ್ದರು. ನಮ್ಮ ಸರ್ಕಾರ ಬಂದ ಬಳಿಕ ಇಲ್ಲಿಯ ವರೆಗೆ 200 ಕೋಟಿ ನೀಡಿದ್ದು, ಉಳಿದ ಕಾಮಗಾರಿ ಗುಣಮಟ್ಟದಿಂದ ಪೂರ್ತಿಯಾಗಲು ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ. ಒಟ್ಟಾರೆ ಈ ಅನುಭವ ಮಂಟಪ ವಿಶ್ವದ ಒಂದು ಪಾರಂಪರಿಕ ತಾಣವಾಗಿ ನಿಲ್ಲಲಿದೆ ಎಂದು ಖಂಡ್ರೆ ಹೇಳಿದರು.**

**ವಸತಿ ಸೇರಿ ಅಗತ್ಯ ವ್ಯವಸ್ಥೆ**

**ನ.29ರಂದು ಬೆಳಗ್ಗೆ 9.30ಕ್ಕೆ ಗುರುಬಸವ ಪೂಜೆ, ವಚನ ಪಠಣ ಹಾಗೂ ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ಬೆಳಗ್ಗೆ 11ರಂದು ಉತ್ಸವವನ್ನು ಆಂಧ್ರಪ್ರದೇಶ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಉದ್ಘಾಟಿಸುವರು. ಪೂಜ್ಯ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಆದಿಚುಂಚನಗಿರಿ, ಡಾ.ಚನ್ನವೀರ ಶಿವಾಚಾರ್ಯರು ಹಾರಕೂಡ, ಡಾ.ಶಿವಾನಂದ ಸ್ವಾಮೀಜಿ ಹುಲಸೂರು, ಪೂಜ್ಯ ಡಾ.ಗಂಗಾಂಬಿಕೆ ಅಕ್ಕ ಸಾನ್ನಿಧ್ಯ ವಹಿಸುವರು. ಕೇಂದ್ರ ಸಚಿವ ವಿ.ಸೋಮಣ್ಣ ಗ್ರಂಥ ಲೋಕಾರ್ಪಣೆ ಮಾಡುವರು. ಪೌರಾಡಳಿತ ಸಚಿವ ರಹೀಮ್ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಶರಣು ಸಲಗರ, ಸಂಜಯ ಬನಸೋಡೆ, ಪಿ.ಸಂಜೀವರಡ್ಡಿ ಇತರರು ಪಾಲ್ಗೊಳ್ಳುವರು. ಕಾರ್ಯಕ್ರಮದಲ್ಲಿ ವಿವಿಧ ಪ್ರಶಸ್ತಿ ಪ್ರದಾನ ನಡೆಯಲಿದೆ. ಮಧ್ಯಾಹ್ನ 3ಕ್ಕೆ ಜಾಗತಿಕ ನೆಲೆಯಲ್ಲಿ ಬಸವ ತತ್ವದ ಪ್ರಸ್ತುತತೆ ಗೋಷ್ಠಿ, ಸಂಜೆ ಶಿವಯೋಗಿ ಸಿದ್ದರಾಮೇಶ್ವರ ನಾಟಕ ಪ್ರದರ್ಶನ ಇದೆ. -ಈಶ್ವರ ಖಂಡ್ರೆ**

• ಉದಯವಾಹಿನಿ ಚಿತ್ರದುರ್ಗ

## ಜಿಲ್ಲೆಯ 769 ರೈತರಿಗೆ 109.93 ಲಕ್ಷ ರೂ. ಪರಿಹಾರ ವಿತರಣೆ ಪ್ರಕ್ರಿಯೆಗೆ ಚಾಲನೆ: ಟಿ. ವೆಂಕಟೇಶ್

ಪ್ರಸಕ್ತ ವರ್ಷದ ಮುಂಗಾರು ಹಂಗಾಮಿನಲ್ಲಿ ಹೆಚ್ಚಿನ ಮಳೆಯಿಂದಾಗಿ ಬೆಳೆ ನಷ್ಟ ಅನುಭವಿಸಿದ ಜಿಲ್ಲೆಯ 769 ರೈತರಿಗೆ ಒಟ್ಟು 109.93 ಲಕ್ಷ ರೂ. ಪರಿಹಾರ ವಿತರಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದಾಗಿ ಬೆಳೆ ಹಾನಿ ಅನುಭವಿಸಿದ ರೈತರಿಗೆ ಪರಿಹಾರ ವಿತರಣೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ವಿವಿಧ ಜಿಲ್ಲಾಧಿಕಾರಿಗಳೊಂದಿಗೆ ಗುರುವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಸಿದ ಸಭೆಯ ಬಳಿಕ ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.

ಉದಯವಾಹಿನಿ ಚಿತ್ರ

ಅತಿವೃಷ್ಟಿಯಿಂದಾಗಿ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಕೇಂದ್ರ ಸರ್ಕಾರ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಪ್ರತಿ ಹೆಕ್ಟೇರ್‌ಗೆ ನಿಗದಿಪಡಿಸಿರುವ ಇನ್‌ಪುಟ್ ಸಬ್ಸಿಡಿ ಮೊತ್ತಕ್ಕೆ, ರಾಜ್ಯ ಸರ್ಕಾರವು ಪ್ರತ್ಯೇಕವಾಗಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಮಾತ್ರ ಅನ್ವಯವಾಗುವಂತೆ ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರ್‌ಗೆ 8500 ರೂ. ಗಳ ಇನ್‌ಪುಟ್ ಸಬ್ಸಿಡಿ ಸೇರಿಸಿ, ಪರಿಹಾರ ಮೊತ್ತ ಪಾವತಿಸುತ್ತಿದೆ. ಇದರಿಂದಾಗಿ ಜಿಲ್ಲೆಯ ರೈತರು ಕೇಂದ್ರ ಸರ್ಕಾರದ ನಿಯಮದಂತೆ ಪಡೆಯುವ ಪರಿಹಾರ ಮೊತ್ತಕ್ಕೆ, ಹೆಚ್ಚುವರಿಯಾಗಿ ರಾಜ್ಯ ಸರ್ಕಾರ ಪ್ರತಿ ಹೆಕ್ಟೇರ್‌ಗೆ ನೀಡುವ 8500 ರೂ. ಗಳ ಇನ್‌ಪುಟ್ ಸಬ್ಸಿಡಿಯ ಲಾಭ ಪಡೆಯಲಿದ್ದಾರೆ.

ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಿಂದಾಗಿ ಒಟ್ಟು 769 ರೈತರ 467.16 ಹೆಕ್ಟೇರ್ ಕೃಷಿ ಮತ್ತು ತೋಟಗಾರಿಕೆ ಬೆಳೆ ನಷ್ಟವಾಗಿದ್ದನ್ನು ಸಮೀಕ್ಷಾ ತಂಡ ವರದಿ ಸಲ್ಲಿಸಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಪರಿಹಾರ ಮೊತ್ತ 70.05 ಲಕ್ಷ ರೂ. ಗಳನ್ನು ಒದಗಿಸುತ್ತಿದ್ದು, ಇದಕ್ಕೆ ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರ್‌ಗೆ ಬೆಳೆಯಾನುಸಾರ ಪ್ರತಿ ಹೆಕ್ಟೇರ್‌ಗೆ 8500 ರೂ. ಗಳಂತೆ ಇನ್‌ಪುಟ್ ಸಬ್ಸಿಡಿ ಮೊತ್ತ 39.88 ಲಕ್ಷ ರೂ. ಸೇರಿಸಿ, ಒಟ್ಟು 109.93 ಲಕ್ಷ ರೂ. ಗಳನ್ನು ಪಾವತಿಸಲಾಗುತ್ತಿದೆ.

ಬೆಳೆ ಹಾನಿ ಪರಿಹಾರಕ್ಕಾಗಿ ಇನ್‌ಪುಟ್ ಸಬ್ಸಿಡಿಯ ದರಗಳನ್ನು ಪ್ರತಿ ಹೆಕ್ಟೇರ್‌ಗೆ ಮಳೆಯಾಶ್ರಿತ ಬೆಳೆಗಳಿಗೆ ರೂ. 8,500 ರಿಂದ 17,000, ನೀರಾವರಿ ಬೆಳೆಗಳಿಗೆ ರೂ. 17,000 ರಿಂದ 25,500 ಹಾಗೂ ಬಹುವಾರ್ಷಿಕ ಬೆಳೆಗಳಿಗೆ ಪ್ರತಿ ಹೆಕ್ಟೇರ್‌ಗೆ ರೂ. 22,500 ರಿಂದ 31,000 ರೂ. ಗಳಿಗೆ ರಾಜ್ಯ ಸರ್ಕಾರ ಹೆಚ್ಚಿಸಿದಂತಾಗಿದೆ. ಬೆಳೆ ಹಾನಿ ಪರಿಹಾರ ಮೊತ್ತವನ್ನು ಸಂಬಂಧಿಸಿದ ರೈತರಿಗೆ ತ್ವರಿತವಾಗಿ ಪಾವತಿಯಾಗಬೇಕು, ಈ ನಿಟ್ಟಿನಲ್ಲಿ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ತೋಟಗಾರಿಕೆ ಇಲಾಖೆ ಜಂಟಿನಿರ್ದೇಶಕಿ ಸವಿತಾ, ಉಪಕೃಷಿ ನಿರ್ದೇಶಕ ಶಿವಕುಮಾರ್ ಸೇರಿದಂತೆ ವಿವಿಧ ಅಧಿಕಾರಿಗಳು ಇದ್ದರು.

### ಅ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ವ್ಯಾಪಾರಿಗಳಿಗೆ ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು , ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ನೀವು ಹಣವನ್ನು ಖಾರುಚು ಮಾಡಬೇಕಾಗುತ್ತದೆ.

**ವೃಷಭ** ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳುಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

**ಮಿಥುನ** ನಿಮ್ಮ ಶಕ್ತಿಯನ್ನು ಸ್ವಯಂ ಸುಧಾರಣೆ ಯೋಜನೆಗಳಲ್ಲಿ ಹಾಗೂ ನಿಮ್ಮನ್ನು ಉತ್ತಮವಾಗಿಸುವ ಯೋಜನೆಗಳಲ್ಲಿ ಹಾಕಿ. ಈ ರಾಶಿಚಕ್ರದ ಕೆಲವು ನಿರುದ್ಯೋಗಿಗಳಿಗೆ ಉದ್ಯೋಗ ಸಿಗಬಹುದು.

**ಕರ್ಕಾಟಕ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ಅನುಮಾನ, ನಿರಾಸೆ, ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಸಿಂಹ** ನೀವು ಧೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು.

**ಕನ್ಯಾ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿಜೀವನದ ಹೆಬ್ಬಾಗಿಲಾಗಿದೆ.

**ತುಲಾ** ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ.

**ವೃಶ್ಚಿಕ** ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ, ಆದ್ದರಿಂದ ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ.

**ಧನಸ್ಸು** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಮಕರ** ನಿಮ್ಮ ಆರೋಗ್ಯ ಸುಧಾರಿಸುವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ಮಾನಸಿಕ ಒತ್ತಡಗೊಳಗಾಗಬಹುದು.

**ಕುಂಭ** ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ. ಮನರಂಜನೆ ಮತ್ತು ಉಲ್ಲಾಸಕ್ಕಾಗಿ ಒಳ್ಳೆಯ ದಿನವಾದರೂ ನೀವು ಕೆಲಸ ಮಾಡುತ್ತಿದ್ದಲ್ಲಿ ನೀವು ನಿಮ್ಮ ವ್ಯವಹಾರಗಳನ್ನು ಎಚ್ಚರಿಕೆಯಿಂದ ಗಮನಿಸಬೇಕು.

**ಮೀನ** ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು.

### ● ಡ್ರೋನ್ ಹಾರಾಟ ನಿಷೇಧ, ಸಾರ್ವಜನಿಕರಿಗೆ ಮಹತ್ವದ ಸೂಚನೆ

# ಪ್ರಧಾನಿ ಭೇಟಿ ಹಿನ್ನೆಲೆ, ಬಿಗಿ ಬಂದೋಬಸ್ತ್

- ಉದಯವಾಹಿನಿ ಉಡುಪಿ

ಪ್ರಧಾನಿ ನರೇಂದ್ರ ಮೋದಿ ಉಡುಪಿಗೆ ನವೆಂಬರ್ 28ರಂದು ಆಗಮಿಸುವ ಹಿನ್ನೆಲೆಯಲ್ಲಿ ಆದಿ ಉಡುಪಿಯಿಂದ ಲಕ್ಷ ಕಂಠ ಗೀತಾ ಗಾಯನ ವೇದಿಕೆ ತನಕ ನ.27 ರಂದು ಎಸ್‌ಪಿಜಿ ನೇತೃತ್ವದಲ್ಲಿ ಭದ್ರತಾ ರಿಹರ್ಸಲ್ ನಡೆಯಲಿದೆ.

ಆದಿ ಉಡುಪಿಯ 4 ಹೆಲಿಪ್ಯಾಡ್‌ಗಳ ಪೈಕಿ ಒಂದರಲ್ಲಿ ಬಂದಿಳಿವ ಪ್ರಧಾನಿ ಮೋದಿಗೆ ಸ್ವಾಗತ, ಬನ್ನಂಜೆಯಿಂದ ಕಲ್ಸಂಕ ತನಕ ಕಾರಿನಲ್ಲಿ ಕೂತು ಇಕ್ಕೆಲಗಳಲ್ಲಿರುವ ಜನರತ್ತ ಕೈ ಬೀಸುತ್ತಾ ಬರಲಿದ್ದು ಶ್ರೀಕೃಷ್ಣಮಠದ ಪ್ರಧಾನ ವೇದಿಕೆ ತನಕ ಭದ್ರತಾ ಪರಿಶೀಲನೆಯಾಗಲಿದೆ.

**28ರಂದು ಡ್ರೋನ್ ಹಾರಾಟ ನಿಷೇಧ:** ಪ್ರಧಾನಿ ನರೇಂದ್ರ ಮೋದಿ ಉಡುಪಿಗೆ ಭೇಟಿ ನೀಡುವ ಹಿನ್ನೆಲೆಯಲ್ಲಿ ಶಿಷ್ಟಾಚಾರ ಪಾಲನೆಗಾಗಿ ನ.28ರ ಸಂಜೆ 6ರ ತನಕ ಉಡುಪಿ ನಗರದ 5 ಕಿ.ಮೀ. ವ್ಯಾಪ್ತಿಯಲ್ಲಿ ಡ್ರೋನ್ ಹಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ನೋ ಫ್ಲೈ ಝೋನ್ ಆದೇಶವನ್ನು ಜಿಲ್ಲಾಧಿಕಾರಿ ಹೊರಡಿಸಿದ್ದಾರೆ.

ಪ್ರಧಾನಿ ವೀಕ್ಷಣೆ, ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವವರು ಯಾವುದೇ ರೀತಿಯ ಬ್ಯಾಗ್, ನೀರಿನ ಬಾಟಲಿ, ಧ್ವಜ, ಸ್ಟಿಕ್ಕರ್ಸ್, ಬಲೂನ್, ಪಟಾಕಿ, ಲೂಸ್ ಪಾಲಿಥಿನ್ ತರುವಂತಿಲ್ಲ.

**ಕೃಷ್ಣಮಠ ದರ್ಶನಕ್ಕೆ ನಿರ್ಬಂಧ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಉಡುಪಿ ಭೇಟಿ ವೇಳೆ ಕೃಷ್ಣನ ಸನ್ನಿಧಾನಕ್ಕೆ ಆಗಮಿಸಲಿದ್ದು, ಈ ಹಿನ್ನೆಲೆಯಲ್ಲಿ ನ.28ರಂದು 7 ಗಂಟೆಗಳ ಕಾಲ ಭಕ್ತರಿಗೆ ದೇವರ ದರ್ಶನ ನಿರ್ಬಂಧಿಸಲಾಗಿದೆ.

ಪ್ರಧಾನಿ ಮೋದಿ ಭಕ್ತ ಸಮೂಹದೊಂದಿಗೆ ಗೀತಾ ಪಾರಾಯಣ ನಡೆಸಿ ಶ್ರೀಕೃಷ್ಣನಿಗೆ ಸಮರ್ಪಿಸಲಿದ್ದಾರೆ. ಸಾರ್ವಜನಿಕರಿಗೆ ನ.28ರಂದು ಬೆಳಗ್ಗೆ 8 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಕೃಷ್ಣ ಮಠಕ್ಕೆ ಪ್ರವೇಶ ನಿರ್ಬಂಧಿಸಲಾಗಿದೆ. ಭಕ್ತರು ಈ ಸೂಚನೆ ಗಮನಿಸಿ ಸಹಕರಿಸಬೇಕಾಗಿ ಶ್ರೀಮಠದ ಪ್ರಕಟಣೆ ತಿಳಿಸಿದೆ.

**ಸಮಯ ಮತ್ತು ಮಾರ್ಗ:** ನವೆಂಬರ್ 28, 2025 (ಶುಕ್ರವಾರ). **ಆಗಮನ ಸಮಯ:** ಸಾರ್ವಜನಿಕರು ಬೆಳಿಗ್ಗೆ 10:30 ಗಂಟೆಯ ಒಳಗಾಗಿ ನಿಗದಿತ ಸ್ಥಳವನ್ನು ತಲುಪಬೇಕು. ತಡವಾಗಿ ಬಂದವರಿಗೆ ಪ್ರವೇಶವಿರುವುದಿಲ್ಲ.

**ರೋಡ್ ಶೋ ಮಾರ್ಗ:** ಬನ್ನಂಜೆಯ ನಾರಾಯಣ ಗುರು ವೃತ್ತದಿಂದ ಸಿಟಿ ಬಸ್ ನಿಲ್ದಾಣದ ಮೂಲಕ ಕಲ್ಸಂಕ ಜಂಕ್ಷನ್ ವರೆಗೆ ಈ ರೋಡ್ ಶೋ ಸಾಗಲಿದೆ.

**ನಿಷೇಧಿತ ವಸ್ತುಗಳು:** ರೋಡ್ ಶೋ ಮಾರ್ಗದಲ್ಲಿ ಭದ್ರತಾ ಕಾರಣಗಳಿಂದ ಈ ಕೆಳಗಿನ ವಸ್ತುಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ, ನೀರಿನ ಬಾಟಲಿಗಳು, ಬ್ಯಾಗ್‌ಗಳು, ಹೂವಿನ ಬೊಕೆ ಅಥವಾ ಹಾರಗಳು, ನೆನಪಿನ ಕಾಣಿಕೆಗಳು, ಕ್ಯಾಮೆರಾ, ಬಾಕ್ಸ್‌ಗಳು. ಯಾವುದೇ ಹರಿತವಾದ ಆಯುಧಗಳು (ಚಾಕು ಇತ್ಯಾದಿ), ಬೆಂಕಿ ಹಚ್ಚುವ ಸಾಮಗ್ರಿಗಳು. ಡ್ರೋನ್‌ಗಳು, ಲೇಸರ್ ಲೈಟ್‌ಗಳು, ಸ್ಫೋಟಕ ವಸ್ತುಗಳು ಮತ್ತು ಧ್ವಜದ ಕಂಬಗಳು. ಹೆಚ್ಚುವರಿಯಾಗಿ ಯಾವುದೇ ಧ್ವಜ ಅಥವಾ ಚಿತ್ರಪಟಗಳನ್ನು ತರುವುದನ್ನು ನಿರ್ಬಂಧಿಸಲಾಗಿದೆ.

**ಸಾರ್ವಜನಿಕರಿಗೆ ಕಡ್ಡಾಯ ಸೂಚನೆಗಳು: ಪೊಲೀಸ್ ತಪಾಸಣೆ:** ಪ್ರತಿಯೊಬ್ಬರೂ ಕಡ್ಡಾಯವಾಗಿ ಪೊಲೀಸ್ ತಪಾಸಣೆಗೆ ಒಳಪಡಬೇಕು.

**ಬ್ಯಾರಿಕೇಡ್:** ರಸ್ತೆಯ ಇಕ್ಕೆಲಗಳಲ್ಲಿ ಅಳವಡಿಸಿರುವ ಪೊಲೀಸ್ ಬ್ಯಾರಿಕೇಡ್‌ಗಳನ್ನು ದಾಟಬಾರದು.

**ಕಟ್ಟಡ ಏರುವುದು ನಿಷಿದ್ಧ:** ರೋಡ್ ಶೋ ಮಾರ್ಗದ ಯಾವುದೇ ಕಟ್ಟಡಗಳ ಮೇಲೆ ಹತ್ತಿ ವೀಕ್ಷಿಸುವುದನ್ನು ನಿಷೇಧಿಸಲಾಗಿದೆ.

**ಮಕ್ಕಳ ಬಗ್ಗೆ ಎಚ್ಚರ:** 3 ವರ್ಷಕ್ಕಿಂತ ಚಿಕ್ಕ ವಯಸ್ಸಿನ ಮಕ್ಕಳನ್ನು ಕರೆತರುವಂತಿಲ್ಲ.

**ಭಕ್ತರಿಗೆ ದೇವರ ದರ್ಶನ ನಿರ್ಬಂಧ**

- ಉಡುಪಿಗೆ ನವೆಂಬರ್ 28ರಂದು ಆಗಮಿಸಲಿದ್ದಾರೆ ಪ್ರಧಾನಿ ನರೇಂದ್ರ ಮೋದಿ
- ನವೆಂಬರ್ 27ರಂದು ಉಡುಪಿಯಲ್ಲಿ ನಡೆಯಲಿದೆ ಭದ್ರತಾ ರಿಹರ್ಸಲ್
- ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಲಿರುವ ಪ್ರಧಾನಿ, ನವೆಂಬರ್ 28ರಂದು 7 ಗಂಟೆಗಳ ಕಾಲ ಭಕ್ತರಿಗೆ ದೇವರ ದರ್ಶನ ನಿರ್ಬಂಧ

### ಮುಖ್ಯ ರಸ್ತೆ ಕೇಸರಿಮಯ

ಆದಿ ಉಡುಪಿಯಿಂದ ಕಲ್ಸಂಕ ತನಕದ ಮುಖ್ಯ ರಸ್ತೆ, ವಾಹನ ಪಾರ್ಕಿಂಗ್ ಪ್ರದೇಶ, ಪ್ರಧಾನ ವೇದಿಕೆ ಪರಿಸರದಲ್ಲಿ ಪಾರ್ಥಸಾರಥಿ ಸಹಿತ ಲಕ್ಷ ಕಂಠ ಗೀತಾ ಬರಹವುಳ್ಳ ಕೇಸರಿ ಕೋಲು ಧ್ವಜ ರಾರಾಜಿಸುತ್ತಿದೆ. ಮುಖ್ಯ ರಸ್ತೆಯ ಎರಡೂ ಕಡೆ ಬ್ಯಾರಿಕೇಡ್ ಅಳವಡಿಕೆ ಪ್ರಗತಿಯಲ್ಲಿದೆ. ಆಯಕಟ್ಟಿನ ರಸ್ತೆ ಬದಿ ವಾಸನೆ ಬಾರದಂತೆ ಸಿಂಪಡಿಸಿದ ಬ್ಲೀಚಿಂಗ್ ಪೌಡರ್ ಘಮ ಘಮಿಸುತ್ತಿದೆ. ಕಬ್ಬಿಣದ ಅಟ್ಟಳಿಗೆಯ ಪ್ರಧಾನ ವೇದಿಕೆಗೆ ಕಾಂಕ್ರೀಟ್ ತಳಪಾಯ ಹಾಕಲಾಗಿದ್ದು 60 ಅಡಿ ದೂರದಲ್ಲಿ ಲಕ್ಷ ಕಂಠ ಗೀತಾ ಗಾಯಕರು ನೆಲದಲ್ಲಿ ಕೂತು ಪಠಣ ಮಾಡಲಿದ್ದಾರೆ.

## ಸಮಾನತೆ ಸಾರಿದ ಸಂವಿಧಾನ ಶ್ರೇಷ್ಠ

- ಉದಯವಾಹಿನಿ ಸಿರುಗುಪ್ಪ

ಸಮಾನತೆ, ಭ್ರಾತೃತ್ವ ಹಾಗೂ ಸಹೋದರತೆ ಸಾರಿದ ನಮ್ಮ ದೇಶದ ಸಂವಿಧಾನ ಶ್ರೇಷ್ಠವಾಗಿದ್ದು, ಹೀಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನದ ಮಹತ್ವವನ್ನು ಅರಿತುಕೊಳ್ಳಬೇಕು ಎಂದು ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ ಮೋಕ ಹೇಳಿದರು.

ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಹೊನ್ನುರಮ್ಮ ದಿ.ಸಿದ್ದಪ್ಪ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಸಂವಿಧಾನ ದಿನಾಚರಣೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು. ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂವಿಧಾನವನ್ನು ಓದಬೇಕು. ಸಂವಿಧಾನದಲ್ಲಿನ ವಿಷಯಗಳನ್ನು ಅರಿತುಕೊಳ್ಳಬೇಕು ತಿಳಿಸಿದರು.

## ಮನೆಸುಟ್ಟು ಭಸ್ಮ: ನೊಂದ ಕುಟುಂಬಕ್ಕೆ ಆಸರೆಯಾದ ಸಮಾಜ ಸೇವಕರು

ಉದಯವಾಹಿನಿ ಚಿತ್ರ

- ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಪೋಲಕಪಳ್ಳಿ ಗ್ರಾಮದ ಸೈಯದ್ ಇಬ್ರಾಹಿಂ ಎಂಬುವರ ಮನೆಯು ಆಕಸ್ಮಿಕವಾಗಿ ಶಾರ್ಟ್ ಸರ್ಕ್ಯೂಟ್ ದಿಂದ ಬೆಂಕಿ ತಗುಲಿ ಮನೆ ಸಂಪೂರ್ಣ ಭಸ್ಮವಾದ ಸುದ್ದಿ ತಿಳಿದು ಸಮಾಜ ಸೇವಕ ವಿಜಯಕುಮಾರ ಶಾಬಾದಿ ಮತ್ತು ಅನೀಲ ಬಿರಾದಾರ ಅವರ ಮನೆಗೆ ತೆರಳಿ ವೈಯಕ್ತಿಕವಾಗಿ ದವಸ ಧಾನ್ಯಗಳ ಕಿಟ್ ರಗ್ಗು ವಿತರಿಸಿ ಕುಟುಂಬಕ್ಕೆ ಧೈರ್ಯ ತುಂಬಿದರು. ಸಮಾಜ ಸೇವಕ ವಿಜಯಕುಮಾರ ಶಾಬಾದಿ ಮತ್ತು ಅನೀಲ ಬಿರಾದಾರ ಮಾತನಾಡಿ ತಮ್ಮ ಕುಟುಂಬಕ್ಕೆ ಹೆದರುವ ಅವಶ್ಯಕತೆಯಿಲ್ಲ ನಾವೆಲ್ಲರೂ ನಿಮ್ಮ ಕಷ್ಟ ದುಃಖದಲ್ಲಿ ಭಾಗಿಯಾಗುತ್ತೇವೆ, ಯಾವುದೇ ಸಮಸ್ಯೆ ಎದ್ದರೆ ನಮ್ಮ ಗಮನಕ್ಕೆ ತನ್ನಿ ಎಂದು ಧೈರ್ಯ ತುಂಬಿದರು, ಹಾಗೂ ತಾಲ್ಲೂಕಾಡಳಿತ ಮುತುವರ್ಜಿ ವಹಿಸಿ ಬಡ ಕುಟುಂಬಕ್ಕೆ ಆದಷ್ಟು ಶೀಘ್ರ ಸರ್ಕಾರದಿಂದ ಸಿಗುವ ಪರಿಹಾರ ದೊರಕಿಸಿಕೊಡಬೇಕು ಎಂದರು. ಈ ಸಂದರ್ಭದಲ್ಲಿ ಪೋಲಕಪಳ್ಳಿ ಗ್ರಾಪಂ.ಸದಸ್ಯ ಮಾಜಿ ಅಧ್ಯಕ್ಷ ಸೈಯದ್ ಜಾಕೀರಸಾಬ, ಸಾಗರ್ ಆನಂದಿ, ಗುಂಡಪ್ಪ ಹಿತ್ತಲ, ಶಶಿಧರ ಹುಡದಳ್ಳಿ ಇದ್ದರು.

## ಅಕ್ರಮ ಗ್ಯಾಸ್ ರೀಫಿಲ್ಲಿಂಗ್ ಅಡ್ಡೆ ಮೇಲೆ ದಾಳಿ

- ಉದಯವಾಹಿನಿ, ಕಲಬುರಗಿ

ನಗರದ ಡಂಕಾ ಕ್ರಾಸ್ ದಿಂದ ಗಣೇಶ್ ಮಂದಿರಕ್ಕೆ ಹೋಗುವ ರಸ್ತೆಯಲ್ಲಿ ಗೃಹ ಬಳಕೆಗೆ ಗ್ಯಾಸ್ ಸಿಲಿಂಡರ್‌ಗಳನ್ನು ಅಕ್ರಮವಾಗಿ ಸಂಗ್ರಹ ಮಾಡಿ ಆಟೋರಿಕ್ಷಾಗಳಿಗೆ ತುಂಬಲಾಗುತ್ತಿದೆ ಎಂಬ ಮಾಹಿತಿ ಮೇಲೆ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಹಾರ ನಿರೀಕ್ಷಕ ಯಲ್ಲಾಲಿಂಗ ಕಡಕೋಳಕರ್ ಅವರು ಸಿಸಿಬಿ ಘಟಕದ ಪಿಐ ಅರುಣಕುಮಾರ, ಸಿಬ್ಬಂದಿಗಳಾದ ಮೃತ್ಯುಂಜಯ, ಅಶೋಕ ಕಟಕೆ, ಯಲ್ಲಪ್ಪ, ಶಿವಕುಮಾರ, ನಾಗರಾಜ ಮತ್ತು ಸುನೀಲಕುಮಾರ ಅವರೊಂದಿಗೆ ದಾಳಿ ನಡೆಸಿದ್ದಾರೆ. ಆಳಂದ ಕಾಲೋನಿಯ ಪರಶುರಾಮ ಕೋಟನೂರ (23) ಎಂಬಾತನನ್ನು ಬಂಧಿಸಿ ಗ್ಯಾಸ್ ಸಿಲಿಂಡರ್, ತೂಕದ ಯಂತ್ರ, ಹೆಚ್.ಪಿ.ಮೋಟಾರ್ ಸೇರಿ 7,500 ರೂ.ಮೌಲ್ಯದ ವಸ್ತುಗಳು ಮತ್ತು 450 ರೂ.ನಗದು ಜಪ್ತಿ ಮಾಡಿದ್ದಾರೆ.

## ಸಂವಿಧಾನ ರಕ್ಷಣೆ, ಪಾಲನೆ ನಮ್ಮೆಲ್ಲರ ಹೊಣೆ

- ಉದಯವಾಹಿನಿ, ಹೊಸಪೇಟೆ

ಭಾರತದ ಸಂವಿಧಾನದ ಮಹತ್ವವನ್ನು ಪ್ರತಿಯೊಬ್ಬರು ಅರಿತು ಪಾಲಿಸುವುದು ಮತ್ತು ಸಂರಕ್ಷಿಸುವುದು ಕರ್ತವ್ಯವೆಂದು ಭಾವಿಸಬೇಕಿದೆ ಎಂದು ತಾಲ್ಲೂಕು ಕಾನೂನು ಸೇವಾ ಸಮಿತಿ ಮತ್ತು ಸಿಜೆಎಂ ಅಧ್ಯಕ್ಷರು ಹಾಗೂ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುಬ್ರಮಣ್ಯ.ಎನ್ ಹೇಳಿದರು.

ನಗರದ ನ್ಯಾಷನಲ್ ಶಿಕ್ಷಣ ಪದವಿ ಮಹಾವಿದ್ಯಾಲಯದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ ಸಂವಿಧಾನ ದಿನಾಚರಣೆ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು, ಸ್ವಾತಂತ್ರ್ಯ ಭಾರತಕ್ಕೆ ಸಂವಿಧಾನವನ್ನು ರೂಪಿಸಲು ರಚನಾ ಸಭೆ ಸ್ಥಾಪನೆಯಾಗಿದ್ದು 1946 ರಲ್ಲಿ. ಡಾ.ಬಿ.ಆರ್.ಅಂಬೇಡ್ಕರ್ ಅವರ ನೇತೃತ್ವದಲ್ಲಿ ನೂರಾರು ಮಂದಿ ಸುಮಾರು ಮೂರು ವರ್ಷ ಶ್ರಮಿಸಿ ಸಂವಿಧಾನ ರೂಪಿಸಿದರು. ಭಾರತದಲ್ಲಿ ಹಲವಾರು ಜಾತಿ, ಹತ್ತಾರು ಧರ್ಮ, ವೈವಿಧ್ಯಮಯ ಸಂಸ್ಕೃತಿ, ಆಚರಣೆಗಳಿಂದ

ಉದಯವಾಹಿನಿ ಚಿತ್ರ

ಕೂಡಿರುವುದಕ್ಕೆ ಈ ದೇಶಕ್ಕೆ ಸಂವಿಧಾನವನ್ನು ರೂಪಿಸುವುದು ಅತ್ಯಂತ ಸವಾಲಿನ ಕೆಲಸವಾಗಿತ್ತು. ಭಾರತವು ಇಂದು ಜಾಗತಿಕ ಮಟ್ಟದಲ್ಲಿ ಗಮನಾರ್ಹ ಸ್ಥಾನ ಪಡೆದಿದೆ.

ಸಂಪನ್ಮೂಲ ವ್ಯಕ್ತಿ ಎ.ಕರುಣಾನಿಧಿ ಸಂವಿಧಾನದ ಕಾನೂನು ಅರಿವು ಮತ್ತು ನೆರವು ಬಗ್ಗೆ ಉಪನ್ಯಾಸ ನೀಡಿದರು. ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಶ್ರೀನಿವಾಸಮೂರ್ತಿ, ಶ್ರೀವಿನಾಯಕ ಎಜುಕೇಷನ್ ಸೊಸೈಟಿ ಕಾರ್ಯದರ್ಶಿ ಕಾಕುಬಾಳು ರಾಜೇಂದ್ರ, ಖಜಾಂಚಿ ಆಶಾ ಮಹಮ್ಮದ್ ಹಾರುನ್, ಪ್ರಾಂಶುಪಾಲರು, ಸೇರಿದಂತೆ ಬಿಇಡಿ ಪ್ರಶಿಕ್ಷಣಾರ್ಥಿಗಳು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> ಕಾನೂನು ನೆರವು ಆರ್ಥಿಕವಾಗಿ ದುರ್ಬಲರಿಗೆ ದೊಡ್ಡ ಆಶಾಕಿರಣ. ಉಚಿತ ಇಲ್ಲದಿದ್ದರೂ ಕಡಿಮೆ ವೆಚ್ಚದಲ್ಲಿ ವಕೀಲರ ಸೌಲಭ್ಯ, ಕಾನೂನು ಸಲಹೆ, ಮತ್ತು ಮಾರ್ಗದರ್ಶನದ ಮೂಲದ ಸರ್ಕಾರದಿಂದ ನ್ಯಾಯ ಒದಗಿಸಲು ಸಹಕಾರ ನೀಡುತ್ತದೆ. ನಾವು ಎಲ್ಲರೂ ಕಾನೂನು ಅರಿವು ಪಡೆದು ಅಗತ್ಯವಿದೆ.
> –ಪ್ರಶಾಂತ್ ನಾಗಲಾಪುರ
> ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ

## ಗುದ್ನೇಶ್ವರ ಜಾತ್ರೆಗೆ ವಿಶೇಷ ಬಸ್

- ಉದಯವಾಹಿನಿ ಕೊಪ್ಪಳ

ಸಮಿಪದ ಗುದ್ನೇಪ್ಪನಮಠ ಗ್ರಾಮದಲ್ಲಿ 2025 ಡಿಸೆಂಬರ್ 03, 04, 05, 06 ರಂದು ಕುಕನೂರ ತಾಲ್ಲೂಕಿನ ಗುದ್ದೇಶ್ವರಮಠದ ಗುದ್ದೇಶ್ವರ ಜಾತ್ರೆ ನಡೆಯಲಿದ್ದು, ಅಂದು ಕೊಪ್ಪಳ ಜಿಲ್ಲೆ ಸೇರಿದಂತೆ ಬೇರೆ ಬೇರೆ ಜಿಲ್ಲೆಯಿಂದ ಭಕ್ತರು ಜಾತ್ರೆಗೆ ಆಗಮಿಸಲಿದ್ದಾರೆ. ಆದ್ದರಿಂದ ಭಕ್ತರ ಅನುಕೂಲಕ್ಕಾಗಿ ಮತ್ತು ಭಕ್ತರ ಬೇಡಿಕೆ ತಕ್ಕಂತೆ ಪ್ರತಿ 15 ನಿಮಿಷಕ್ಕೆ ಒಂದರಂತೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಮತ್ತು ಗದಗ–ಕುಕನೂರು ಬಸ್, ಕೊಪ್ಪಳ–ಕುಕನೂರ ಬಸ್‌ಗಳನ್ನು ಗುದ್ದೇಶ್ವರಮಠ/ ಗುದ್ನೇಪ್ಪನಮಠ ಗ್ರಾಮದವರೆಗೆ ವಿಸ್ತರಿಸಬೇಕು. ಹೋಗುವ ಮಾರ್ಗ ಕುಕನೂರು ಬಸ್ ನಿಲ್ದಾಣದಿಂದ ವಿದ್ಯಾ ಶ್ರೀ ಶಾಲೆ, ದ್ಯಾಂಪೂರ–ಗುದ್ದೇಶ್ವರಮಠ ರಸ್ತೆ ಮುಖಾಂತರ ಗುದ್ದೇಶ್ವರಮಠದ ಜಗದ್ಗುರು ರೇಣುಕಾಚಾರ್ಯ ಸರ್ಕಲ್‌ಗೆ ಬಸ್ ನಿಲುಗಡೆ ಮಾಡುವುದು.

ತೆರಳು 

# ಬೆಂಕಿ ಅವಘಡ: ಮೃತರ ಸಂಖ್ಯೆ 55ಕ್ಕೇರಿಕೆ, ಮೂವರು ಶಂಕಿತರ ಬಂಧನ

**ಹಾಂಗ್‌ಕಾಂಗ್:** ನಗರದ ವಸತಿ ಸಮುಚ್ಚಯವೊಂದರ ಬಹುಮಹಡಿ ಕಟ್ಟಡಗಳಲ್ಲಿ ಬೆಂಕಿ ಅವಘಡ ಸಂಭವಿಸಿದ ಪರಿಣಾಮ ಮೃತಪಟ್ಟವರ ಸಂಖ್ಯೆ 55ಕ್ಕೆ ಏರಿಕೆಯಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ ಘಟನೆಯಲ್ಲಿ 300 ಮಂದಿ ನಾಪತ್ತೆ ಆಗಿದ್ದಾರೆ. ಕಟ್ಟಡಗಳಲ್ಲಿದ್ದ 500ಕ್ಕೂ ಅಧಿಕ ಜನರನ್ನು ತಾತ್ಕಾಲಿಕ ಆಶ್ರಯತಾಣಗಳಿಗೆ ಸ್ಥಳಾಂತರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ನಿರ್ಮಾಣ ಕಾಮಗಾರಿಗಾಗಿ ಕಟ್ಟಡಗಳ ಸುತ್ತಲೂ ಬಿದಿರಿನ ಕಂಬಗಳನ್ನು ಅಳವಡಿಸಿದ್ದರಿಂದ ಬೆಂಕಿಯು ಮತ್ತಷ್ಟು ತೀವ್ರವಾಗಿ ವ್ಯಾಪಿಸಿತ್ತು. ದಟ್ಟ ಹೊಗೆ ಮತ್ತು ಜ್ವಾಲೆ ಕಟ್ಟಡಗಳನ್ನು ಆವರಿಸಿಕೊಂಡಿತ್ತು. ಘಟನೆ ನಡೆದ ಪ್ರದೇಶದಲ್ಲಿ ಎಂಟು ಬ್ಲಾಕ್‌ಗಳಿದ್ದು, 2,000 ಅಪಾರ್ಟ್‌ಮೆಂಟ್‌ಗಳನ್ನು ಹೊಂದಿದೆ. ಇವುಗಳಲ್ಲಿ 4,600ಕ್ಕೂ ಹೆಚ್ಚು ಜನರನ್ನು ವಾಸಿಸುತ್ತಿದ್ದರು. ಗುರುವಾರ ಬೆಳಿಗ್ಗೆಯ ಹೊತ್ತಿಗೆ ನಾಲ್ಕು ಬ್ಲಾಕ್‌ಗಳಲ್ಲಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದೇವೆ. ಜತೆಗೆ, ಮೂರು ಬ್ಲಾಕ್‌ಗಳಲ್ಲಿ ಕಾರ್ಯಾಚರಣೆ ಮುಂದುವರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆ ಸಂಬಂಧ ಮೂವರು ಶಂಕಿತ ಆರೋಪಿಗಳನ್ನು ಬಂಧಿಸಿದ್ದೇವೆ ಎಂದು ಪೊಲೀಸರು ಹೇಳಿದ್ದಾರೆ.



# ಇಡಿ ಅಧಿಕಾರಿಗಳ ಸೋಗಿನಲ್ಲಿ ಪೊಲೀಸರಿಂದಲೇ ಹಣ ಸುಲಿಗೆ ಮಾಡಿದ್ದ ಇಬ್ಬರ ಬಂಧನ

**ಗುರುಗ್ರಾಮ:** ಇಡಿ ಅಧಿಕಾರಿಗಳೆಂದು ಸಂಚಾರ ಪೊಲೀಸರಿಂದ ಹಣ ಸುಲಿಗೆ ಮಾಡಿದ್ದ ಇಬ್ಬರು ಆರೋಪಿಗಳನ್ನು ಇಲ್ಲಿ ಬಂಧಿಸಲಾಗಿದೆ. ಬಂಧಿತ ಆರೋಪಿಗಳನ್ನು ಹರಿಯಾಣದ ಚರ್ಕಿ ದಾದ್ರಿ ನಿವಾಸಿ ದೀಪಕ್ (45), ನೇಪಾಳದಲ್ಲಿ ವಾಸಿಸುವ ನಿತಿನ್ ಕುಮಾರ್ (50) ಎಂದು ಗುರುತಿಸಲಾಗಿದೆ. ಬಂಧಿತರಲ್ಲಿ ಒಬ್ಬ ಆರೋಪಿಯ ವಿರುದ್ಧ ಅತ್ಯಾಚಾರ ಸೇರಿದಂತೆ ಹಲವು ಅಪರಾಧ ಪ್ರಕರಣಗಳು ದಾಖಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಮೇಫೀಲ್ಡ್ ಗಾರ್ಡನ್ ಸಂಚಾರ ಸಿಗ್ನಲ್‌ನಲ್ಲಿ ನಿಯೋಜಿಸಲಾದ ಸಂಚಾರ ಪೊಲೀಸ್ ಸಿಬ್ಬಂದಿ ಸಲ್ಲಿಸಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿದಂತರ ಇಬ್ಬರನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಕಳೆದ ಅ.15ರ ಸಂಜೆ, ಇಬ್ಬರು ಆರೋಪಿಗಳು ಕಾರಿನಲ್ಲಿ ಬಂದು ಕರ್ತವ್ಯದಲ್ಲಿದ್ದ ಸಂಚಾರಿ ಪೊಲೀಸ್ ಸಿಬ್ಬಂಧಿ ಬಳಿ ತಮನ್ನು ಜಾಗೃತ ದಳದ ಅಧಿಕಾರಿಗಳೆಂದು ಗುರುತಿಸಿಕೊಂಡರು. ನಂತರ ಅವರನ್ನು ಪೊಲೀಸ್ ಬೂತ್‌ಗೆ ಕರೆದುಕೊಂಡು ಹೋಗಿ ನಿಮ ವಿರುದ್ಧ ದೂರುಗಳಿವೆ ಎಂದು ಹೇಳಿ ಹಣದ ಬೇಡಿಕೆ ಇಟ್ಟಿದ್ದರು. ಬೆದರಿಕೆ ವಿಡಿಯೋ ತೋರಿಸಿ ಅವರ ಬಳಿ ಇದ್ದ ಹಣ ಸುಲಿಗೆ ಮಾಡಲಾಗಿತ್ತು. ಪ್ರಸ್ತುತ ಆರೋಪಿಗಳ ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

# ಟ್ರಂಪ್ ತಲೆಕೆಡಿಸಿದ ಹೊಸ ಕಿರಿಕ್

## ರಷ್ಯಾ–ಅಮೆರಿಕ ಅಧಿಕಾರಿಗಳ ಶಾಂತಿ ಮಾತುಕತೆ ಆಡಿಯೋ ಲೀಕ್

**ವಾಷಿಂಗ್ಟನ್:** ರಷ್ಯಾ, ಉಕ್ರೇನ್ ನಡುವಿನ ಸುಧೀರ್ಘ ಯುದ್ಧವನ್ನು ಕೊನೆಗೊಳಿಸಲು ಅಮೆರಿಕಾ ಅಧ್ಯಕ್ಷ ಟ್ರಂಪ್ ಮಧ್ಯಸ್ಥಿಕೆ ವಹಿಸಿಕೊಂಡಿದ್ದು, ಉಕ್ರೇನ್‌ನೊಂದಿಗೆ ಸೇರಿ 28 ಅಂಶಗಳ ಶಾಂತಿ ಒಪ್ಪಂದ ಬಹುತೇಕ ಅಂತ್ಯವಾಗಿದೆ. ಇನ್ನು, ಈ ಬೆನ್ನಲ್ಲೆ, ಈ ಶಾಂತಿ ಒಪ್ಪಂದದ ಕುರಿತು ಅಮೆರಿಕಾದ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಅವರು ಡೊನಾಲ್ಡ್ ಟ್ರಂಪ್ ಹತ್ತಿರ ಹೇಗೆ ಮಾತನಾಡಿ ಒಪ್ಪಿಸಬೇಕು ಎಂಬುದರ ಬಗ್ಗೆ ರಷ್ಯಾದ ನೀತಿ ಸಲಹೆಗಾರ ಯೂರಿ ಉಷಕೋವ್ ಅವರಿಗೆ ಕೋಚಿಂಗ್ ನೀಡಿದ್ದಾರೆ ಎಂಬ ಆಡಿಯೋ ಲೀಕ್ ಆಗಿದೆ. ಬ್ಲೂಮ್‌ಬರ್ಗ್ ನ್ಯೂಸ್ ಪ್ರಕಟಿಸಿದ ಆಡಿಯೋ ಸೋರಿಕೆಯೊಂದು ಈ ವಿಷಯವನ್ನು ಬೆಳಕಿಗೆ ತಂದಿದೆ. ಈ ಆಡಿಯೋದಲ್ಲಿ, ಅ. 14ರಂದು ನಡೆದ ಸಂಭಾಷಣೆಯೊಂದು ಇದೆ. ಇದರಲ್ಲಿ ವಿಟ್ಕಾಫ್, ರಷ್ಯಾದ ವಿದೇಶಾಂಗ ನೀತಿ ಸಲಹೆಗಾರ ಯೂರಿ ಉಷಕೋವ್ ಅವರಿಗೆ, ಉಕ್ರೇನ್ ಶಾಂತಿ ಯೋಜನೆಯನ್ನು ಅಧ್ಯಕ್ಷ ಟ್ರಂಪ್ ಅವರ ಮುಂದೆ ಹೇಗೆ ಮಂಡಿಸಬೇಕು ಎಂದು ಸಲಹೆ ನೀಡಿದ್ದಾರೆ ಎಂದು ವರದಿಯಾಗಿದೆ.

**ಲೀಕ್ ಆಗಿರುವ ಆಡಿಯೋದಲ್ಲೇನಿದೆ?:** ಅಮೆರಿಕಾ ರಷ್ಯಾದ ಅಧಿಕಾರಿಗೆ ಟ್ರಂಪ್ ಹತ್ತಿರ ಹೇಗೆ ಮಾತನಾಡಬೇಕು ಎಂದು ತರಬೇತಿ ನೀಡಿದ್ದಾರೆಂದು ಸೋರಿಕೆ ಆಗಿರುವ ಆಡಿಯೋದಲ್ಲಿ ಅಮೆರಿಕಾದ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್, ರಷ್ಯಾದ ವಿದೇಶಾಂಗ ನೀತಿ ಸಲಹೆಗಾರ ಯೂರಿ ಉಷಕೋವ್ ಸಂಭಾಷಣೆ ನಡೆಸುತ್ತಿರುವುದು ತಿಳಿದು ಬಂದಿದೆ. ಇದರಲ್ಲಿ, ಇಬ್ಬರೂ ಅಧಿಕಾರಿಗಳು ಯುದ್ಧವನ್ನು ಕೊನೆಗಾಣಿಸುವ ಮಾರ್ಗಗಳ ಬಗ್ಗೆ ಚರ್ಚಿಸಿದ್ದಾರೆ. ಉಷಾಕೋವ್, ತಮ್ಮ ನಾಯಕ ಪುಟಿನ್ ಮತ್ತು ಅಧ್ಯಕ್ಷ ಟ್ರಂಪ್ ಅವರ ನಡುವೆ ಮಾತುಕತೆ ಏರ್ಪಡಿಸುವುದು ಸಹಾಯ ಮಾಡಬಹುದೇ ಎಂದು ಕೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯೆಯಾಗಿ, ವಿಟ್ಕಾಫ್, ನನ್ನ ಬಾಸ್ ಸಿದ್ಧರಿದ್ದಾರೆ ಎಂದು ಹೇಳಿ, ಆ ಕರೆಯ ವ್ಯವಸ್ಥೆ ಬಗ್ಗೆ ವಿವರಿಸಿದ್ದಾರೆ. ಇದೇ ವೇಳೆ ವಿಟ್ಕಾಫ್ ಉಷಾಕೋವ್‌ಗೆ, ನೀವು ಅಧ್ಯಕ್ಷ ಟ್ರಂಪ್ ಅವರನ್ನು ಈ ಸಾಧನೆಗೆ ಅಭಿನಂದಿಸಿ... ಅವರು ಶಾಂತಿಪ್ರಿಯ ವ್ಯಕ್ತಿ ಎಂದು ಗೌರವಿಸಿ, ಮತ್ತು ಇದು ನಡೆದಿದ್ದಕ್ಕೆ ನೀವು ನಿಜವಾಗಿಯೂ ಸಂತೋಷಪಟ್ಟಿದ್ದೀರಿ ಎಂದು ಹೇಳಿ ಎಂದು ಸಲಹೆ ನೀಡಿದ್ದಾರೆ ಎಂದು ವರದಿಯಾಗಿದೆ.

**ಸ್ಟೀವ್ ವಿಟ್ಕಾಫ್ ಪರ ನಿಂತ ಟ್ರಂಪ್:** ಈ ಆಡಿಯೋ ಲೀಕ್ ವಿವಾದದ ಬೆನ್ನಲ್ಲೆ ಟ್ರಂಪ್ ವಿಟ್ಕಾಫ್ ಬೆಂಬಲಕ್ಕೆ ನಿಂತಿದ್ದು, ಈ ಲೀಕ್ ಕುರಿತು ರಷ್ಯಾದ ಕಡೆಯವರಿಗೆ ಕೋಚಿಂಗ್ ನೀಡಲಾಗಿದೆ ಎಂಬ ಮಾತನ್ನು ತಿರಸ್ಕರಿಸಿದ್ದಾರೆ. ಅಲ್ಲದೆ, ಸ್ಟೀವ್ ವಿಟ್ಕಾಫ್ ಮಾಡಿದ್ದು ರಾಜತಾಂತ್ರಿಕ ಮಾತುಕತೆಗಳಲ್ಲಿ ಪ್ರಮಾಣಿತ ಅಭ್ಯಾಸ ಎಂದು ಹೇಳಿದ್ದು, ಅಮೆರಿಕ ನಿರಂತರವಾಗಿ ಶಾಂತಿ ಪರಿಹಾರಗಳನ್ನು ಹುಡುಕುತ್ತದೆ ಎಂದು ಆಡಿಯೋ ಲೀಕ್ ಅನ್ನು ನಿರಾಕರಿಸಿದ್ದಾರೆ. ಇನ್ನು, ಬ್ಲೂಮ್ ಬರ್ಗ್ ಮತ್ತು ದಿ ವಾಲ್ ಸ್ಟ್ರೀಟ್ ಜರ್ನಲ್ ವರದಿ ಅನಾಮಧೇಯ ಪಶ್ಚಿಮ ರಹಸ್ಯ ಮೂಲಗಳನ್ನು ಉಲ್ಲೇಖಿಸಿ, ಈ ಆಡಿಯೋ ಲೀಕ್ ಹಿಂದಿರುವುದು ಮೂರನೇ ಪಕ್ಷದ ಗುಪ್ತಚರ ಸಂಸ್ಥೆಗಳು ಕರೆಗಳನ್ನು ಕದ್ದಾಲಿಕೆ ಮಾಡಿರಬಹುದು. ನಂತರ ಇದನ್ನು, ಸೋರಿಕೆ ಮಾಡಿರಬಹುದು ಎಂದರೆ, ಇನ್ನಷ್ಟು ಜನ ಯುರೋಪಿನ್ನಲ್ಲಿ ಯಾರೋಪ್ ಒಕ್ಕೂಟದಿಂದ ಈ ಕೃತ್ಯ ನಡೆಸಿರಬಹುದು ಎಂದು ವರದಿಯಾಗಿದೆ.



### ಆಡಿಯೋ ಲೀಕ್ ಖಂಡಿಸಿದ ರಷ್ಯಾ

ಇತ್ತ ರಷ್ಯಾ ಸಹ ಈ ಆಡಿಯೋ ಲೀಕ್ ವಿಚಾರದ ಕುರಿತು ಖಂಡನೆ ವ್ಯಕ್ತಪಡಿಸಿದೆ. ಉಕ್ರೇನ್ ಶಾಂತಿ ಮಾತುಕತೆಗಳನ್ನು ದುರ್ಬಲಗೊಳಿಸುವ ಸ್ವೀಕಾರಾರ್ಹವಲ್ಲದ ಪ್ರಯತ್ನ ಮತ್ತು ಈ ಆಡಿಯೋ ಲೀಕ್ ಒಂದು ರೀತಿಯ ಹೈಬ್ರಿಡ್ ಯುದ್ಧ ಎಂದು ಕರೆದಿದ್ದಾರೆ. ಈ ಕುರಿತು ಕೊಮ್ಮರ್‌ಸಾಂಟ್ ಪತ್ರಿಕೆಗೆ ನೀಡಿದ ಸಂದರ್ಶನದಲ್ಲಿ ರಷ್ಯಾದ ನೀತಿ ಸಲಹೆಗಾರ ಯೂರಿ ಉಷಕೋವ್ ವಿಟ್ಕಾಫ್ ಅವರೊಂದಿಗಿನ ತಮ್ಮ ಸಂಭಾಷಣೆಗಳು ಎನ್‌ಕ್ರಿಪ್ಟ್ ಮಾಡಿದ ಸರ್ಕಾರಿ ಚಾನಲ್‌ಗಳ ಮೂಲಕ ನಡೆದಿದ್ದವು ಎಂದು ಹೇಳಿದ್ದಾರೆ. ಒಂದು ಪಕ್ಷವು ಉದ್ದೇಶಪೂರ್ವಕವಾಗಿ ಹಾಗೆ ಮಾಡದ ಹೊರತು ಇವುಗಳನ್ನು ಸೋರಿಕೆಯಾಗುವುದಿಲ್ಲ ಎಂದು ಹೇಳಿದ್ದಾರೆ. ಅಲ್ಲದೆ, ವಿಟ್ಕಾಫ್ ನೊಂದಿಗೆ ನನ್ನ ಸಂಭಾಷಣೆಯು ಸಾರ್ವಜನಿಕವಾಗಿ ಬಿಡುಗಡೆಯಾಗುವ ಉದ್ದೇಶದಿಂದ ಕೂಡಿರಲಿಲ್ಲ ಮತ್ತು ಸೋರಿಕೆಯಾಗಬಾರದಿತ್ತು ಎಂದು ಹೇಳಿದ್ದಾರೆ. ಇದು ಸ್ವೀಕಾರಾರ್ಹವಲ್ಲ ಎಂದಿರುವ ಈ ಸೋರಿಕೆಯು ರಷ್ಯಾ ಮತ್ತು ಯುಎಸ್ ನಡುವಿನ ಚರ್ಚೆಗಳಿಗೆ ಅಡ್ಡಿಪಡಿಸುವ ಸ್ಪಷ್ಟ ಉದ್ದೇಶದಿಂದ ಮಾಡಲ್ಪಟ್ಟಿದೆ ಎಂದು ಕಿಡಿಕಾರಿದ್ದಾರೆ.

### ಈ ಆಡಿಯೋ ಲೀಕ್ ಹಿಂದೆ ಯಾರಿದ್ದಾರೆ?

ಈ ಆಡಿಯೋ ಲೀಕ್ ಆಗುತ್ತಿದ್ದಂತೆ ಯಾರು ಇದನ್ನು ಸೋರಿಕೆ ಮಾಡಿರಬಹುದು, ಅದು ಮಾಧ್ಯಮದ ಕೈಗೆ ಹೇಗೆ ಸಿಕ್ಕಿದೆ ಎಂಬ ಬಗ್ಗೆ ಸಾವಿರಾರು ಅನುಮಾನಗಳು ಶುರುವಾಗಿದೆ. ಕೆಲವರು ರಷ್ಯಾ ಹಾಗೂ ಉಕ್ರೇನ್‌ನಿಂದ ಯಾರಾದರೂ ಇದನ್ನು ಸೋರಿಕೆಯಾಗುವಂತೆ ಮಾಡಿರಬೇಕು ಎಂದರೆ ಇನ್ನೊಂದಿಷ್ಟು ಜನ ಅಮೆರಿಕಾದವರೇ ಮಾಡಿದ್ದಾರೆ ಎಂದು ಹೇಳುತ್ತಿದ್ದಾರೆ. ಆದರೆ ಉಭಯ ದೇಶಗಳು ಈ ಘಟನೆ ಕುರಿತು ತಮ್ಮ ಖಂಡನೆಯನ್ನು ವ್ಯಕ್ತಪಡಿಸಿದ್ದು, ಬಹುಶಃ ಈ ಸೋರಿಕೆ ಮಾಡಲು ಸಾಧ್ಯವಿಲ್ಲ ಎಂದು ವಿಶ್ಲೇಷಿಸುತ್ತಿದ್ದಾರೆ.

### ಪಶ್ಚಿಮ ರಹಸ್ಯ ಮೂಲ

# ರೈಲು ಹರಿದು 11 ರೈಲ್ವೇ ಕಾರ್ಮಿಕರ ಸಾವು

**ಬೀಜಿಂಗ್:** ಹಾಂಗ್‌ಕಾಂಗ್‌ನಲ್ಲಿ ಬಹುಮಹಡಿ ವಸತಿ ಕಟ್ಟಡವೊಂದರಲ್ಲಿ ಬೆಂಕಿ ಕಾಣಿಸಿಕೊಂಡು 40ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ ಕೆಲವೇ ಗಂಟೆಗಳ ನಂತರ ಚೀನಾದಲ್ಲಿ ಮತ್ತೊಂದು ಅಪಘಾತ ಸಂಭವಿಸಿದ್ದು, ಆಘಾತ ಉಂಟುಮಾಡಿದೆ. ಚೀನಾದಲ್ಲಿ ರೈಲೊಂದು ರೇಲ್ವೆಕಾರ್ಮಿಕರ ಮೇಲೆ ಹರಿದು ಹೋಗಿದ್ದು, 11 ಜನರು ಸಾವನ್ನಪ್ಪಿದ್ದಾರೆ. ಚೀನಾದ ಯುನ್ನಾನ್ ಪ್ರಾಂತ್ಯದಲ್ಲಿ ಈ ಘಟನೆ ಸಂಭವಿಸಿದೆ. ಭೂಕಂಪನ ಉಪಕರಣಗಳ ಪರೀಕ್ಷೆಗೆ ಬಳಸಲಾಗುತ್ತಿದ್ದ ರೈಲು ಮುಂಜಾನೆ ಕುನ್ಮಿಂಗ್‌ನ ಲುವೊಯಾಂಗ್ ಟೌನ್ ನಿಲ್ದಾಣದಲ್ಲಿ ನಿಲ್ದಾಣದೊಳಗಿನ ತಿರುವು ಮೂಲಕ ರೈಲು ಸಾಮಾನ್ಯವಾಗಿ ಹಾದುಹೋಗುತ್ತಿದ್ದಾಗ, ಹಳಿ ಪ್ರದೇಶಕ್ಕೆ ಪ್ರವೇಶಿಸಿದ್ದ ನಿರ್ಮಾಣ ಕಾರ್ಮಿಕರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ಪರಿಣಾಮ 11 ಜನರು ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಕುನ್ಮಿಂಗ್ ರೈಲ್ವೆ ಬ್ಯೂರೋ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ಇನ್ನು, ಮಧ್ಯಾಹ್ನದ ವೇಳೆಗೆ ಸಾರಿಗೆ ವ್ಯವಸ್ಥೆ ಸಾಮಾನ್ಯ ಸ್ಥಿತಿಗೆ ಮರಳಿದ್ದು, ಗಾಯಗೊಂಡವರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಸ್ಪಷ್ಟ ನಿಯಮಗಳು ಮತ್ತು ಸಡಿಲ ಸುರಕ್ಷತಾ ಮಾನದಂಡಗಳಿಂದಾಗಿ ಚೀನಾದಲ್ಲಿ ಕೈಗಾರಿಕಾ ಅಪಘಾತಗಳು ಸಾಮಾನ್ಯವಾಗಿದೆ.



### ಚೀನಾಗೆ ಮತ್ತೊಂದು ಆಘಾತ

**ಹಾಂಗ್‌ಕಾಂಗ್‌ನಲ್ಲಿ ಅಗ್ನಿ ಅವಘಡ:** ಈ ಘಟನೆ ಸಂಭವಿಸುವ ಕೆಲವೇ ಗಂಟೆಗಳ ಮೊದಲು ಹಾಂಗ್‌ಕಾಂಗ್‌ನಲ್ಲಿ ತೈ ಪೊ ಜಿಲ್ಲೆಯಲ್ಲಿ ಸುಮಾರು 2,000 ಅಪಾರ್ಟ್‌ಮೆಂಟ್‌ಗಳನ್ನು ಹೊಂದಿರುವ ಎಂಟು ಕಟ್ಟಡಗಳ ಸಂಕೀರ್ಣದಲ್ಲಿ ಬುಧವಾರ ಸಂಭವಿಸಿದ ಅಗ್ನಿ ಅವಘಡದಲ್ಲಿ ಸುಮಾರು 44 ಜನರು ಜನರು ಸಾವನ್ನಪ್ಪಿದ್ದು, ನೂರಾರು ಜನರು ನಾಪತ್ತೆಯಾಗಿದ್ದಾರೆ. ಅವಘಡ ನಡೆದ ನಂತರ ಸುಮಾರು 900 ಜನರನ್ನು ಕಟ್ಟಡದಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ ಎಂದು ಹಾಂಗ್ ಕಾಂಗ್ ಮುಖ್ಯ ಕಾರ್ಯನಿರ್ವಾಹಕ ಜಾನ್ ಲೀ ಕಾ-ಚಿಯು ಮಾಹಿತಿ ನೀಡಿದ್ದಾರೆ. ಇನ್ನು, ಈ ಘಟನೆಗೆ ಸಂಬಂಧಿಸಿದಂತೆ ಹಾಂಗ್‌ಕಾಂಗ್ ಪೊಲೀಸರು ತನಿಖೆ ಆರಂಭಿಸಿದ್ದು, ನಿರ್ಲಕ್ಷ್ಯದ ಆರೋಪದ ಮೇಲೆ ಕಟ್ಟಡದ ನಿರ್ವಹಣಾ ಕಾರ್ಯವನ್ನು ನಿರ್ವಹಿಸುತ್ತಿದ್ದ ಮೂವರು ಶಂಕಿತರನ್ನು ಬಂಧಿಸಿದ್ದಾರೆ.

### ಚೀನಾ ಇತಿಹಾಸದಲ್ಲಿ 60 ವರ್ಷಗಳ ನಂತರ ನಡೆದ ಭೀಕರ ಅಪಘಾತ

ಚೀನಾ ಅಧಿಕಾರಿಗಳ ಪ್ರಕಾರ, ಹಾಂಗ್‌ಕಾಂಗ್‌ನಲ್ಲಿ ನಡೆದಿರುವ ಅಗ್ನಿಅವಘಡ ಸುಮಾರು 60 ವರ್ಷಗಳ ನಂತರ ಸಂಭವಿಸಿರುವ ಅತ್ಯಂತ ಭೀಕರ ಅಪಘಾತವಾಗಿದೆ. ಈ ಹಿಂದೆ ಆಗಸ್ಟ್ 2, 1962 ರಂದು ಕೌಲೂನ್‌ನ ಶಾಮ್ ಶೂಯಿ ಪೊ ನೆರೆಹೊರೆಯಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ 44 ಜನರು ಸಾವನ್ನಪ್ಪಿದ್ದರು. ಇದಕ್ಕೂ ಮೊದಲು, ಸೆ. 22, 1948 ರಂದು ವಿಂಗ್ ಆನ್ ಕಂಪನಿಯ ಗೋದಾಮಿನಲ್ಲಿ ಸಂಭವಿಸಿದ ಬೆಂಕಿಯಲ್ಲಿ 176 ಜನರು ಸಾವನ್ನಪ್ಪಿದ್ದರು ಎಂದು ವರದಿಯಾಗಿದೆ.

# ಪಾಕ್ ಹೆಚ್ಚು ಶಸ್ತ್ರಾಸ್ತ್ರ ಖರೀದಿಸುತ್ತಿದೆ: ಸ್ವಾಮಿನಾಥನ್

**ಮುಂಬೈ:** ಕಳೆದ ಮೇ ತಿಂಗಳಲ್ಲಿ ನಡೆದ ಆಪರೇಷನ್ ಸಿಂಧೂರ್ ನಂತರ, ಪಾಕಿಸ್ತಾನವು ಪ್ರಪಂಚದಾದ್ಯಂತ ಶಸ್ತ್ರಾಸ್ತ್ರಗಳನ್ನು ಖರೀದಿಸುತ್ತಿರುವುದು ಕಳವಳಕಾರಿ ವಿಷಯವಾಗಿದೆ, ಆದರೆ ಚೀನಾ ತನ್ನ ಹೆಚ್ಚುತ್ತಿರುವ ದೃಢನಿಶ್ಚಯದ ನಡುವೆಯೂ ಸಹ ನಿರಂತರ ಸವಾಲಾಗಿ ಉಳಿದಿದೆ ಎಂದು ವೈಸ್ ಅಡ್ಮಿರಲ್ ಕೆ ಸ್ವಾಮಿನಾಥನ್ ಹೇಳಿದ್ದಾರೆ.

ಮುಂಬೈನಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ನಿರ್ಣಾಯಕ ಪಶ್ಚಿಮ ನೌಕಾ ಕಮಾಂಡ್‌ನ ಮುಖ್ಯಸ್ಥರಾಗಿರುವ ಹಿರಿಯ ಅಧಿಕಾರಿ, ಚೀನಾ ನೌಕಾಪಡೆಯು ಈಗಾಗಲೇ ವಿಶ್ವದಲ್ಲೇ ಅತಿ ದೊಡ್ಡದಾಗಿದೆ, ಕಳೆದ ದಶಕದಲ್ಲಿ ಭಾರತೀಯ ನೌಕಾಪಡೆಯ ಗಾತ್ರಕ್ಕೆ ನೌಕಾಪಡೆಯನ್ನು ಸೇರಿಸಿದೆ ಮತ್ತು ಹಿಂದೆಂದೂ ಇಲ್ಲದ ರೀತಿಯಲ್ಲಿ ವಿಸ್ತರಿಸುತ್ತಿದೆ ಎಂದು ತಿಳಿಸಿದ್ದಾರೆ.

ಬ್ರಹ್ಮ ಸಂಶೋಧನಾ ಪ್ರತಿಷ್ಠಾನವು ಇಲ್ಲಿ ಆಯೋಜಿಸಿದ್ದ ಭದ್ರತಾ ಸಮ್ಮೇಳನದಲ್ಲಿ ಮಾತನಾಡುತ್ತಿದ್ದರು. ಐದನೇ, ಆರನೇ ತಲೆಮಾರಿನ ಯುದ್ಧವಿಮಾನಗಳ ಪ್ರದರ್ಶನದೊಂದಿಗೆ ಚೀನಾ ನೌಕಾಪಡೆಯ ಮೂರನೇ ವಿಮಾನವಾಹಕ ನೌಕೆಯಾದ ಫ್ಯೂಜಿಯಾನ್ ಅನ್ನು ನಿಯೋಜಿಸುವುದು ಕಮ್ಯುನಿಸ್ಟ್ ರಾಷ್ಟ್ರದ ಜಾಗತಿಕ ಕಾರ್ಯತಂತ್ರದ ನಿರೂಪಣೆ ಮತ್ತು ಸಿಗ್ನಲಿಂಗ್‌ನ ಭಾಗವಾಗಿದೆ ಎಂದು ವೈಸ್ ಅಡ್ಮಿರಲ್ ಸ್ವಾಮಿನಾಥನ್ ಗಮನಿಸಿದರು. ಚೀನಾ, ನಮಗೆ ಕಳವಳಕಾರಿಯಾಗಿ, ಹಿಂದೂ ಮಹಾಸಾಗರ ಪ್ರದೇಶದಲ್ಲಿ ಐದರಿಂದ ಎಂಟು ಹಡಗುಗಳನ್ನು ನಿರ್ವಹಿಸುವುದನ್ನು ಮುಂದುವರೆಸಿದೆ ಎಂದು ಅವರು ಹೇಳಿದರು.

ಈ ಗುಂಪಿನಲ್ಲಿ ಯುದ್ಧನೌಕೆಗಳು, ಸಂಶೋಧನಾ ಹಡಗುಗಳು, ಉಪಗ್ರಹ ಟ್ರ್ಯಾಕಿಂಗ್ ಹಡಗುಗಳು, ಮೀನುಗಾರಿಕೆ ಕರಕುಶಲ ವಸ್ತುಗಳು ಸೇರಿವೆ ಎಂದು ಅಧಿಕಾರಿ ಗಮನಸೆಳೆದರು. ದಕ್ಷಿಣ ಚೀನಾ ಸಮುದ್ರದಲ್ಲಿ ಮಾತ್ರವಲ್ಲದೆ ಹಿಂದೂ ಮಹಾಸಾಗರ ಪ್ರದೇಶದಲ್ಲೂ ಚೀನಾ ಹೆಚ್ಚು ದೃಢನಿಶ್ಚಯವನ್ನು ಹೊಂದುತ್ತಿದೆ. ಆದ್ದರಿಂದ, ಚೀನಾ ನಿರಂತರ ಸವಾಲಾಗಿ ಮುಂದುವರಿಯುತ್ತದೆ ಎಂದು ಅವರು ಹೇಳಿದರು.

ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನ, ಪಿಓಕೆಯಲ್ಲಿನ ಭಯೋತ್ಪಾದಕ ಕೇಂದ್ರಗಳನ್ನು, ನಂತರ ನೆರೆಯ ದೇಶದಲ್ಲಿನ ಅನೇಕ ವಾಯುನೆಲೆಗಳನ್ನು ಗುರಿಯಾಗಿಸಿಕೊಂಡ ಆಪರೇಷನ್ ಸಿಂಧೂರ್ ಒಂದು ಗಮನಾರ್ಹವಾದ ತಿರುವು ಬಿಂದುವಾಗಿದೆ ಮತ್ತು ಇಸ್ಲಾಮಾಬಾದ್‌ನೊಂದಿಗಿನ ನವದೆಹಲಿಯ ಸಂಬಂಧದಲ್ಲಿ ಹೊಸ ಸಾಮಾನ್ಯತೆಯನ್ನು ಸ್ಥಾಪಿಸಿದೆ ಎಂದು ನೌಕಾಪಡೆಯ ಅಧಿಕಾರಿ ಹೇಳಿದರು.

ಏಪ್ರಿಲ್‌ನಲ್ಲಿ ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತೀಯ ಮಿಲಿಟರಿ ಕಾರ್ಯಾಚರಣೆ ನಡೆಸಲಾಯಿತು, ಇದರಲ್ಲಿ 26 ಜನರು ಸಾವನ್ನಪ್ಪಿದರು, ಅವರಲ್ಲಿ ಹೆಚ್

# ಸೃಜನ್ ಲೋಕೇಶ್ ನಿರ್ದೇಶನ GST ಈ ವಾರ ತೆರೆಗೆ

ನಾಯಕಿಯಾಗಿ ರಜನಿ ಭಾರದ್ವಾಜ್

GST ಚಿತ್ರ ಈ ವಾರ ಬಿಡುಗಡೆಯಾಗುತ್ತಿದೆ. GST ಚಿತ್ರ ಹಲವು ವಿಶೇಷತೆಗಳನ್ನೊಳಗೊಂಡಿದೆ. ಈ ಚಿತ್ರದಲ್ಲಿ ನಿರ್ಮಾಪಕ ಸಂದೇಶ್ ಅವರು ಪ್ರಮುಖಪಾತ್ರದಲ್ಲಿ ನಟಿಸಿದ್ದಾರೆ. ಅವರ ಪಾತ್ರ ಏನೆಂಬುದ್ದನ್ನು ನಿರ್ದೇಶಕ ಸೃಜನ್ ಲೋಕೇಶ್ ಗುಪ್ತವಾಗಿಟ್ಟಿದ್ದಾರೆ. ಇನ್ನು ಈ ಚಿತ್ರದಲ್ಲಿ ಗಿರಿಜಾ ಲೋಕೇಶ್, ಸೃಜನ್ ಲೋಕೇಶ್ ಹಾಗೂ ಸೃಜನ್ ಅವರ ಪುತ್ರ ಸುಕೃತ್ ಮೂರು ಜನ ಅಭಿನಯಿಸಿದ್ದಾರೆ. ಅಜ್ಜಿ, ಮಗ ಹಾಗೂ ಮೊಮ್ಮಗ ಮೂರು ಜನರನ್ನು ಒಟ್ಟಿಗೆ ತೆರೆಯ ಮೇಲೆ ಈ ಚಿತ್ರದಲ್ಲಿ ನೋಡಬಹುದು. ತಮ್ಮ ನಿರ್ದೇಶನದ ಮೊದಲ ಚಿತ್ರದಲ್ಲೇ ಸೃಜನ್ ತಮ್ಮ ತಾಯಿ ಹಾಗೂ ಮಗನಿಗೆ ಆಕ್ಷನ್ ಕಟ್ ಹೇಳಿದ್ದಾರೆ. ಮನೋರಂಜನೆಯೇ ಪ್ರಧಾನವಾಗಿರುವ GST ಚಿತ್ರಕ್ಕೆ ಫೋಸ್ಟ್ ಇನ್ ಟ್ರಬಲ್ ಎಂಬ ಅಡಿಬರಹವಿದೆ.

ಸೃಜನ್ ಲೋಕೇಶ್ ಅವರಿಗೆ ನಾಯಕಿಯಾಗಿ ರಜನಿ ಭಾರದ್ವಾಜ್ ನಟಿಸಿದ್ದಾರೆ. ಪ್ರಮೋದ್ ಶೆಟ್ಟಿ, ಗಿರಿಜಾ ಲೋಕೇಶ್, ಶೋಭ್ ರಾಜ್, ಶರತ್ ಲೋಹಿತಾಶ್ವ, ನಿವೇದಿತಾ, ಅರವಿಂದ್ ರಾವ್, ತಬಲ ನಾಣಿ, ರವಿಶಂಕರ್ ಗೌಡ, ವಿನೋದ್ ಗೊಬ್ಬರಗಾಲ, ಮಾಸ್ಟರ್ ಸುಕೃತ್ ಮುಂತಾದವರು ಈ ಸಿನಿಮಾದ ತಾರಾಬಳಗದಲ್ಲಿದ್ದಾರೆ.

ಚಂದನ್ ಶೆಟ್ಟಿ ಸಂಗೀತ ನಿರ್ದೇಶನ ಹಾಗೂ ಗುಂಡ್ಲುಪೇಟೆ ಸುರೇಶ್ ಅವರ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ರಾಜಶೇಖರ್ ಸಂಭಾಷಣೆ ಬರೆದಿದ್ದಾರೆ. ತೇಜಸ್ವಿ ಕೆ ನಾಗ್ ಈ ಚಿತ್ರದ ಸಹ ನಿರ್ದೇಶಕರು.

# ಪಾಠಶಾಲಾ ಈ ವಾರ ತೆರೆಗೆ

ಇದು ಬರೀ ಮಕ್ಕಳ ಚಿತ್ರವಲ್ಲ

MS SQUARE MOVIES ಲಾಂಛನದಲ್ಲಿ ನಾನು ಹಾಗೂ ನನ್ನ ಪತ್ನಿ ಪ್ರೀತಿ ಈ ಚಿತ್ರವನ್ನು ನಿರ್ಮಾಣ ಮಾಡಿದ್ದೇವೆ. ಹತ್ತಕ್ಕೂ ಅಧಿಕ ಸ್ನೇಹಿತರ ಸಹ ನಿರ್ಮಾಣ ಈ ಚಿತ್ರಕ್ಕಿದೆ. ತೀರ್ಥಹಳ್ಳಿ ತಾಲ್ಲೂಕಿನಲ್ಲೇ ಹೆಚ್ಚಿನ ಚಿತ್ರೀಕರಣ ಮಾಡಿದ್ದೇವೆ. ನಲವತ್ತಕ್ಕೂ ಆಧಿಕ ಮಕ್ಕಳು ಈ ಚಿತ್ರದಲ್ಲಿ ನಟಿಸಿದ್ದಾರೆ. ಮಕ್ಕಳಿಗೆ ತರಭೇತಿ ನೀಡಿ ಆನಂತರ ಚಿತ್ರೀಕರಣ ಮಾಡಲಾಯಿತು. ತೀರ್ಥಹಳ್ಳಿ ಆಸುಪಾಸಿನ ಮಕ್ಕಳೇ ಇದರಲ್ಲಿ ನಟಿಸಿದ್ದಾರೆ. ಹಿರಿಯರಾದ ಬಾಲಾಜಿ ಮನೋಹರ್, ಸುಧಾಕರ್ ಬನ್ನಂಜೆ, ಕಿರಣ್ ನಾಯಕ್, ನಟನ ಪ್ರಶಾಂತ್ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. 80, 90 ರ ಕಾಲಘಟ್ಟದಲ್ಲಿ ಶಿಕ್ಷಕರ ಹಾಗೂ ಮಕ್ಕಳ ನಡುವೆ ಇದ್ದ ಸಂಬಂಧದ ಸುತ್ತಲ್ಲಿನ ಕಥಾಹಂದರವನ್ನು ಈ ಚಿತ್ರ ಹೊಂದಿದೆ. ಪಾಠಶಾಲಾ ಚಿತ್ರಕ್ಕೆ ಓದು ಅಥವಾ ಓಡೋಗು ಎಂಬ ಅಡಿಬರಹವಿದೆ. ಇದು ಬರೀ ಮಕ್ಕಳ ಚಿತ್ರವಲ್ಲ. ಎಲ್ಲಾ ವಯಸ್ಸಿನವರು ನೋಡಲೇಬೇಕಾದ ಚಿತ್ರ.

ನವೆಂಬರ್ 28 ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ಎಲ್ಲರೂ ನಮ್ಮ ಚಿತ್ರ ನೋಡಿ. ಪ್ರೋತ್ಸಾಹ ನೀಡಿ ಎಂದುಈ ಚಿತ್ರದ ನಿರ್ದೇಶಕ ಹೆದ್ದೂರ್ ಮಂಜುನಾಥ್ ಶೆಟ್ಟಿ ತಿಳಿಸಿದ್ದಾರೆ. ವಿಕಾಸ್ ವಸಿಷ್ಠ ಸಂಗೀತ ನಿರ್ದೇಶನ, ಜೀವನ್ ಗೌಡ ಛಾಯಾಗ್ರಹಣ ಹಾಗೂ ಉಮೇಶ್ ಆರ್ ಬಿ ಸಂಕಲನ ಈ ಚಿತ್ರಕ್ಕಿದೆ.

# ಕೊರಗಜ್ಜನ ಹಾಡಿಗೆ ದೈವ ರಕ್ತ

ಇತ್ತೀಚೆಗೆ ಜೀ ಮ್ಯೂಜಿಕ್ ಮೊತ್ತಮೊದಲ ಬಾರಿಗೆ ಕನ್ನಡದಲ್ಲಿ ಬಿಡುಗಡೆಗೊಳಿಸಿದ ಕೊರಗಜ್ಜ ಚಿತ್ರದ, ಜಾವೆದ್ ಆಲಿ ಮತ್ತು ಸುಧೀರ್ ಅತ್ತಾವರ್ ಹಾಡಿರುವ,ಗೋಪಿ ಸುಂದರ್ ಸಂಗೀತ ಮತ್ತು ಸುಧೀರ್ ಅತ್ತಾವರ್ ಸಾಹಿತ್ಯದ ಗುಳಿಗಾ...ಗುಳಿಗಾ...ಹಾಡಿನ ಅಬ್ಬರ ದೇಶದೆಲ್ಲೆಡೆ ಹಬ್ಬಿ ಹವಾ ಎಬ್ಬಿಸುತ್ತಿರುವಂತೆಯೇ, ಭಯಂಕರ ಉಗ್ರ ರೂಪದ ಕಾರಣಿಕದ ಗುಳಿಗದೈವ ಈ ಹಾಡಿನಿಂದ ಕ್ರೋಧ ಗೊಂಡಿರಬಹುದೇ ಅಥವ ದೈವಕ್ಕೆ ಅಪಚಾರಾಗಿರಬಹುದೇ ಎಂಬ ಎಂಬ ಸಂಶಯದಿಂದ ಇಂದು ನಿರ್ದೇಶಕ ಸುಧೀರ್ ಅತ್ತಾವರ್ ರವರು ಕೇರಳದ ತ್ರಿಶೂರ್ ನಲ್ಲಿರುವ ಮಂಗಳೂರು ಮೂಲದ ಪ್ರಸಿದ್ಧ ಜ್ಯೋತಿಷ್ಯ ವಿಧ್ವಾನ್ ವರುಣ್ ಭಟ್ ರವರಲ್ಲಿ ಪ್ರಶ್ನೆ ಇಟ್ಟು ಕೇಳಿದಾಗ: ಚಿಂತನ-ಮಂತನ ನಡೆಸಿ ;ವೃಶ್ಚಿಕ ರಾಶಿ,ಒಂಭತ್ತರಲ್ಲಿ ಗುರು, ಐದರಲ್ಲಿ ಗುಳಿಗ, ಶನಿ ಎಲ್ಲಾ ಇರುವುದರಿಂದ...ಗುಳಿಗನಿಗೆ ಸಂಪೂರ್ಣ ತೃಪ್ತಿ, ಸಂತೋಷ ಎಲ್ಲಾ ಇದೆ.ಕೊರಗಜ್ಜನಿಗೂ ಸಂತೋಷವಿದೆ, ದೇವರ ಆಶಿರ್ವಾದವೂ ಇದೆ ಎಂಬ ವಿಚಾರ ತಿಳಿದು ಬಂತು.

ಗುಳಿಗಾ ..ಗುಳಿಗಾ ಹಾಡಿನ ಬಗ್ಗೆ

ಸೋಷಿಯಲ್ ಮೇಡಿಯಾದಲ್ಲಿ ಪರ-ವಿರೋಧ ಚರ್ಚೆಕೂಡಾ ಜೋರಾಗಿ ಸಾಗುತ್ತಿದೆ. ಇನ್ನು ಕೆಲವು ವಿಕೃತ ಮನಸ್ಥಿತಿಯವರಂತೂ ನಿರ್ದೇಶಕರಿಗೆ ಸೇರಿ ಚಿತ್ರತಂಡಕ್ಕೆ ಉರಿ ಶಾಪಹಾಕುವ ಕಮೆಂಟ್ ಗಳನ್ನು ಪೋಸ್ಟ್ ಮಾಡಿದ್ದಾರೆ.ಅಲ್ಲದೆ ಗುಳಿಗ ದೈವವೇ ರಕ್ತ ಕಾರಿ ಸಾಯಿಸುತ್ತದೆ ಎಂಬಿತ್ಯಾದಿ ವಿಕೃತ ಮನಸ್ಸಿನಿಂದ, ಮತ್ಸರದಿಂದ ಕಮೆಂಟ್ ಗಳನ್ನು ಹಾಕುತ್ತಿದ್ದಾರೆ.



ಸಿನಿ ವಾಹಿನಿ

# ನಾಯಿ ಇದೆ ಎಚ್ಚರಿಕೆ ಈ ವಾರ ತೆರೆಗೆ

ನಾಯಿ ಸಾಕಿರುವವರ ಮನೆಯ ಮುಂದೆ ಸಾಮಾನ್ಯವಾಗಿ ಕಾಣುವ ಪದ ನಾಯಿ ಇದೆ ಎಚ್ಚರಿಕೆ. ಈಗ ಇದೇ ಚಿತ್ರದ ಶೀರ್ಷಿಕೆಯಾಗಿದೆ. ಚಿತ್ರಕ್ಕೆ ಈ ಶೀರ್ಷಿಕೆ ಏಕೆ ಎಂಬದನ್ನು ಸಿನಿಮಾದಲ್ಲೇ ನೋಡಬೇಕು.

ಲಾವಣ್ಯ ಗದೆ ಅವರು ನಿರ್ಮಾಣ ಮಾಡಿರುವ ಈ ಚಿತ್ರದ ನಾಯಕನಾಗಿ ವೃತ್ತಿಯಲ್ಲಿ ವೈದ್ಯರಾಗಿರುವ ಡಾ.ಲಿಲಾಮೋಹನ್ ಪಿವಿಆರ್ ಅಭಿನಯಿಸಿದ್ದಾರೆ. ಕಲಿ ಗೌಡ ಅವರು ನಿರ್ದೇಶಿಸಿದ್ದಾರೆ.

ನನಗೂ ಚಿತ್ರರಂಗಕ್ಕೂ ಹದಿನೈದು ವರ್ಷಗಳ ನಂಟು. ಈ ಹಿಂದೆ ತನಿಖೆ ಎಂಬ ಚಿತ್ರ ನಿರ್ದೇಶನ ಮಾಡಿದ್ದ ನನಗೆ ಇದು ಎರಡನೇ ನಿರ್ದೇಶನದ ಚಿತ್ರ. ಹಾರಾರ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ನಾಯಿ ಇದೆ ಎಚ್ಚರಿಕೆ ಚಿತ್ರ ಶೀರ್ಷಿಕೆಯಲ್ಲಿ ಎಷ್ಟು ಕುತೂಹಲ ಮೂಡಿಸಿದೆಯೊ, ಅಷ್ಟೇ ಕುತೂಹಲ ಸಿನಿಮಾದಲ್ಲೂ ಇರುತ್ತದೆ. ಯಾರು ಊಹಿಸದ ರೋಚಕ ಸನ್ನಿವೇಶಗಳು ಈ ಚಿತ್ರದ ಹೈಲೆಟ್. ನಾಯಿ ನೀಯತ್ತಿನ ಪ್ರಾಣಿ ಎಂದು ಎಲ್ಲರಿಗೂ ಗೊತ್ತು. ಅದು ಬದುಕಿದಾಗಷ್ಟೇ ಅಲ್ಲ. ಸತ್ತ ಮೇಲೂ ಅದರ ನೀಯತ್ತು ಕಡಿಮೆ ಆಗಲ್ಲ ಎಂಬದನ್ನು ನಮ್ಮ ಚಿತ್ರದ ಮೂಲಕ ತೋರಿಸಿದ್ದೇವೆ. ಟೀಸರ್, ಟ್ರೇಲರ್ ಹಾಗೂ ಹಾಡುಗಳು ಈಗಾಗಲೇ ಜನರ ಮನ ಗೆದ್ದಿದೆ.

# ಓಎಲ್‌ಸಿ ಈ ವಾರ ತೆರೆಗೆ

ಕವೀಶ್ ಶೆಟ್ಟಿ ಮತ್ತು ಮೇಘ ಶೆಟ್ಟಿ ಕಾಂಬಿನೇಷನ್ನಿನ ಕನ್ನಡ, ಮರಾಠಿ, ಹಿಂದಿ, ತೆಲುಗು, ತಮಿಳು ಹಾಗೂ ಮಲಯಾಳಂ ಭಾಷೆಗಳಲ್ಲಿ ನಿರ್ಮಾಣವಾಗಿರುವ 'ಓ.ಎಲ್.ಸಿ' (ಆಪರೇಷನ್ ಲಂಡನ್ ಕೆಫೆ) ಚಿತ್ರ ನವೆಂಬರ್ 28ರಂದು ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಬಿಡುಗಡೆಗೂ ಪೂರ್ವದಲ್ಲಿ ಆಯೋಜಿಸಲಾಗಿದ್ದ ಪ್ರೀ ರಿಲೀಸ್ ಇವೆಂಟ್ ನಲ್ಲಿ ಹಿರಿಯ ನಿರ್ದೇಶಕ ಶಶಾಂಕ್ ।ವಿ.ನಾಗೇಂದ್ರಪ್ರಸಾದ್ ಬರೆದಿರುವ ವೆಲ್ಕಮ್ ಟು ಜಂಗಲ್ ಹಾಡು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಮೊದಲು ಮಾತನಾಡಿದ ನಿರ್ದೇಶಕ ಸಡಗರ ರಾಘವೇಂದ್ರ, ನಾನು ಶಶಾಂಕ್ ಅವರ ಜೊತೆಗೆ ಸಹ ನಿರ್ದೇಶಕನಾಗಿ ಕೆಲಸ ಮಾಡಿದ್ದೇನೆ. ಓ.ಎಲ್.ಸಿ ನನ್ನ ಮೊದಲ ನಿರ್ದೇಶನದ ಚಿತ್ರ. ಈ ಚಿತ್ರದ ನಾಯಕನಾಗಿ ನಟಿಸಿರುವ ಕವೀಶ್ ಶೆಟ್ಟಿ ನಟಿಸಿದ್ದಾರೆ. ನಾಯಕಿಯಾಗಿ ಮೇಘ ಶೆಟ್ಟಿ ಅಭಿನಯಿಸಿದ್ದಾರೆ. ಮರಾಠಿ ಭಾಷೆಯ ಶಿವಾನಿ ಪ್ರಮುಖಪಾತ್ರದಲ್ಲಿದ್ದಾರೆ. ಇನ್ನೂ, ನಿರ್ಮಾಪಕರು ಯಾವುದೇ ಕೊರತೆ ಬಾರದ ಹಾಗೆ ಸಿನಿಮಾ ಮಾಡಿದ್ದಾರೆ. ಚಿತ್ರ ಚೆನ್ನಾಗಿ ಬರಲು ಚಿತ್ರತಂಡದ ಸದಸ್ಯರು ಸಹಕಾರ ನೀಡಿದ್ದಾರೆ. ಇದೊಂದು ನಕ್ಸಲಿಸಂ ಬೇಸಾಗಿಟ್ಟಿಕೊಂಡು ಹೆಣೆದಿರುವ ಕಥೆ. ಹಾಗಂತ ನಕ್ಸಲಿಸಂನ ವೈಭವಿಕರಿಸಿಲ್ಲ. ಯಾವುದೇ ಒಬ್ಬ ವ್ಯಕ್ತಿಯ ಕುರಿತಾದ ಚಿತ್ರವೂ ಇದಲ್ಲ. ಇದು ಆಫ್ಟರ್ ಆಪರೇಷನ್ ಲಂಡನ್ ಕೆಫೆ. ಕನ್ನಡ ಹಾಗೂ ಮರಾಠಿ ಎರಡೂ ಭಾಷೆಯಲ್ಲಿ ನೇರವಾಗಿ ಚಿತ್ರೀಕರಣ ಮಾಡಲಾಗಿದೆ. ಉಳಿದಂತೆ ಹಿಂದಿ, ತೆಲುಗು, ತಮಿಳು ಹಾಗೂ ಮಲೆಯಾಳಂನಲ್ಲೂ ಚಿತ್ರ ಬಿಡುಗಡೆಯಾಗಲಿದೆ. ಕನ್ನಡ ಕಲಾವಿದರು ಮರಾಠಿ ಕಲಿತು, ಮರಾಠಿ ಕಲಾವಿದರು ಕನ್ನಡ ಕಲಿತು ಅಭಿನಯಿಸಿರುವುದು ಈ ಚಿತ್ರದ ವಿಶೇಷ. ಮೊದಲು ಕನ್ನಡದಲ್ಲಿ ನವೆಂಬರ್ 28 ರಂದು ಕನ್ನಡದಲ್ಲಿ ಮಾತ್ರ ಚಿತ್ರ ಬಿಡುಗಡೆಯಾಗಲಿದೆ ಎಂದರು. ಮುಂಗಾರು ಮಳೆ 2 ಚಿತ್ರದಲ್ಲಿ ಶಶಾಂಕ್ ಅವರ ಜೊತೆಗೆ ನಾನು ಸಹಾಯಕ ನಿರ್ದೇಶಕನಾಗಿ ಹಾಗೂ ಸಡಗರ ರಾಘವೇಂದ್ರ ಅವರು ಸಹ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಿದ್ದೆವು. ಈ ಚಿತ್ರಕ್ಕೆ ನಾನೇ ಕಥೆ ಬರೆದು, ನಾಯಕನಾಗೂ ನಟಿಸಿದ್ದೇನೆ ಎಂದು ಕವೀಶ್ ಶೆಟ್ಟಿ ತಿಳಿಸಿದರು.

# 4ನೇ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್

ವಿಶ್ವದ ಅತಿದೊಡ್ಡ ಮಹಿಳಾ ಕ್ರಿಕೆಟ್ ಲೀಗ್‌ಗಳಲ್ಲಿ ಒಂದಾದ ಮಹಿಳಾ ಪ್ರೀಮಿಯರ್ ಲೀಗ್ 2026ರ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ದೆಹಲಿಯಲ್ಲಿ ನಡೆಯುತ್ತಿರುವ ಮೆಗಾ ಹರಾಜಿಗೆ ಸ್ವಲ್ಪ ಮೊದಲು ಬಿಸಿಸಿಐ ನಾಲ್ಕನೇ ಆವೃತ್ತಿಯ ಈ ಲೀಗ್‌ನ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಈ ಬಾರಿಯ ಪಂದ್ಯಾವಳಿಯನ್ನು ನವಿ ಮುಂಬೈ ಮತ್ತು ವಡೋದರಾದಲ್ಲಿ ನಡೆಸಲಾಗುವುದು ಎಂದು ಬಿಸಿಸಿಐ ಘೋಷಿಸಿದೆ. ವೇಳಾಪಟ್ಟಿಯ ಪ್ರಕಾರ ಮಹಿಳಾ ಪ್ರೀಮಿಯರ್ ಲೀಗ್ ಜನವರಿ 9ರಂದು ಪ್ರಾರಂಭವಾಗಲಿದ್ದು, ಫೈನಲ್ ಪಂದ್ಯ ಫೆಬ್ರವರಿ 5 ರಂದು ನಡೆಯಲಿದೆ. ಮೊದಲ ಪಂದ್ಯ ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ನಡೆದರೆ, ಪ್ರಶಸ್ತಿ ಪಂದ್ಯ ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ನಡೆಯಲಿದೆ.

ಯಶಸ್ವಿಯಾಗಿ ನಡೆದಿವೆ 3 ಆವೃತ್ತಿಗಳು

ಭಾರತದ ವಿಶ್ವಕಪ್ ಗೆಲುವಿನ ನಂತರ, ಮಹಿಳಾ ಪ್ರೀಮಿಯರ್ ಲೀಗ್ ಇನ್ನಷ್ಟು ಜನಪ್ರಿಯವಾಗುವ ನಿರೀಕ್ಷೆಯಿದೆ.

ಕಳೆದ ಮೂರು ಸೀಸನ್‌ಗಳಲ್ಲಿ ಈ ಪಂದ್ಯಾವಳಿಯ ಜನಪ್ರಿಯತೆ ಸ್ಥಿರವಾಗಿ ಬೆಳೆಯುತ್ತಿದೆ. 2023 ರ ಮಹಿಳಾ ಪ್ರೀಮಿಯರ್ ಲೀಗ್‌ನ ಮೊದಲ ಸೀಸನ್ ಅನ್ನು ಮುಂಬೈ ಇಂಡಿಯನ್ಸ್ ಗೆದ್ದುಕೊಂಡರೆ, ಆ ಬಳಿಕ ಅಂದರೆ 2024 ರಲ್ಲಿ ನಡೆದ ಎರಡನೇ ಆವೃತ್ತಿಯಲ್ಲಿ ಆರ್‌ಸಿಬಿ ಚಾಂಪಿಯನ್ ಆಗಿತ್ತು. ಹಾಗೆಯೇ 2025 ರಲ್ಲಿ ನಡೆದ ಮೂರನೇ ಆವೃತ್ತಿಯಲ್ಲಿ ಮುಂಬೈ ಇಂಡಿಯನ್ಸ್ ಮತ್ತೆ ಚಾಂಪಿಯನ್ ಆಯಿತು. ಈ ಬಾರಿ ಯಾವ ತಂಡ ಗೆಲ್ಲುತ್ತದೆ ಎಂಬುದನ್ನು ನೋಡಲು ಆಸಕ್ತಿದಾಯಕವಾಗಿರುತ್ತದೆ.

**ದೀಪ್ತಿ ಮೇಲೆ ಹಣದ ಮಳೆ**

ಮಹಿಳಾ ಪ್ರೀಮಿಯರ್ ಲೀಗ್ ವೇಳಾಪಟ್ಟಿ ಘೋಷಣೆಯಾದ ನಂತರ, ಮೆಗಾ ಹರಾಜು ಪ್ರಾರಂಭವಾಗಿದ್ದು, ಭಾರತದ ವಿಶ್ವಕಪ್ ವಿಜೇತ ಆಲ್‌ರೌಂಡರ್ ದೀಪ್ತಿ ಶರ್ಮಾಗೆ ಭಾರಿ ಬಿಡ್ ನಡೆಯಿತು. ಡೆಲ್ಲಿ ಕ್ಯಾಪಿಟಲ್ಸ್ 3.2 ಕೋಟಿಗೆ ಖರೀದಿಸಲು ಪ್ರಯತ್ನಿಸಿತು, ಆದರೆ ಯುಪಿ ವಾರಿಯರ್ಸ್ ರೈಟ್ ಟು ಮ್ಯಾಚ್ ಕಾರ್ಡ್ ಬಳಸಿ ಮತ್ತೊಮ್ಮೆ ಅವರನ್ನು ತಂಡಕ್ಕೆ ಸೇರಿಸಿಕೊಂಡಿತು. ಕುತೂಹಲಕಾರಿಯಾಗಿ ದೀಪ್ತಿ ಶರ್ಮಾ ಕಳೆದ ಸೀಸನ್‌ನಲ್ಲಿ 2.6 ಕೋಟಿಗೆ ಇದೇ ತಂಡದಲ್ಲಿ ಆಡುತ್ತಿದ್ದರು. ಆದರೆ ಯುಪಿ ವಾರಿಯರ್ಸ್ ಅವರನ್ನು ಹರಾಜಿಗೂ ಮುನ್ನವೇ ಬಿಡುಗಡೆ ಮಾಡಿ ಈಗ ಹೆಚ್ಚುವರಿಯಾಗಿ 60 ಲಕ್ಷ ರೂ. ಪಾವತಿಸಿ ಅವರನ್ನು ಮತ್ತೆ ತಂಡಕ್ಕೆ ಸೇರಿಸಿಕೊಂಡಿದೆ. ಮತ್ತೊಂದೆಡೆ, ಗುಜರಾತ್ ಜೈಂಟ್ಸ್ ತಂಡವು ಸೋಫಿ ಡಿವೈನ್ ಅವರನ್ನು 2 ಕೋಟಿ ರೂ.ಗೆ ತಮ್ಮ ತಂಡಕ್ಕೆ ಸೇರಿಸಿಕೊಂಡಿದೆ.

# ಐಸಿಸಿ ರ‍್ಯಾಂಕಿಂಗ್ ಪ್ರಕಟ

ಐಸಿಸಿ ಏಕದಿನ ಬ್ಯಾಟರ್‌ಗಳ ನೂತನ ರ‍್ಯಾಂಕಿಂಗ್ ಪಟ್ಟಿಯನ್ನು ಪ್ರಕಟಿಸಿದೆ. ಈ ಬಾರಿಯ ಟಾಪ್-10 ಪಟ್ಟಿಯಲ್ಲಿ ಹಿಟ್‌ಮ್ಯಾನ್ ಖ್ಯಾತಿಯ ರೋಹಿತ್ ಶರ್ಮಾ ಅಗ್ರಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ. ಕಳೆದ ಬಾರಿ ನ್ಯೂಝಿಲೆಂಡ್ ಬ್ಯಾಟರ್ ಡೇರಿಲ್ ಮಿಚೆಲ್ ಅಗ್ರಸ್ಥಾನ ಅಲಂಕರಿಸಿದ್ದರು. ಆದರೆ ವೆಸ್ಟ್ ಇಂಡೀಸ್ ವಿರುದ್ಧದ 2 ಪಂದ್ಯಗಳಿಂದ ಹೊರಗುಳಿದ ಕಾರಣ ಇದೀಗ ಅವರ ಶ್ರೇಯಾಂಕದಲ್ಲಿ ಕುಸಿತವಾಗಿದೆ.

ಅದರಂತೆ ಟೀಮ್ ಇಂಡಿಯಾದ ಮಾಜಿ ನಾಯಕ ರೋಹಿತ್ ಶರ್ಮಾ ಐಸಿಸಿ ಏಕದಿನ ಬ್ಯಾಟರ್‌ಗಳ ನೂತನ ರ‍್ಯಾಂಕಿಂಗ್ ಪಟ್ಟಿಯಲ್ಲಿ ಮೊದಲ ಸ್ಥಾನಕ್ಕೇರಿದ್ದಾರೆ. ಹಿಟ್‌ಮ್ಯಾನ್ 781 ಅಂಕಗಳೊಂದಿಗೆ ಅಗ್ರಸ್ಥಾನವನ್ನು ಅಲಂಕರಿಸಿದ್ದು, ಸೌತ್ ಆಫ್ರಿಕಾ ವಿರುದ್ಧದ ಸರಣಿಯ ಮೂಲಕ ಮೊದಲ ಸ್ಥಾನವನ್ನು ಕಾಯ್ದುಕೊಳ್ಳಬಹುದು. ಇನ್ನು ದ್ವಿತೀಯ ಸ್ಥಾನದಲ್ಲಿ ನ್ಯೂಝಿಲೆಂಡ್‌ನ ಡೇರಿಲ್ ಮಿಚೆಲ್ ಕಾಣಿಸಿಕೊಂಡಿದ್ದಾರೆ. ಇಂಗ್ಲೆಂಡ್ ಮತ್ತು ವೆಸ್ಟ್ ಇಂಡೀಸ್ ವಿರುದ್ಧದ ಸರಣಿಗಳಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದ ಮಿಚೆಲ್ ಈ ಬಾರಿ 15 ಅಂಕಗಳ ಕುಸಿತ ಕಂಡಿದ್ದಾರೆ. ಅದರಂತೆ ಇದೀಗ 766 ಅಂಕಗಳೊಂದಿಗೆ ದ್ವಿತೀಯ ಸ್ಥಾನವನ್ನು ಅಲಂಕರಿಸಿದ್ದಾರೆ. ಮೂರನೇ ಸ್ಥಾನವನ್ನು ಅಫ್ಘಾನಿಸ್ತಾನದ ಯುವ ದಾಂಡಿಗ ಇಬ್ರಾಹಿಂ ಝುದ್ರಾನ್ ಅಲಂಕರಿಸಿದ್ದಾರೆ. ಬಾಂಗ್ಲಾದೇಶ್ ವಿರುದ್ಧದ ಸರಣಿಯಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದ ಝುದ್ರಾನ್ ಒಟ್ಟು 764 ಅಂಕಗಳೊಂದಿಗೆ ಐಸಿಸಿಯ ನೂತನ ಶ್ರೇಯಾಂಕ ಪಟ್ಟಿಯಲ್ಲಿ ಮೂರನೇ ಸ್ಥಾನ ಪಡೆದಿದ್ದಾರೆ. ನಾಲ್ಕನೇ ಸ್ಥಾನದಲ್ಲಿ ಭಾರತ ಏಕದಿನ ತಂಡದ ನಾಯಕ ಶುಭ್‌ಮನ್ ಗಿಲ್ ಇದ್ದಾರೆ. ಚಾಂಪಿಯನ್ ಟ್ರೋಫಿ ಟೂರ್ನಿಯ ಬೆನ್ನಲ್ಲೇ ಅಗ್ರಸ್ಥಾನಕ್ಕೇರಿದ್ದ ಗಿಲ್ ಆಸ್ಟ್ರೇಲಿಯಾ ಸರಣಿಯಲ್ಲಿ ವಿಫಲರಾಗಿದ್ದರು. ಅದರ ಪರಿಣಾಮ ಇದೀಗ 745 ಅಂಕಗಳೊಂದಿಗೆ ನಾಲ್ಕನೇ ಸ್ಥಾನಕ್ಕೆ ಕುಸಿದಿದ್ದಾರೆ. ಇನ್ನು ಐದನೇ ಶ್ರೇಯಾಂಕದಲ್ಲಿ ಕಾಣಿಸಿಕೊಂಡಿರುವುದು ವಿರಾಟ್ ಕೊಹ್ಲಿ. ಆಸ್ಟ್ರೇಲಿಯಾ ವಿರುದ್ಧದ ಸರಣಿಯ ಮೂರನೇ ಪಂದ್ಯದಲ್ಲಿ ಆಕರ್ಷಕ ಅರ್ಧಶತಕ ಸಿಡಿಸಿದ್ದ ಕೊಹ್ಲಿ ಏಕದಿನ ಬ್ಯಾಟರ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ಒಟ್ಟು 725 ಅಂಕಗಳೊಂದಿಗೆ ಐದನೇ ಸ್ಥಾನವನ್ನು ಅಲಂಕರಿಸಿದ್ದಾರೆ.

# ಈ ಬಾರಿ ಯಾರು ನಂಬರ್ 1 ಗೊತ್ತಾ

# 4ನೇ ಆವೃತ್ತಿಯ ಡಬ್ಲ್ಯೂಟೆಸಿ ಭಾರತ ಇನ್ನೆಷ್ಟು ಪಂದ್ಯ ಗೆಲ್ಲಬೇಕು

ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಗೆಲ್ಲುವ ಭಾರತದ ಕನಸು ಇನ್ನೂ ನೆರವೇರಿಲ್ಲ. ಈ ವರ್ಷ, ನಾಲ್ಕನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ನಡೆಯ